ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸತ್ಯಮೇವ ಜಯತೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 147 ಸಂಚಿಕೆ- 147 | PAGE-8 ಪುಟ-8 | ಭಾನುವಾರ 20.07.2025 | RS.2/- ಬೆಲೆ 2/-

# ಒಂದೇ ವೇದಿಕೆಗೆ ಚರ್ಚೆಗೆ ಬನ್ನಿ

# ಬಿಜೆಪಿ-ಜೆಡಿಎಸ್‌ಗೆ ಸಿಎಂ ಸವಾಲು

ಮಲ್ಲಮ್ಮ ನುಡಿ ವಾರ್ತೆ ಮೈಸೂರು:ಜು.19: ಜನರ ದಿಕ್ಕು ತಪ್ಪಿಸುವುದನ್ನು ನಿಲ್ಲಿಸಬೇಕಾದರೆ ನೀವು ಒಂದೇ ವೇದಿಕೆಗೆ ಚರ್ಚೆಗೆ ಬನ್ನಿ. ಅವರೇನೂ ಅಭಿವೃದ್ಧಿ ಮಾಡಿದ್ದಾರೆ. ನಾವೇನೂ ಅಭಿವೃದ್ಧಿ ಮಾಡಿದ್ದೇವೆ ಎಂದು ಚರ್ಚೆ ಮಾಡೋಣ ಎಂದು ಮುಖ್ಯಮಂತ್ರಿ

ಸಿದ್ದರಾಮಯ್ಯ ಅವರು ಶನಿವಾರ ಬಿಜೆಪಿ–ಜೆಡಿಎಸ್ ಬಹಿರಂಗ ಸವಾಲು ಹಾಕಿದರು.

ಇಂದು ಮೈಸೂರಿನಲ್ಲಿ ರಾಜ್ಯ ಸರ್ಕಾರದ ಎರಡು ವರ್ಷಗಳ ಸಾಧನಾ ಸಮಾವೇಶ ಮತ್ತು 2,578 ಕೋಟಿ ರೂಪಾಯಿಗಳ ಅಭಿವೃದ್ಧಿ ಕಾರ್ಯಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಸಿಎಂ, ಸಿದ್ದರಾಮಯ್ಯ ಶಕ್ತಿ ಪ್ರದರ್ಶನಕ್ಕಾಗಿ ಸಾಧನಾ ಸಮಾವೇಶ ಆಯೋಜನೆ ಮಾಡಿದ್ದಾರೆ ಎಂದು ಬಿಜೆಪಿ, ಜೆಡಿಎಸ್ ನವರು ಅಪಪ್ರಚಾರ ಮಾಡುತ್ತಿದ್ದಾರೆ ಎಂದರು.

ಬಿಜೆಪಿ ಜೆಡಿಎಸ್ ನವರು ನಮ್ಮ ಸಾಧನೆಯನ್ನು ಸಹಿಸಿಕೊಳ್ಳಲಾಗದೇ ಆರೋಪ ಮಾಡುತ್ತಿದ್ದಾರೆ. ಬಿಜೆಪಿ ಎಂದೂ ಸಹ ಸ್ವಂತ ಬಲದಿಂದ ಅಧಿಕಾರಕ್ಕೆ ಬಂದಿಲ್ಲ. ಆಪರೇಷನ್ ಕಮಲದ ಮೂಲಕವೇ ಬಿಜೆಪಿ ಅಧಿಕಾರಕ್ಕೆ ಬಂತು ಎಂದು ವಾಗ್ದಾಳಿ ನಡೆಸಿದರು.

ಇನ್ನೂ ಜೆಡಿಎಸ್ ವಿರುದ್ಧವೂ ತೀವ್ರ ವಾಗ್ದಾಳಿ ನಡೆಸಿದ ಸಿಎಂ, ಜೆಡಿಎಸ್ ಸ್ಥಾನಗಳು ಚುನಾವಣೆಯಿಂದ ಚುನಾವಣೆಗೆ ಕಡಿಮೆಯಾಗ್ತಿವೆ. ನಾನು



ಜೆಡಿಎಸ್ ನಲ್ಲಿದ್ದಾಗ 59 ಸ್ಥಾನ ಗೆದ್ದಿತ್ತು. ಈಗ 18ಕ್ಕೆ ಇಳಿದಿದ್ದೀರಿ. ಆ ನಂತರ ಜೆಡಿಎಸ್ ಏಕೆ ಹೆಚ್ಚು ಸ್ಥಾನ

ಗೆದ್ದಿಲ್ಲ ದೇವೇಗೌಡ್ರೇ? ಕುಮಾರಸ್ವಾಮಿಯವರೇ? ಜೆಡಿಎಸ್ ಇನ್ನೆಂದೂ ಅಧಿಕಾರಕ್ಕೆ ಬರೋದಿಲ್ಲ. ಬಿಜೆಪಿ ಜೆಡಿಎಸ್ ಒಂದಾಗಿದ್ದರೂ ನಮ್ಮನ್ನು ಸೋಲಿಸಲು ಸಾಧ್ಯವಿಲ್ಲ ಎಂದು ಸಿದ್ದರಾಮಯ್ಯ ಹೇಳಿದರು.

ಒಟ್ಟು 24 ಇಲಾಖೆಗಳ 74 ಕಾಮಗಾರಿಗಳಿಗೆ ಸಿಎಂ ಇಂದು ಚಾಲನೆ ನೀಡಿದ್ದು, ಚೆಸ್ಕಾಂ ಇಲಾಖೆಯ 408 ಕೋಟಿ, ರಸ್ತೆ ಅಭಿವೃದ್ಧಿ ಕಾಮಗಾರಿಗೆ 393 ಕೋಟಿ, ಅರಮನೆ ಮಾದರಿಯಲ್ಲಿ ನೂತನ ಬಸ್ ನಿಲ್ದಾಣ ನಿರ್ಮಾಣಕ್ಕೆ 120 ಕೋಟಿ, ವಿದ್ಯಾರ್ಥಿ ನಿಲಯಗಳಿಗೆ 108 ಕೋಟಿ, ಕ್ಯಾನ್ಸರ್ ಆಸ್ಪತ್ರೆ ಸೇರಿದಂತೆ ವಿವಿಧ ಆಸ್ಪತ್ರೆ ಕಟ್ಟಡಗಳ ನಿರ್ಮಾಣಕ್ಕೆ 175 ಕೋಟಿ, ವಸ್ತು ಪ್ರದರ್ಶನ ಪ್ರಾಧಿಕಾರಕ್ಕೆ 23 ಕೋಟಿ ಸೇರಿದಂತೆ ಹತ್ತು ಹಲವು ಕಾಮಗಾರಿಗಳಿಗೆ ಶಿಲಾನ್ಯಾಸ ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್,

ಕಾಂಗ್ರೆಸ್ ಅಧ್ಯಕ್ಷ ಹಾಗೂ ರಾಜ್ಯ ಸಭೆಯ

ವಿಪಕ್ಷನಾಯಕರಾದ ಮಲ್ಲಿಕಾರ್ಜುನ ಖರ್ಗೆ, ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಸಿ.ಮಹದೇವಪ್ಪ ಸೇರಿದಂತೆ ಹಲವು ಸಚಿವರು, ಸ್ಥಳೀಯ ಶಾಸಕರು, ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

## ಗುರುದ್ವಾರಕ್ಕೆ ಬಾಂಬ್ ಸ್ಫೋಟದ ಬೆದರಿಕೆ



ಮಲ್ಲಮ್ಮ ನುಡಿ ವಾರ್ತೆ ಬೀದರ. ಜು. 19 : ನಗರದ ಗುರುದ್ವಾರ ನಾನಕ ಝೀರಾದಲ್ಲಿ ಸರಣಿ ಬಾಂಬ್ ಸ್ಫೋಟ ಮಾಡುವುದಾಗಿ ಬೆದರಿಕೆ ಒಡ್ಡಿರುವ ಇಮೇಲ್ ಬಂದಿದೆ.

ಗುರುದ್ವಾರ ಪ್ರಬಂಧಕ ಕಮಿಟಿ ವಿಷಯವನ್ನು ಪೊಲೀಸರಿಗೆ ತಿಳಿಸಿದ ನಂತರ ಬಾಂಬ್ ನಿಷ್ಕ್ರಿಯ ದಳ, ಶ್ವಾನ ದಳ ಸೇರಿದಂತೆ 50ಕ್ಕೂ ಹೆಚ್ಚು ಪೊಲೀಸರು ಇಡೀ ಪರಿಸರವನ್ನು ಪರಿಶೀಲಿಸಿದರು.

ಈ ವೇಳೆ ಯಾವುದೇ ಬಾಂಬ್ ಅಥವಾ ಸ್ಫೋಟಕ ವಸ್ತು ಪತ್ತೆಯಾಗಿಲ್ಲ. ಆತಂಕ ಸೃಷ್ಟಿಸುವ ಉದ್ದೇಶದಿಂದ ಈ ರೀತಿ ಮಾಡಿರುವ ಸಾಧ್ಯತೆ ಇದೆ ಎಂದು ಪೊಲೀಸರು ತಿಳಿಸಿದ್ದಾರೆ.

’ಗುರುವಾರ (ಜು.18) ಎಂದಿನಂತೆ ನಾನು ಕಚೇರಿಗೆ ಬಂದು ಇಮೇಲ್ ನೋಡಿದಾಗ ಬಾಂಬ್ ಸ್ಫೋಟದ ಬೆದರಿಕೆಯ ಸಂದೇಶ ಬಂದಿದೆ. ಅದರ ಪ್ರಿಂಟ್‌ಔಟ್ ತೆಗೆದು–ಕೊಂಡು ಗುರುದ್ವಾರ ಪ್ರಬಂಧ ಕಮಿಟಿ ಅಧ್ಯಕ್ಷರು, ಪದಾಧಿಕಾರಿಗಳಿಗೆ ತಿಳಿಸಿದೆ. ಆನಂತರ ನೂತನ ನಗರ

(2ನೇ ಪುಟ ನೋಡಿ)

## ಜಿಲ್ಲೆಯಲ್ಲಿ ಮಾದರಿ ಕ್ರೀಡಾಂಗಣ ನಿರ್ಮಾಣ



ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:ಜು.19: ತಾಲೂಕಿನಲ್ಲಿ ನಿರ್ಮಾಣ ಮಾಡಲಾಗುತ್ತಿರುವ ಹೊರಾಂಗಣ ಕ್ರೀಡಾಂಗಣ ಜಿಲ್ಲೆಗೆ ಮಾದರಿ ಆಗಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಪಟ್ಟಣದ ಹೊರವಲಯದ ಅಂಬೆಸಾಂಗವಿ ಕ್ರಾಸ್ ರಸ್ತೆಯ ಟೆಕಣಿ ಸಮೀಪದಲ್ಲಿ ಶನಿವಾರ ಆಯೋಜಿಸಿದ್ದ 14.75 ಕೋಟಿ ಅನುದಾನದ ಹೊರಾಂಗಣ ಕ್ರೀಡಾಂಗಣ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

ತಾಲೂಕಿನಲ್ಲಿ ಸುಸಜ್ಜಿತ ಕ್ರೀಡಾಂಗಣ ನಿರ್ಮಾಣ ಆಗಬೇಕು ಎನ್ನುವುದು ಬಹು ದಿನಗಳ ಕನಸಾಗಿತ್ತು. ಆದರೆ ಸೂಕ್ತ ಜಮೀನು ಸಿಗದಿರುವ ಹಿನ್ನೆಲೆಯಲ್ಲಿ ವಿಳಂಬವಾಯಿತು. ಇದೀಗ ಪಟ್ಟಣದ ಟೆಕಣಿ ಸಮೀಪದ ಅರಣ್ಯ ಭೂಮಿಯನ್ನು ನಿಯಮಾನುಸಾರ ಹಸ್ತಾಂತರಿಸಿ ಸುಮಾರು 18 ಎಕರೆ ಪ್ರದೇಶದಲ್ಲಿ ಸುಸಜ್ಜಿತ ಕ್ರೀಡಾಂಗಣ ನಿರ್ಮಾಣ ಮಾಡಲಾಗುತ್ತಿದೆ.

14.75 ಕೋಟಿ ರೂ ನಿರ್ಮಾಣವಾಗುತ್ತಿರುವ ಈ ಕ್ರೀಡಾಂಗಣ ರಾಷ್ಟ್ರ ಮಟ್ಟದ

(2ನೇ ಪುಟ ನೋಡಿ)

## ಅಂತರ್‌ರಾಜ್ಯ ಕಳ್ಳನ ಬಂಧನ: 11.07 ಲಕ್ಷ ಮೌಲ್ಯದ 123 ಗ್ರಾಂ ಚಿನ್ನ ವಶ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ ,ಜು.19: ನಗರದ ವಿಶ್ವವಿದ್ಯಾಲಯ ಠಾಣಾ ವ್ಯಾಪ್ತಿಯ ವಿವಿಧ 7 ಮನೆಗಳಲ್ಲಿ ಕಳ್ಳತನ ಮಾಡಿದ ಅಂತರ್ ರಾಜ್ಯ ಕಳ್ಳನನ್ನು ವಿಶ್ವವಿದ್ಯಾಲಯ ಠಾಣೆ ಪೊಲೀಸರು ಬಂಧಿಸಿದ್ದಾರೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ ಅವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಹೈದ್ರಾಬಾದ್ ನಿವಾಸಿ ಆಟೋ ಚಾಲಕ ಸೈಯದ ಹಮೀದ ಸೈಯದ ಮಹಿಬೂಬ ಅಲಿ( 47 ) ಬಂಧಿತ ಆರೋಪಿ. ಬಂಧಿತನಿಂದ 7 ಮನೆಗಳ

(2ನೇ ಪುಟ ನೋಡಿ)

## ವಡಗೇರಾ ತಹಸೀಲ್ ಸಿಬ್ಬಂದಿ ಲೋಕಾ ಬಲೆಗೆ



ಮಲ್ಲಮ್ಮ ನುಡಿ ವಾರ್ತೆ ವಡಗೇರಾ :ಜು.19: ತಹಸೀಲ್ದಾರ ಕಚೇರಿ ಕೇಸ್ ವರ್ಕರ್ ಪ್ರವೀಣಕುಮಾರ 50 ಸಾವಿರ ರೂ. ಲಂಚ ಪಡೆಯುವಾಗ ಲೋಕಾ ಬಲೆಗೆ ಸಿಕ್ಕಿಬಿದ್ದ ಘಟನೆ ನಡೆದಿದೆ. ವಡಗೇರಾ ತಹಶೀಲ್ದಾರ್ ಕಚೇರಿಯಲ್ಲಿ ಭೂ ವ್ಯಾಜ್ಯದಲ್ಲಿ ಬಾಕಿಯಿದ್ದ ವಿವಾದ ಪ್ರಕರಣವನ್ನು ವಿಲೇವಾರಿ ಮಾಡಿಕೊಡಲು ಲಂಚದ ಬೇಡಿಕೆ ಇಟ್ಟು ಹಣ ಪಡೆಯುತ್ತಿದ್ದಾಗ ದಾಳಿಯಿಟ್ಟ ಲೋಕಾಯುಕ್ತ ಅಧಿಕಾರಿ ಆತನನ್ನು ತಮ್ಮ ವಶಕ್ಕೆಪಡೆದ ಘಟನೆ ನಗರದಲ್ಲಿ ಶುಕ್ರವಾರ ಸಂಜೆ ನಡೆದಿದೆ. ವಡಗೇರಾ ತಹಶೀಲ್ದಾರ ಕಚೇ–ರಿಯ ಕೇಸ್ ವರ್ಕರ್ ಪ್ರವೀಣಕುವಾರ ಎಂಬುವವರು 50 ಸಾವಿರ ರೂ. ಲಂಚ ಪಡೆಂುುವಾಗ ರೆಡ್ ಹ್ಯಾಂಡ್ ಆಗಿ ಲೋಕಾಯುಕ್ತ ಬಲೆಗೆ ಸಿಕ್ಕಿಬಿದ್ದಿದ್ದಾರೆ. ವಡಗೇರಾದ ಮಹ್ಮದ್‌ಸಲಿಂ ಮುಲ್ಲಾ ಎಂಬುವವರು ನೀಡಿದ ದೂರಿನ ಮೇಲೆ ಈ ದಾಳಿ ನಡೆದಿದ್ದು, ಲೋಕಾಯುಕ್ತ ಎಸ್‌ಪಿ ಉಮೇಶ ಮಾರ್ಗದರ್ಶನದಲ್ಲಿ ಡಿವೈಎಸ್‌ಪಿ ಜೆ.ಎಚ್ ಇನಾಂದಾರ್, ಪಿಐ ಸಿದ್ದರಾಯ ಬಳೂರ್ಗಿ ಮತ್ತು ಸಿಬ್ಬಂದಿ ದಾಳಿ ನಡೆಸಿದ್ದಾರೆ. ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ.

## ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿ ವಿಭು ಬಖ್ರು ಪ್ರಮಾಣ ವಚನ



ಮಲ್ಲಮ್ಮನುಡಿವಾರ್ತೆ ಬೆಂಗಳೂರು:ಜು.19: ನ್ಯಾಯಮೂರ್ತಿ ವಿಭು ಬಖ್ರು ಅವರು ಕರ್ನಾಟಕ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ಶನಿವಾರ ಪ್ರಮಾಣ ವಚನ ಸ್ವೀಕರಿಸಿದರು.

ರಾಜ್ಯಭವನದ ಗಾಜಿನ ಮನೆಯಲ್ಲಿ ನಡೆದ ಸಮಾರಂಭದಲ್ಲಿ ರಾಜ್ಯಪಾಲ ತಾವರ್‌ಚಂದ್ ಗೆಹ್ಲೋಟ್ ಅವರು ನೂತನ ಸಿಜೆಗೆ ಪ್ರಮಾಣ ವಚನ ಬೋಧಿಸಿದರು.

ಇದಕ್ಕೂ ಮೊದಲು, 59 ವರ್ಷದ ನ್ಯಾಯಮೂರ್ತಿ ಬಖ್ರು ದೆಹಲಿ ಹೈಕೋರ್ಟ್‌ನಲ್ಲಿ ನ್ಯಾಯಾಧೀಶರಾಗಿ ಸೇವೆ ಸಲ್ಲಿಸಿದ್ದರು. ಕರ್ನಾಟಕ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ಅವರನ್ನು ಬಡ್ತಿ ನೀಡಲಾಗಿದ್ದು, ಸುಪ್ರೀಂ ಕೋರ್ಟ್ ಕೊಲಿಜಿಯಂ ಕೇಂದ್ರ ಸರ್ಕಾರಕ್ಕೆ ಮಾಡಿದ ಶಿಫಾರಸುಗಳನ್ನು ಆಧರಿಸಿದೆ.

ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ವಿಧಾನಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್,

(2ನೇ ಪುಟ ನೋಡಿ)

## ಮಾನಸಿಕ ಅಸ್ವಸ್ಥೆಯ ಮೇಲೆ ಅತ್ಯಾಚಾರ: ಆರೋಪಿಗೆ ಕಠಿಣ ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ, ಜು.19–ತಾಲ್ಲೂಕಿನ ಗ್ರಾಮವೊಂದರ ಮಾನಸಿಕ ಅಸ್ವಸ್ಥ ಮಹಿಳೆಯನ್ನು ಹೊಲಕ್ಕೆ ಎಳೆದುಕೊಂಡು ಹೋಗಿ ಆಕೆಯನ್ನು ಅತ್ಯಾಚಾರ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗೆ 5ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯವು 10 ವರ್ಷ ಕಠಿಣ ಕಾರಾಗೃಹ ಶಿಕ್ಷೆ ಹಾಗೂ 50 ಸಾವಿರ ರೂ.ಗಳ ದಂಡ ವಿಧಿಸಿ ಆದೇಶಿಸಿದೆ.

ಫರತಾಬಾದ್ ಪೊಲೀಸ್ ಠಾಣೆಯ ವ್ಯಾಪ್ತಿಯ ಮಿಣಜಗಿ ಗ್ರಾಮದ ಹೊನ್ನಪ್ಪ ಶರಣಪ್ಪ ದೊಡ್ಡಮನಿ ಎಂಬಾತನೆ ಶಿಕ್ಷೆಗೆ ಒಳಗಾದ ಅಪರಾಧಿ ಎಂದು ತಿಳಿದುಬಂದಿದೆ. ಅಪರಾಧಿ ಹೊನ್ನಪ್ಪ ಶರಣಪ್ಪ ದೊಡ್ಡಮನಿ, 2024ರ ಜನವರಿ 22ರಂದು ಮಹಿಳೆಯನ್ನು ಎಳೆದುಕೊಂಡು ಹೋಗಿ ಅತ್ಯಾಚಾರ ಎಸಗುತ್ತಿದ್ದಾಗ ಮಹಿಳೆ ಚೀರಾಡಿದ್ದರಿಂದ ಆಕೆ–ಯ ಸೋದರತ್ತೆ ಬಂದುದನ್ನು ನೋಡಿ ಹೊನ್ನಪ್ಪ ಪರಾರಿಯಾಗಿದ್ದ. ಸಂತ್ರಸ್ತೆಯ ಕುಟುಂಬಿಕರು ದೂರು ನೀಡಿದ ಪರಿಣಾಮ ಫರಹತಾಬಾದ್ ಪೊಲೀಸ್ ಠಾಣೆಯಲ್ಲಿ ಪ್ರಕರಣ

(2ನೇ ಪುಟ ನೋಡಿ)

## ಸಿದ್ದರಾಮಯ್ಯ ಹಣಕಾಸು ಸಚಿವರಾದಾಗ ಲಕ್ಷ್ಮಿ ಖಜಾನೆಯಲ್ಲಿರ್ತಾಳೆ: ಮಲ್ಲಿಕಾರ್ಜುನ ಖರ್ಗೆ

ಮಲ್ಲಮ್ಮನುಡಿವಾರ್ತೆ ಮೈಸೂರು:ಜು.19: ಸಿದ್ದರಾಮಯ್ಯ ಯಾವಾಗ ಹಣಕಾಸು ಸಚಿವರಾಗ್ತಾರೋ ಆಗ ಲಕ್ಷ್ಮಿ ಕುಂಟಾಗಿ ಖಜಾನೆಯಲ್ಲಿರುತ್ತಾಳೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

ಮೈಸೂರಿನಲ್ಲಿ ನಡೆದ ಸಾಧನ



ಸಮಾವೇಶದಲ್ಲಿ ಅವರು ಮಾತನಾಡಿದರು. ಈ ವೇಳೆ, ಮೋದಿ ಅವರೇ ಕರ್ನಾಟಕಕ್ಕೆ ಬಂದು ನೋಡಿ. ಈ ನಾಡು ಎಷ್ಟು ಸುಭಿಕ್ಷವಾಗಿದೆ ಅಂತ. ಕರ್ನಾಟಕಕ್ಕೆ ಬಂಡವಾಳ ಹೂಡಿಕೆ ಮಾಡಲು

(2ನೇ ಪುಟ ನೋಡಿ)

## ಒಂದನೇ ಪುಟದಿಂದ

# ಬಾಂಬ್ ಸ್ಫೋಟದ ಬೆದರಿಕೆ

ಪೊಲೀಸ್ ಠಾಣೆಗೆ ದೂರು ಕೊಟ್ಟೆ. ಪೊಲೀಸರು ಸ್ಥಳಕ್ಕೆ ಬಂದು ಪರಿಶೀಲಿಸಿದ್ದು, ಯಾವುದೇ ಸ್ಫೋಟಕ ಸಾಮಗ್ರಿ ಪತ್ತೆಯಾಗಿಲ್ಲ' ಎಂದು ಕಮಿಟಿ ವ್ಯವಸ್ಥಾಪಕ ಜಗಜೀತ್ ಸಿಂಗ್ ಮಾಹಿತಿ ನೀಡಿದ್ದಾರೆ.

'ಗುರುದ್ವಾರದಲ್ಲಿ ಎಂದಿನಂತೆ ಪೂಜೆ, ಪ್ರಾರ್ಥನೆಗಳು ನಡೆದಿವೆ. ಭಕ್ತರು ಯಾವುದೇ ರೀತಿಯಿಂದ ಆತಂಕ ಪಡುವ ಅಗತ್ಯವಿಲ್ಲ. ಯಾವುದೇ ಸಮಯದಲ್ಲೂ ಭೇಟಿ ಕೊಡಬಹುದು' ಎಂದು ಗುರುದ್ವಾರ ಪ್ರಬಂಧಕ ಕಮಿಟಿ ಅಧ್ಯಕ್ಷ ಸರ್ದಾರ್ ಬಲಬೀರ್ ಸಿಂಗ್ ತಿಳಿಸಿದ್ದಾರೆ.

# ಮಾದರಿ ಕ್ರೀಡಾಂಗಣ ನಿರ್ಮಾಣ

ಕ್ರೀಡೆಗಳನ್ನು ನಡೆಸುವ ರೀತಿಯಲ್ಲಿ ಅಭಿವೃದ್ಧಿ ಪಡಿಸಲಾಗುತ್ತದೆ.

ಈ ಕ್ರೀಡಾಂಗಣದಲ್ಲಿ ಬ್ಯಾಡ್ಮಿಂಟನ್, ಕಬ್ಬಡಿ, ಬಾಸ್ಕೆಟ್‌ಬಾಲ್, ಕ್ರಿಕೆಟ್, ಸ್ವಿಮಿಂಗ್ ಫುಲ್ ಸೇರಿದಂತೆ ಏಕ ಕಾಲಕ್ಕೆ ಹತ್ತು ವಿವಿಧ ಆಟಗಳನ್ನು ನಡೆಸಬಹುದಾಗಿದೆ ಎಂದರು.

ಮುಂದಿನ ಒಂದು ವರ್ಷದಲ್ಲಿ ಕ್ರೀಡಾಂಗಣ ಕಾಮಗಾರಿ ಪುರ್ಣಗೊಳಿಸಿ ಸಿಎಂ ಮತ್ತು ಡಿಸಿಎಂ ಅವರನ್ನು ಕರೆಸಿ ಈ ಕ್ರೀಡಾಂಗಣ ಲೋಕಾರ್ಪಣೆ ಮಾಡಲಾಗುವುದು ಎಂದು ಭರವಸೆ ನೀಡಿದರು.

ವಿದ್ಯಾರ್ಥಿಗಳು ಕೇವಲ ಮಾನಸಿಕವಾಗಿ ಪ್ರಬುದ್ಧ ಆದರೆ ಸಾಲದು ಶಾರೀರಿಕವಾಗಿಯು ಸದೃಢರಾಗಬೇಕು. ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಸಿ ಕೊಳ್ಳಬೇಕು.

ಯಾವುದೇ ವ್ಯಸನ, ಜೂಜಾಟದ ದಾಸರಾಗದೇ ಶರೀರ ಶುದ್ಧವಾಗಿಸಿಕೊಂಡು ಸಮಾಜ ಮತ್ತು ರಾಷ್ಟ್ರಕ್ಕೆ ತಮ್ಮ ಅಮೂಲ್ಯ ಕೊಡುಗೆ ನೀಡಬೇಕು ಎಂದು ತಿಳಿಸಿದರು.

ಕೋಟಿ ಸಸಿ ನೆಡುವ ಗುರಿ

ಗಡಿ ಜಿಲ್ಲೆ ಬೀದರ್ ನಲ್ಲಿ ಮುಂದಿನ ಎರಡು ವರ್ಷದೊಳಗೆ ಒಂದು ಕೋಟಿ ಸಸಿ ನೆಡುವ ಗುರಿ ಹೊಂದಲಾಗಿದೆ ಎಂದು ಸಚಿವ ಖಂಡ್ರೆ ತಿಳಿಸಿದರು.

ಜಿಲ್ಲೆಯಲ್ಲಿ ಹಸಿರು ಹೊದಿಕೆ ಹೆಚ್ಚಿಸುವ ಆಶಯದೊಂದಿಗೆ ಈಗಾಗಲೇ ಕಳೆದ ಎರಡು ವರ್ಷಗಳಿಂದ 40 ಲಕ್ಷ ಸಸಿ ನೆಡಲಾಗಿದೆ. ನೆಟ್ಟಿರುವ ಸಸಿಗಳನ್ನು ಪಾಲನೆ ಪೋಷಣೆ ಮಾಡಲಾಗುತ್ತಿದೆ.

ವಿದ್ಯಾರ್ಥಿಗಳು ಕೂಡ ಮನೆಗೊಂದು ಸಸಿ ನೆಟ್ಟು ಪರಿಸರ ಸಂರಕ್ಷಣೆ ಮಾಡುವ ಕೆಲಸ ಮಾಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷೆ ಶಶಿಕಲಾ ಅಶೋಕ, ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ತಾಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಹಣಮಂತರಾವ ಚವ್ಹಾಣ, ಪುರಸಭೆ ಮಾಜಿ ಅಧ್ಯಕ್ಷ ಬಸವರಾಜ ವಂಕೆ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಮಡಿವಾಳಪ್ಪ ಮಂಗಲಗಿ, ಅರಣ್ಯಾಧಿಕಾರಿ ಆಶಿಶ ರೆಡ್ಡಿ, ಎಸ್ಪಿ ಪ್ರದೀಪ ಗುಂಟಿ, ಉದ್ಯಮಿ ಗುರುನಾಥ ಕೊಳ್ಳೂರ, ಪ್ರಥಮ ದರ್ಜೆ ಗುತ್ತಿಗೆದಾರ ಸಚಿನ ಕೊಳ್ಳೂರ, ಪಿಯು ಉಪನಿರ್ದೇಶಕ ಚಂದ್ರಕಾಂತ ಶಾಹಬಾದಕರ್, ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರೆ ಸೇರಿದಂತೆ ಹಲವರು ಇದ್ದರು.

ಲೋಕೋಪಯೋಗಿ ಇಲಾಖೆಯ ಮುಖ್ಯ ಕಾರ್ಯನಿರ್ವಾಹಕ ಅಭಿಯಂತರು ಶಿವಶಂಕರ ಕಾಮಶೆಟ್ಟಿ ಸ್ವಾಗತಿಸಿದರು. ದೀಪಕ ಠಮಕೆ ನಿರೂಪಿಸಿ, ವಂದಿಸಿದರು.

ಗಡಿ ಜಿಲ್ಲೆ ಬೀದರ್ ನಲ್ಲಿ ಈಗಾಗಲೇ ಸಿಎಂ ಸಿದ್ದರಾಮಯ್ಯ ಅವರು ಸುಮಾರು 2025 ಕೋಟಿ ರೂ ಅನುದಾನದ ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ, ಉದ್ಘಾಟನೆ ಮಾಡಿದ್ದಾರೆ. ಆದರೆ ಈ ಕ್ರೀಡಾಂಗಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿರಲಿಲ್ಲ. ಇದೀಗ ಪೂಜೆ ನೆರವೇರಿಸಿ ಕಾಮಗಾರಿಗೆ ಚಾಲನೆ ನೀಡಲಾಗಿದೆ.

– ಈಶ್ವರ ಖಂಡ್ರೆ ಜಿಲ್ಲಾ ಉಸ್ತುವಾರಿ ಸಚಿವರು ಬೀದರ್

# 11.07 ಲಕ್ಷ ಮೌಲ್ಯದ 123 ಗ್ರಾಂ ಚಿನ್ನ ವಶ

ಕಳ್ಳತನ ಮಾಡಿದ 11.07 ಲಕ್ಷ ರೂ ರೂಪಾಯಿ ಮೌಲ್ಯದ 123 ಗ್ರಾಂ ಬಂಗಾರದ ಆಭರಣ ಜಪ್ತಿ ಮಾಡಿಕೊಳ್ಳಲಾಗಿದೆ ಎಂದರು.ಕಳೆದ ಜೂನ್ 23 ರಂದು ಶಹಾಬಾದ ರೋಡ ಕಲ್ಯಾಣ ನಗರದ ನಿವಾಸಿ ಶರಣಕುಮಾರ ನಾಗೇಂದ್ರ ಮಂಗನ್ ಎಂಬುವವರು ತಮ್ಮ ಮನೆಯಲ್ಲಿ ಹಾಡಹಗಲೇ 1.48 ಲಕ್ಷ ರೂ ರೂಪಾಯಿ ಬೆಲೆಬಾಳುವ ಚಿನ್ನಾಭರಣ ಕಳ್ಳರು ಕಳ್ಳತನ ಮಾಡಿಕೊಂಡು ಹೋಗಿದ್ದಾರೆ ಎಂದು ವಿಶ್ವವಿದ್ಯಾಲಯ ಠಾಣೆಗೆ ದೂರು ನೀಡಿದ್ದರು.ಪ್ರಕರಣದ ಆರೋಪಿತರ ಪತ್ತೆ ಕುರಿತು ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್. ನಾಯಕ್ ಅವರ ಮಾರ್ಗದರ್ಶನದಲ್ಲಿ ಎಸಿಪಿ ಡಿ.ಜಿ ರಾಜಣ್ಣ ನೇತೃತ್ವದಲ್ಲಿ ವಿಶ್ವವಿದ್ಯಾಲಯ ಪೊಲೀಸ್ ಠಾಣೆ ಪಿಐ ಸುಶೀಲಕುಮಾರ, ಎಎಸ್‌ಐ ಸೈಯದ ಗೌಸ ಹಾಗೂ ಸಿಬ್ಬಂದಿಯವರಾದ ಸಂಜಯಕುಮಾರ, ಪ್ರಕಾಶ ಬಿರನೂರ, ರಾಜಕುಮಾರ ಪವಾರ, ಪ್ರಕಾಶ ಬಾಗೇವಾಡಿ, ನಾಗೇಂದ್ರ ಸಗರ ಅವರನ್ನೊಳಗೊಂಡ ತಂಡ ರಚಿಸಲಾಗಿತ್ತು. ಆರೋಪಿಯು ಕಲಬುರಗಿ ನಗರದ ಸೇಡಂ ರೋಡ ಹತ್ತಿರ ಹೋಗುತ್ತಿರುವಾಗ ಅನುಮಾನಾಸ್ಪದವಾಗಿ ಒಂದು ಬ್ಯಾಗನ್ನು ಹಿಡಿದುಕೊಂಡು ನಿಂತಿದ್ದನ್ನು ಕಂಡು ಆರೋಪಿಯನ್ನು ಬಂಧಿಸಲಾಯಿತು ಎಂದು ಅವರು ವಿವರಿಸಿದರು.

# ವಿಭು ಬಖ್ರು ಪ್ರಮಾಣ ವಚನ

ಕರ್ನಾಟಕ ಉಚ್ಚ ನ್ಯಾಯಾಲಯದ ಹಂಗಾಮಿ ನ್ಯಾಯಾಧೀಶರಾದ ವಿ.ಕಾಮೇಶ್ವರ ರಾವ್, ಕಾನೂನು, ಸಂಸದೀಯ ವ್ಯವಹಾರಗಳ ಇಲಾಖೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಹೆಚ್.ಕೆ.ಪಾಟೀಲ್, ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರಾದ ಬಿ.ಎಸ್.ಸುರೇಶ್ (ಬೈರತಿ), ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮ್ಮದ್, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರಾದ ಎ.ಎಸ್.ಪೊನ್ನಣ್ಣ, ವಿಧಾನಪರಿಷತ್ ಸದಸ್ಯರಾದ ನಾಗರಾಜ ಯಾದವ್, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಹೆಚ್.ಎಂ.ರೇವಣ್ಣ, ಸರಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನಿಶ್, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್, ಮುಖ್ಯಮಂತ್ರಿಗಳ ಕಾರ್ಯದರ್ಶಿಗಳಾದ ಬಿ.ಬಿ.ಕಾವೇರಿ, ಸೇರಿದಂತೆ ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು, ವಕೀಲರು, ಇತರೆ ಗಣ್ಯರು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಲಕ್ಷ್ಮಿ ಖಜಾನೆಯಲ್ಲಿರ್ತಾಳೆ: ಮಲ್ಲಿಕಾರ್ಜುನ ಖರ್ಗೆ

ಹುಡುಕಿ ಹುಡುಕಿ ಜನ ಬರುತ್ತಿದ್ದಾರೆ. ಬಿಜೆಪಿಯವರು ಹೊಟ್ಟೆ ಕಿಚ್ಚಿಗೆ ಆರೋಪ ಮಾಡುತ್ತಾರೆ. ಹೊಟ್ಟೆ ಕಿಚ್ಚಿಗೆ ಮದ್ದಿಲ್ಲ. ಕರ್ನಾಟಕದಲ್ಲಿ ಕಾಂಗ್ರೆಸ್ ಮಾಡಿರುವ ಅಭಿವೃದ್ಧಿಯನ್ನು

ಮೋದಿ 1% ಕೂಡ ಮಾಡಿಲ್ಲ ಎಂದು ಟೀಕಿಸಿದ್ದಾರೆ. ಯಾವುದೇ ಯೋಜನೆ ಇದ್ದರೂ, ಸಿದ್ದರಾಮಯ್ಯ ಅವರು ಮೊದಲ ಪ್ರಾಮುಖ್ಯತೆ ಕೊಡುವುದು ಮೈಸೂರಿಗೆ. ಮೈಸೂರಿನ ಮೇಲೆ ಸಿದ್ದರಾಮಯ್ಯ ಅವರಿಗೆ ಪ್ರೀತಿ ಜಾಸ್ತಿ. ಮೈಸೂರಿಗೆ ಯಾವಾಗಲೂ ಹಣದ ಹೊಳೆಯನ್ನು ಹರಿಸುತ್ತಾರೆ. ಬಿಜೆಪಿಯವರು ಟೀಕಾಚಾರಿಗಳು ಅಷ್ಟೇ. ಅಭಿವೃದ್ಧಿ ಕೆಲಸ ಮಾಡುವುದೇ ಇಲ್ಲ. ಬಿಜೆಪಿ ಮಾಡುವುದು ಭ್ರಷ್ಟಾಚಾರ ಮಾತ್ರ. ಕಾಂಗ್ರೆಸ್ ಕ್ಯಾ ಕಿಯಾ ಎಂದು ಮೋದಿ ಅವರು ಪದೇ ಪದೇ ಕೇಳುತ್ತಾರೆ. ಕಾಂಗ್ರೆಸ್ ಈ ದೇಶಕ್ಕೆ ಕೊಟ್ಟ ಕೊಡುಗೆ ಜನರ ಕಣ್ಮುಂದೆ ಇದೆ ಎಂದಿದ್ದಾರೆ.ಮೋದಿ ಅವರು ದಿನ ಟಿವಿಯಲ್ಲಿ ಮಾತ್ರ ಕಾಣುತ್ತಾರೆ. ದಿನ ಪೂರ್ತಿ ಟಿವಿಯಲ್ಲಿ ಕಾಣಬೇಕು ಅಷ್ಟೆ ಅವರ ಉದ್ದೇಶ. ಹಿಂದೆ ಯಾವ ಪಿಎಂ ಕೂಡ ಇವರ ರೀತಿ ದಿನ ಬೆಳಗಾದರೆ ಟಿವಿಯಲ್ಲಿ ಬೊಗಳುತ್ತಿರಲಿಲ್ಲ. ಅಂದಾನಿ, ಅಂಬಾನಿಗೆ ದೇಶದ ಆಸ್ತಿಯನ್ನು ಮೋದಿ ಮಾರುತ್ತಿದ್ದಾರೆ.

ದೇಶದ ಜನ ಸಂಕಷ್ಟದಲ್ಲಿ ಇದ್ದಾಗ ಮೋದಿ ವಿದೇಶ ಪ್ರವಾಸ ಮಾಡುತ್ತಾರೆ. ಮಣಿಪುರಕ್ಕೆ ಹೋಗಿ ಅಲ್ಲಿನ ಜನಕ್ಕೆ ಸಾಂತ್ವನ ಹೇಳಲಿಲ್ಲ. ಸಂವಿಧಾನ ಬದಲಾವಣೆ ಮಾಡಲು ಜನ

ಅವಕಾಶ ಕೊಟ್ಟರೆ ಜನ ಸತ್ತಂತೆ. ಬಿಜೆಪಿ ಎಷ್ಟೇ ತಿಪ್ಪಾರಲಾಗ ಹಾಕಿದರೂ ಸಂವಿಧಾನ ಬದಲಾವಣೆ ಮಾಡಲು ಸಾಧ್ಯವಿಲ್ಲ. ಅಂಬೇಡ್ಕರ್ ಒಬ್ಬರೇ ಸಂವಿಧಾನ ಮಾಡಿದ್ದಾ ಅಂತಾ ಬಿಜೆಪಿ ಕೇಳುತ್ತೆ? ಅಂಬೇಡ್ಕರ್ ಅಲ್ಲದೆ ಏನೂ ಅವರ ತಾತಂದಿರು ಮಾಡಿದ್ರಾ? ಆರ್‌ಎಸ್‌ಎಸ್ ಅವರು ಮಾಡಿದ್ರಾ? ಸಂವಿಧಾನದ ಕೊಲೆಯನ್ನು ಮೋದಿ ಮಾಡುತ್ತಿದ್ದಾರೆ ಎಂದು ಗುಡುಗಿದರು.

ಕಾಂಗ್ರೆಸ್ ಕೆಲ ಕಡೆ ಸೋತಿರಬಹುದು. ಆದರೆ ಕೋಟ್ಯಂತರ ಜನ ನಮ್ಮ ಪರ ಇದ್ದಾರೆ. ನಮಗೂ ಬಿಜೆಪಿಗೂ ಇರೋದು 2% ಮತದ ವ್ಯತ್ಯಾಸ ಅಷ್ಟೆ. ಶಿವಕುಮಾರ್, ಸಿದ್ದರಾಮಯ್ಯ ಸೇರಿ ಲೋಕಸಭಾ ಚುನಾವಣೆಯಲ್ಲಿ ಇನ್ನೂ 10 ಸ್ಥಾನ ಕೊಟ್ಟಿದ್ದರೆ, ಬೇರೆ ಬೇರೆ ರಾಜ್ಯದಲ್ಲೂ ಎರಡು ಮೂರು ಸ್ಥಾನ ಹೆಚ್ಚು ಬಂದಿದ್ದರೆ ಮೋದಿ ಎಲ್ಲಿ ಅಧಿಕಾರಕ್ಕೆ ಬರುತ್ತಿದ್ದರು? ಮೋದಿ ಅಹಂಕಾರ, ದುರಹಂಕಾರ ಇರೋ ಮನುಷ್ಯ. ಒಂದಲ್ಲ ದಿನ ಕೆಳಗೆ ಬೀಳಬೇಕು. ಬೀಳುತ್ತಾರೆ ನೋಡಿ ಎಂದು ಭವಿಷ್ಯ ನುಡಿದಿದ್ದಾರೆ.ಐದು ಗ್ಯಾರಂಟಿ ಬರೀ ಸಿದ್ದರಾಮಯ್ಯ, ಡಿಕೆ ಶಿವಕುಮಾರ್, ಪರಮೇಶ್ವರ್ ಮನೆಗೆ ಕೊಟ್ಟಿದ್ದಿವಾ? ಇಷ್ಟು ಅಭಿವೃದ್ಧಿ ಕಾರ್ಯ, ಗ್ಯಾರಂಟಿ ಕೊಟ್ಟ ಮೇಲೂ ನಮ್ಮವರೆ ಕೆಲವರು ಅಭಿವೃದ್ಧಿ ಆಗ್ತಿಲ್ಲ ಅಂತಾರೆ? ಯಾಕೆ ಅಂತಾನೆ ಗೊತ್ತಾಗಲ್ಲ. ಈ ಸರ್ಕಾರ ದಿವಾಳಿ ಆಗಿದೆ ಎಂದು ಸುಳ್ಳು ಹಬ್ಬಿಸಿದ್ದಾರೆ. ಈ ಸರ್ಕಾರ ದಿವಾಳಿ ಆಗಿಲ್ಲ.

ದಿವಾಳಿ ಆಗಿದ್ದರೆ ಶಾಸಕರಿಗೆ 50 ಕೋಟಿ ರೂ. ಅನುದಾನ ಕೊಡುತ್ತಿದ್ದರಾ? ಸಿದ್ದರಾಮಯ್ಯ ಯಾವಾಗ ಹಣಕಾಸು ಸಚಿವರಾಗುತ್ತಾರೋ ಆಗ ಲಕ್ಷ್ಮಿ ಕುಂಟಾಗಿ ಖಜಾನೆಯಲ್ಲಿ ಕೂರುತ್ತಾಳೆ. ಮೋದಿ ಗ್ಯಾರಂಟಿ ಒಂದೇ ಅದು ಸುಳ್ಳು. ಮೋದಿ ಬಳಿ ಇರೋದು ಸುಳ್ಳಿನ ಗ್ಯಾರಂಟಿ ಮಾತ್ರ. ಕಾಂಗ್ರೆಸ್ ಗ್ಯಾರಂಟಿ ನಿಜವಾದ ಗ್ಯಾರಂಟಿ. ಇವು ಬದುಕಿನ ಗ್ಯಾರಂಟಿ ಎಂದಿದ್ದಾರೆ.ಭಾಷಣದ ವೇಳೆ ಸಿದ್ದರಾಮಯ್ಯ ಜೊತೆ ಮಾತಾಡಿದ ಮಹದೇವಪ್ಪರನ್ನು ಗಮನಿಸಿ, ಏ.. ಮಹದೇವಪ್ಪ ಸಿಎಂ ಕಿವಿ ತುಂಬ ಬೇಡ. ಅವರ ಕಿವಿ ಚೆನ್ನಾಗಿದೆ. ಅವರಿಗೆ ನನ್ನ ಮಾತು ಕೇಳೋಕೆ ಬಿಡು ಎಂದು ಕಾಲೆಳೆದಿದ್ದಾರೆ.

# ಅತ್ಯಾಚಾರ: ಆರೋಪಿಗೆ ಕಠಿಣ ಶಿಕ್ಷೆ

ದಾಖಲಾಗಿತ್ತು.ತನಿಖಾಧಿಕಾರಿಗಳಾದ ಮಲ್ಲಿಕಾರ್ಜುನ್ ಇಕ್ಕಳಕಿ, ಬಾಲಚಂದ್ರ ಲಕ್ಕಂ ಅವರು ತನಿಖೆ ನಡೆಸಿ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿಯನ್ನು ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಧೀಶ ಮಹ್ಮದ್ ಮುಜೀರ್ ಉಲ್ಲಾ ಸಿ.ಜಿ. ಅವರು, ಅಪರಾಧಿಗೆ 10 ವರ್ಷ ಕಠಿಣ ಕಾರಾಗೃಹ ಶಿಕ್ಷೆ ಹಾಗೂ 50 ಸಾವಿರ ರೂ.ಗಳ ದಂಡ ವಿಧಿಸಿ ಆದೇಶ ಹೊರಡಿಸಿದ್ದಾರೆ. ಸರ್ಕಾರಿ ಅಭಿಯೋಜಕ ಹಯ್ಯಾಳಪ್ಪ ಎನ್. ಬಳಬಟ್ಟಿ ಅವರು ಸರ್ಕಾರದ ಪರವಾಗಿ ವಾದ ಮಂಡಿಸಿದ್ದರು.

# ಆಧಾರ ಕಾರ್ಡ್ ಮಾಡಿಸುವ ಸಾಥಿ ಯೋಜನೆಗೆ ನ್ಯಾ.ಅರ್ಜುನ ಬನಸೋಡೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.19: ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬೀದರ ತಾಲೂಕ ಕಾನೂನು ಸೇವೆಗಳ ಸಮಿತಿ ಔರಾದ, ತಾಲೂಕ ವಕೀಲರ ಸಂಘ ಔರಾದ,ತಾಲೂಕ ತಹಶೀಲ್ದಾರ ಕಛೇರಿ ಔರಾದ ಇವರ ಸಂಯುಕ್ತಾಶ್ರಯದಲ್ಲಿಂದುಔರಾದ ತಹಸೀಲ್ದಾರ ಕಛೇರಿಯಲ್ಲಿ ಹಮ್ಮಿಕೊಂಡಿದ್ದ "ಅನಾಥ ಮತ್ತು ನಿರ್ಗತಿಕ ಮಕ್ಕಳಿಗೆ ಆಧಾರ ಕಾರ್ಡ ಮಾಡಿಸುವ ಸಾಥಿ ಯೋಜನೆ ಕಾರ್ಯಕ್ರಮ ಹಾಗೂ ಓಂಐಖಂ (ಸಾಗಣಿಕೆ ಮತ್ತು ವಾಣಿಜ್ಯ ಲೈಂಗಿಕ ಶೋಷಣೆಯ ಬಲಿಪಶುಗಳು) ಯೋಜನೆ 2015ರ ಅನುಷಾ??ನ ಅಂಗವಾಗಿ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮಕ್ಕೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಅರ್ಜುನ ಬನಸೋಡೆ ಅವರು ಚಾಲನೆ ನೀಡಿದರು.

"ಅನಾಥ ಮತ್ತು ನಿರ್ಗತಿಕ ಮಕ್ಕಳಿಗೆ ಮಕ್ಕಳಿಗೆ ಆಧಾರ ಕಾರ್ಡ ಗಳನ್ನು ಅಲ್ಲೆ ನಿಂತು ಮಾಡಿಸಿ ಮಕ್ಕಳಿಗೆ ವಿತರಣೆ ಮಾಡಿದರು, ಹಾಗೂ ತಾಲೂಕ ಕಾನೂನು ಸೇವೆಗಳ ಸಮಿತಿಯ ಅಧ್ಯಕ್ಷ ಹಾಜಿ ಹುಸೇನಸಾಬ ಯಾದವಾಡ, ಹಾಗೂ ಕಾರ್ಯದರ್ಶಿ ವಿನಾಯಕ ವಾನಖಂಡೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದರು.

ಔರಾದ ತಹಶೀಲ್ದಾರ ಮಹೇಶ ಪಾಟೀಲ್ ಅಧ್ಯಕ್ಷತೆ ವಹಿಸಿ ಮಾತನಾಡಿದ್ದರು.ಉಪನ್ಯಾಸಕರಾಗಿ ಔರಾದ ತಾಲೂಕ ವಕೀಲರ ಸಂಘದ ಅಧ್ಯಕ್ಷ ಬಾಲಾಜಿ ಕಂಬಾರ ಅವರು ರವರು ಮಾನವ ಕಳ್ಳ ಸಾಗಣಿಕೆ ಕುರಿತು ಮಾತನಾಡಿದ್ದರು.

ಈ ಕಾರ್ಯಕ್ರಮದಲ್ಲಿ ಇಮಲಪ್ಪಾ ಶಿಶು ಅಭಿವೃಧಿ ಯೋಜನಾಧಿಕಾರಿಗಳು ಮಹಿಳಾ ಮತ್ತು ಮಕ್ಕಳ ಅಭಿವೃಧಿ ಇಲಾಖೆ ಔರಾದ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಿಬ್ಬಂಧಿಯಾದ ಆಕಾಶ ಸಜ್ಜನಶೆಟ್ಟಿ ಹಾಗೂ ನರೇಶ ಹಾಗೂ ಕಾನೂನು ನೇರವು ಸಾಹಾಯಕ

ಅಭಿರಕ್ಷಕರಾದ ಮಹಾದಪ್ಪಾ ಮತ್ತು ವಿದ್ಯಾಸಾಗರ ಹಾಜರಿದ್ದರು ಹಾಗೂ ತಾಲೂಕ ಕಾನೂನು ಸಿಬ್ಬಂಧಿ ವರ್ಗದವರು ಮತ್ತು ತಹಶೀಲ್ದಾರ ಸಿಬ್ಬಂಧಿ ವರ್ಗದವರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸಿಎಂ ಕುರ್ಚಿ ಉಳಿಸಿಕೊಳ್ಳಲು ಸಮಾವೇಶ : ವಿಜಯೇಂದ್ರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ತಮ್ಮ ಕುರ್ಚಿ ಅಲುಗಾಡಲು ಆರಂಭಿಸಿದಾಗಲೆಲ್ಲ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಒಂದಲ್ಲ ಒಂದು ಸಮಾವೇಶ ಹಮ್ಮಿಕೊಳ್ಳುವ ತಂತ್ರಗಾರಿಕೆ ಅನುಸರಿಸುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಟಾಂಗ್ ನೀಡಿದರು.ನಗರದಲ್ಲಿ ಇಂದು ಬೆಳಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಅಂದರೆ ಸಮಾವೇಶ, ಸಮಾವೇಶ ಅಂದರೆ ಸಿದ್ದರಾಮಯ್ಯ ಅಂತನ್ನುವ ಪರಿಸ್ಥಿತಿ ರಾಜ್ಯದಲ್ಲಿ ನಿರ್ಮಾಣಗೊಂಡಿದೆ. ಈಗ ಮೈಸೂರಿನಲ್ಲಿ ಹಮ್ಮಿಕೊಳ್ಳುತ್ತಿರುವ ಕಾಂಗ್ರೆಸ್ ಸಮಾವೇಶ ಕೂಡ ಅದೇ ಕುರ್ಚಿ ಉಳಿಸಿಕೊಳ್ಳುವ ಪ್ರಯತ್ನ ಎಂದು ಲೇವಡಿ ಮಾಡಿದರು.ತಮ್ಮ ರಾಜಕೀಯ ಅಸ್ತಿತ್ವ ಉಳಿಸಿಕೊಳ್ಳುವ ಭಾಗವಾಗಿ ಸಿದ್ದರಾಮಯ್ಯ ಅಹಿಂದ ಸಮಾಜವನ್ನು ಎದುರಿಟ್ಟುಕೊಂಡು ರಾಜಕೀಯ ಮಾಡುತ್ತಿದ್ದಾರೆ ಎಂದು ಅವರು ಬೇಸರ ವ್ಯಕ್ತಪಡಿಸಿದರು.

ಕಳೆದ ಎರಡು ವರ್ಷಗಳಲ್ಲಿ ಸಿದ್ದರಾಮಯ್ಯ ಸರ್ಕಾರದ ಸಾಧನೆ ಶೂನ್ಯ ಎಂದು ಟೀಕಿಸಿದ ವಿಜಯೇಂದ್ರ,ಹಾಗೊಂದು ವೇಳೆ ನಿಜವಾಗಿಯೂ ಸಾಧನೆಗಳು ಆಗಿದ್ದರೆ ರಾಜ್ಯಕ್ಕೆ ಪದೇ ಪದೇ ಸುರ್ಜೇವಾಲಾ ಭೇಟಿ– ಕೊಟ್ಟು ಶಾಸಕರ ಅಭಿಪ್ರಾಯ ಸಂಗ್ರಹಿಸುವ ಅಗತ್ಯವಾದರೂ ಏನಿದೆ ಎಂದು ಪ್ರಶ್ನಿಸಿದರು.



ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಶಾಸಕರ ಅಸಮಾಧಾನ ಎಷ್ಟಿದೆ ಎಂಬುದನ್ನು ಖಚಿತಪಡಿಸಿಕೊಳ್ಳಲು ಸುರ್ಜೆವಾಲಾ ಮೇಲಿಂದ ಮೇಲೆ ರಾಜ್ಯಕ್ಕೆ ಭೇಟಿ ನೀಡುತ್ತಿದ್ದಾ–ರೆ. ಹಾಗೊಂದು ವೇಳೆ ಮುಖ್ಯಮಂತ್ರಿ ಬದಲಾಯಿಸುವ ಸ್ಥಿತಿ ನಿರ್ಮಾಣಗೊಂಡರೆ ಯಾರನ್ನು ಆ ಸ್ಥಾನದಲ್ಲಿ ಕೂಡಿಸಬೇಕು ಎನ್ನುವ ಬಗ್ಗೆ ಶಾಸಕರ ಮನಸ್ಥಿತಿ ಅರ್ಥ ಮಾಡಿಕೊಳ್ಳಲು ಅವರು ರಾಜ್ಯಕ್ಕೆ ಭೇಟಿ ನೀಡುತ್ತಿದ್ದಾರೆ. ಸಿದ್ದರಾಮಯ್ಯ ಅವರಿಗೆ ಈಗಾಗಲೇ ಮುಖ್ಯಮಂತ್ರಿ ಸ್ಥಾನ ಉಳಿಸಿಕೊಳ್ಳುವ ಚಿಂತೆಯ ಜೊತೆಗೆ ಅನಿಶ್ಚಿತತೆ ಕಾಡುತ್ತಿದೆ ಎಂದರು.ಹೀಗೆ ಮುಖ್ಯಮಂತ್ರಿ ಕುರ್ಚಿ ಅಲುಗಾಡುತ್ತಿರುವ ಕಾರಣಕ್ಕಾಗಿ ಸಿದ್ದರಾಮಯ್ಯ ಮೈಸೂರಿನಲ್ಲಿ ಸಮಾವೇಶ ಹಮ್ಮಿಕೊಳ್ಳುವ ಮೂಲಕ ಮತ್ತೊಮ್ಮೆ ಪಕ್ಷದ ವರಿಷ್ಠರನ್ನು ಬೆದರಿಸುವ ತಂತ್ರ ಅನುಸರಿಸುತ್ತಿದ್ದಾರೆ. ಸಿಎಂ ತಾವೇ ಆಗಬೇಕು ಎನ್ನುವ ಪೈಪೋಟಿ ಕಾಂಗ್ರೆಸ್ ಪಕ್ಷದಲ್ಲಿ ಭರ್ಜರಿಯಾಗಿ ನಡೆಯುತ್ತಿದೆ. ಸಿಎಂ ಗಾದಿಗಾಗಿ ಕಾಂಗ್ರೆಸ್ ಪಕ್ಷದಲ್ಲಿ ಭರ್ಜರಿ ಕುದುರೆ ವ್ಯಾಪಾರ ನಡೆಯುತ್ತಿದೆ. ಈಗಾಗಲೇ ಶಾಸಕರ ರೇಟ್ ಕೂಡ ಫಿಕ್ಸ್ ಆಗಿದೆ ಎಂದು ಅವರು ಹೇಳಿದರು.ಐದು ವರ್ಷ ನಾನೇ ಸಿಎಂ ಎಂದು ಸಿದ್ದರಾಮಯ್ಯ ಹೆಮ್ಮೆಯಿಂದ ಹೇಳಿದ್ದಲ್ಲ. ಅದು ಪಕ್ಷದ ಹೈಕಮಾಂಡ್ ಅನ್ನು ಬೆದರಿಸುವ ತಂತ್ರವಷ್ಟೇ ಎಂದು ಮತ್ತೊಮ್ಮೆ ವ್ಯಾಖ್ಯಾನಿಸಿದ ಅವರು,ಈ ಹಿಂದೆ ರಾಹುಲ್ ಗಾಂಧಿ ಅವರು ಸಿದ್ದರಾಮಯ್ಯ ಅವರಿಗೆ ಬಹಳ ಪ್ರಾಮುಖ್ಯತೆ ಕೊಡುತ್ತಿದ್ದರು. ಆದರೆ ಮೊನ್ನೆ ದೆಹಲಿಗೆ ಹೋದಾಗ ಸಿದ್ದರಾಮಯ್ಯ ಅವರಿಗೆ ಅಪಾಯಿಂಟ್ಮೆಂಟ್ ಕೂಡ ಕೊಟ್ಟಿಲ್ಲ. ಕಾಂಗ್ರೆಸ್ ಪಕ್ಷದಲ್ಲಿ ಎಲ್ಲವೂ ಸರಿ ಇಲ್ಲ ಎನ್ನುವುದಕ್ಕೆ ಇದೊಂದು ದೊಡ್ಡ ನಿದರ್ಶನ ಎಂದು ಅವರು ನುಡಿದರು. ಡಿ.ಕೆ. ಶಿವಕುಮಾರ್ ಪರ ಹಲವು ಶಾಸಕರು,ಸಿದ್ದರಾಮಯ್ಯ ಪರ ಕೆಲವು ಶಾಸಕರು ಈಗಾಗಲೇ ಬ್ಯಾಟಿಂಗ್ ಆರಂಭಿಸಿದ್ದಾರೆ. ಇನ್ನು ಕೆಲವರು ತಾವೇ ಸಿಎಂ ಆಗಬೇಕು ಎಂದು ತಮ್ಮ ತಮ್ಮ ಪ್ರಯತ್ನಗಳನ್ನು ಆರಂಭಿಸಿದ್ದಾರೆ ಎಂದರು.

ಖರ್ಗೆ ಹೆಸರೆತ್ತಿದ್ದರೆ ಏಕೆ ಕೋಪ ?ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಹೆಸರು ಎತ್ತಿದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಎಲ್ಲಿಲ್ಲದ ಕೋಪ ಬರುತ್ತದೆ ಎಂದು ಬಿಜೆಪಿ ರಾಜ್ಯ ಸರ್ಕಾರ ಗಂಭೀರ ಆರೋಪ ಮಾಡಿದರು.ಎಐಸಿಸಿ ಅಧ್ಯಕ್ಷ ಖರ್ಗೆಯವರು ರಾಜ್ಯ ರಾಜಕಾರಣಕ್ಕೆ ಹಿಂದಿರುಗಲಿದ್ದಾರೆ ಎಂಬ ವದಂತಿಗಳ ಕುರಿತು ಕೇಳಲಾದ ಪ್ರಶ್ನೆಗೆ ಹೀಗೆ ಪ್ರತಿಕ್ರಿಯಿಸಿದ ವಿಜಯೇಂದ್ರ, ಈ ಹಿಂದೆ ಸಿದ್ದರಾಮಯ್ಯ ಅವರು ಜಿ ಪರಮೇಶ್ವರ್ ಅವರಿಗೆ ಹೇಗೆ ಅನ್ಯಾಯ ಮಾಡಿದರು ಎಂಬ ಚರ್ಚೆ ನಡೆದಿತ್ತು. ಇದೀಗ ಖರ್ಗೆ ಅವರ ವಿಷಯದಲ್ಲಿಯೂ ಸಿದ್ದರಾಮಯ್ಯ ಇದೇ ತಂತ್ರ ಅನುಸರಿಸುತ್ತಿದ್ದಾರೆ ಎಂದರು.

ಬಿಜೆಪಿ ಶಾಸಕ ಭೈರತಿ ಬಸವರಾಜ ಅವರನ್ನು ರಾಜಕೀಯವಾಗಿ ಮುಗಿಸಲು ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಷಡ್ಯಂತರ ರೂಪಿಸಿದೆ. ಇದು ಹೊಸತೇನೂ ಅಲ್ಲ. ಕಳೆದ ಎರಡು ವರ್ಷಗಳಿಂದ ಬಿಜೆಪಿ ಶಾಸಕರನ್ನು ಬೆದರಿಸುವ ಕೆಲಸ ನಡೆಯುತ್ತಲೇ ಬಂದಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ವಿಜಯೇಂದ್ರ ಕೆಂಡಕಾರಿದರು.

# ರಾಯಚೂರ ಸಿಟಿಯ ಎಲ್ಲ ವಾರ್ಡನಲ್ಲಿ ಕುಡಿಯುವ ನೀರಿನ ಪರೀಕ್ಷೆ

## ನಿಯಮಿತವಾಗಿ ನಡೆಸಬೇಕು: ಜುಬಿನ್ ಮೊಹಾಪತ್ರ ಕಟ್ಟುನಿಟ್ಟಿನ ನಿರ್ದೇಶನ

ರಾಯಚೂರು ಜು.19 : ಸಾರ್ವಜನಿಕರಿಗೆ ಗುಣಮಟ್ಟದ ಯೋಗ್ಯವಾದ ನೀರನ್ನು ಪೂರೈಸುವುದು ಮಹಾನಗರ ಪಾಲಿಕೆಯ ಮಹತ್ವದ ಕಾರ್ಯವಾಗಿದೆ. ಇದನ್ನು ಮನದಲ್ಲಿಟ್ಟುಕೊಂಡು ಮಹಾನಗರ ಪಾಲಿಕೆಯ ಸಂಬಂಧಿಸಿದ ಅಧಿಕಾರಿ ಮತ್ತು ಸಿಬ್ಬಂದಿ ಕುಡಿಯುವ ನೀರಿನ ಪರೀಕ್ಷೆಯ ಕಾರ್ಯವನ್ನು ನಿಯಮಿತವಾಗಿ ನಡೆಸಬೇಕು ಎಂದು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಾಪತ್ರ ಅವರು ಹೇಳಿದರು.



ಮಹಾನಗರ ಪಾಲಿಕೆಯ ಕುಡಿಯುವ ನೀರು ಸರಬರಾಜು ಸಿಬ್ಬಂದಿಗೆ ನೀರು ಪರೀ–ಕ್ಷೆಯ ಕಿಟ್ ಮೂಲಕ ವಾರ್ಡ ಮಟ್ಟದಲ್ಲಿ ನೀರನ್ನು ಪರೀಕ್ಷಿಸುವ ವಿಧಾನದ ಬಗ್ಗೆ ತಿಳಿಸಲು ವಲಯ ಕಚೇರಿಯ ಸಭಾಂಗಣದಲ್ಲಿ ಜುಲೈ 19ರಂದು ನಡೆದ ಕಾರ್ಯಗಾರದಲ್ಲಿ ಅವರು ಮಾತನಾಡಿದರು.

ಅಶುದ್ಧವಾದ ನೀರನ್ನು ಕುಡಿಯುವುದರಿಂದಲೇ ಬಹುತೇಕ ಕಾಯಿಲೆಗಳು ಒಕ್ಕರಿಸುತ್ತವೆ. ಶುದ್ಧವಾದ ನೀರನ್ನು ಕುಡಿದಾಗ ಮಾತ್ರ ಆರೋಗ್ಯ ಉತ್ತಮವಾಗಿರುತ್ತದೆ. ಆದ್ದರಿಂದ ನಗರದ ಸಾರ್ವಜನಿಕರ ಆರೋಗ್ಯ ಹಿತದೃಷ್ಟಿಯಿಂದಾಗಿ ಶುದ್ಧವಾದ ಕುಡಿಯುವ ನೀರನ್ನು ಪೂರೈಸಬೇಕು. ನೀರನ್ನು ಸ್ಥಾನಿಕವಾಗಿ ಸಂಗ್ರಹಿಸಿ ಎಫ್‌ಟಿಕೆ ಕಿಟ್‌ಗಳನ್ನು ಬಳಸಿ, ಪರೀಕ್ಷಿಸಿ ನೀರು ಕುಡಿಯಲು ಯೋಗ್ಯವಿದೆ ಎಂಬುದರ ಬಗ್ಗೆ ವರದಿ ಪಡೆದುಕೊಂಡೇ ನೀರು ಸರಬರಾಜು ಮಾಡಬೇಕು. ಈ ಕಾರ್ಯವು ಇನ್ಮುಂದೆ ಪ್ರತಿ ವಾರ್ಡಿನಲ್ಲಿ ನಿಯಮಿತವಾಗಿ ನಡೆಯಬೇಕು ಎಂದು ಆಯುಕ್ತರು ಕಟ್ಟುನಿಟ್ಟಿನ ಸೂಚನೆ ನೀಡಿದರು.ಕಾರ್ಯಗಾರದಲ್ಲಿ ಭಾಗಿಯಾಗಿದ್ದ ಕುಡಿಯುವ ನೀರು ಸರಬರಾಜು ಮಾಡುವ ಸಿಬ್ಬಂದಿ,ಎಂಜಿನಿಯರುಗಳು, ವಾಲ್ ಆಪರೇಟರ್ ಹಾಗು ಇನ್ನಿತರ ಸಿಬ್ಬಂದಿಗೆ ಎಫ್‌ಟಿಕೆ ಕಿಟ್‌ಗಳನ್ನು ಹೇಗೆ ಬಳಸಬೇಕು ಎಂಬುದರ ಬಗ್ಗೆ ಬಳಕೆ–ಯ ವಿಧಾನದ ಮಾಹಿತಿ ನೀಡಲಾಯಿತು.

ಕಾರ್ಯಗಾರದಲ್ಲಿ ಪಾಲಿಕೆಯ ಉಪ ಆಯುಕ್ತರಾದ ಮೇನಕಾ ಪಟೇಲ್,ಸಹಾಯಕ ಕಾರ್ಯಪಾಲಕ ಅಭಿಯಂತರಾದ ಮಹೇಶ್ ಕುಮಾರ್ ಮತ್ತು ಎಲ್ಲಾ ಎಂಜಿನಿಯರು ಉಪಸ್ಥಿತರಿದ್ದರು.

# ಹಾಗರಗಾ ವಸತಿ ಯೋಜನೆ: ನಿವೇಶನಕ್ಕೆ ಅರ್ಜಿ ಸಲ್ಲಿಸಲು ಜು.25ರ ವರೆಗೆ ದಿನಾಂಕ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.19 ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ಹಾಗರಗಾ ಗ್ರಾಮದಲ್ಲಿ ರೈತರ ಸಹಭಾಗಿತ್ವದೊಂದಿಗೆ ಅಭಿವೃದ್ಧಿಪಡಿಸಿದ 50:50 ವಸತಿ ಯೋಜನೆಯಡಿ ವಿವಿಧ ಅಳತೆಯ ನಿವೇಶನಗಳ ಹಂಚಿಕೆಗೆ ಸಾರ್ವಜನಿಕರು ಪ್ರಾಧಿಕಾರದಿಂದ ಪಡೆಯುವ ಅರ್ಜಿಯನ್ನು ಜುಲೈ 22ರ ವರೆಗೆ ಮತ್ತು ಭರ್ತಿ ಮಾಡಿದ ಅರ್ಜಿಯನ್ನು ಜು. 25ರ ವರೆಗೆ ಸಲ್ಲಿಕೆಗೆ ದಿನಾಂಕ ವಿಸ್ತರಿಸಲಾಗಿದೆ.ಈ ಹಿಂದೆ ನಿವೇಶನಗಳಿಗೆ ಪ್ರಾಧಿಕಾರದಿಂದ ಸಾರ್ವಜನಿಕರಿಗೆ ಅರ್ಜಿ ವಿತರಿಸುವ ದಿನಾಂಕ ಜುಲೈ 19 ಮತ್ತು ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ಕೊನೆಯ ಜುಲೈ 22 ಎಂದು ತಿಳಿಸಲಾಗಿತ್ತು.

ಇದೀಗ ನಿವೇಶನಗಳ ಹಂಚಿಕೆ ದಿನಾಂಕವನ್ನು ವಿಸ್ತರಿಸಲು ಸಾರ್ವಜನಿಕರು ಕೋರಿರುವುದರಿಂದ ಸಾರ್ವಜನಿಕ ಹಿತದೃಷ್ಟಿಯಿಂದ ಅರ್ಜಿಗಳನ್ನು ಸರ್ವಜನಿಕರಿಗೆ ವಿತರಿಸುವ ಕೊನೆಯ ದಿನಾಂಕ ಜುಲೈ 22ರ ಸಾಯಂಕಾಲ 5.30 ಗಂಟೆ ಹಾಗೂ ಭರ್ತಿ ಮಾಡಿದ ಅರ್ಜಿಗಳನ್ನು ಪ್ರಾಧಿಕಾರಕ್ಕೆ ಸಲ್ಲಿಸುವ ಕೊನೆಯ ದಿನಾಂಕವನ್ನು ಜುಲೈ 25ರ ಸಾಯಂಕಾಲ 5.30 ರವರೆಗೆ ಅವಧಿ ವಿಸ್ತರಿಸಲಾಗಿದೆ. ಸಾರ್ವಜನಿಕರು ಅವಧಿ ವಿಸ್ತರಣೆಯ ಸದುಪಂಯೋಗಪಡೆದುಕೊಳ್ಳಬೇಕಂದು ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್ ಮತ್ತು ಆಯುಕ್ತ ಜಿ. ಎಸ್.ಮಳಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಯಶಸ್ವಿಯಾಗಿ ಜರುಗಿದ ಗ್ರಾಮ ಸಭೆ

# ನರೇಗಾ ಯೋಜನೆಯ ಲಾಭ ಪಡೆದುಕೊಳ್ಳಿ:- ರಾಹುಲ್ ಕೈವಾರೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ತಾಲ್ಲೂಕಿನ ಮೀನಕೇರಾ ಗ್ರಾಮ ಪಂಚಾಯತ್ ಆವರಣದಲ್ಲಿ 2025-26ನೇ ಸಾಲಿನ ಸಾಮಾಜಿಕ ಪರಿಶೋಧನೆ ಗ್ರಾಮ ಸಭೆ ಜರುಗಿತ್ತು. ಸಾಮಾಜಿಕ ಲೆಕ್ಕ ಪರಿಶೋಧನೆ ಕಾರ್ಯಕ್ರಮದ ತಾಲೂಕ ವ್ಯವಸ್ಥಾಪಕ ರಾಹುಲ್ ಕೈವಾರೆ ಮಾತನಾಡಿ, ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಗಂಡು ಹೆಣ್ಣಿಗೂ ಸಮಾನ ಕೆಲಸ ಹಾಗೂ ಸಮಾನ ವೇತನ ನೀಡಲಾಗುತ್ತಿದೆ. ಪ್ರತಿಯೊಂದು ಕುಟುಂಬಕ್ಕೂ ವರ್ಷಕ್ಕೆ 100 ದಿನಗಳ ಕೆಲಸ ನೀಡಲಾಗುತ್ತಿದ್ದು, ಪ್ರತಿಯೊಬ್ಬರು ಯೋಜನೆಯ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ 15ನೇ ಹಣಕಾಸು ಆಯೋಗದ ಅನುದಾನ ಮತ್ತು 2020-21ನೇ ಸಾಲಿನಿಂದ 2024-25ನೇ ಸಾಲಿನ ವರೆಗೆ ಜಿಲ್ಲಾ ಮತ್ತು ತಾಲೂಕು ಪಂಚಾಯತನ ರಾಜ್ಯ ಹಣಕಾಸು ಆಯೋಗದ ಅನುದಾನದಡಿ ಅನುಷ್ಠಾನ ಮಾಡಿರುವ ಕಾಮಗಾರಿಗಳ/ ಚಟುವಟಿಕೆಗಳ ಬಗ್ಗೆ ಮಾಹಿತಿ ನೀಡಿದರು. ಸಾಮಾಜಿಕ ಪರಿಶೋಧನೆ ಪ್ರಕ್ರಿಯೆಯಲ್ಲಿ ಕಂಡು ಬಂದಿರುವ ಅಂಶಗಳ ಬಗ್ಗೆ ಮಾಹಿತಿ ನೀಡಿದರು. ಅದರಂತೆ ಸಭೆಯಲ್ಲಿ ತಿರ್ಮಾನಗಳು ಕೈಗೊಳಲಾಯಿತು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷ ಶ್ರೀಕಾಂತ ಪಾಟೀಲ್, ಅಭಿವೃದ್ದಿ ಅಧಿಕಾರಿ ಪ್ರವೀಣಕುಮಾರ್ ಮಠಪತಿ, ಐಇಸಿ ಸಂಯೋಜಕ ವಿಶ್ವನಾಥ ಗಡ್ಡಿಮನಿ, ತಾಂತ್ರಿಕ ಸಹಾಯಕ ಸುಧಾಕರ ಪಾಟೀಲ್, ಮಹೇಬೂಬ್, ವಿರೋಪಕ್ಷ, ಬಿಎಫ್ಟಿ ರಜನಿಕಾಂತ್ ಸೇರಿದಂತೆ ಗ್ರಾಮ ಪಂಚಾಯತ ಸಿಬ್ಬಂದಿ ವರ್ಗದವರು ಸೇರಿದಂತೆ ಕೂಲಿ ಕಾರ್ಮಿಕರು ಉಪಸ್ಥಿತರಿದ್ದರು.

## ಮೈಸೂರು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ: ವಿವಿಧ ಕೋರ್ಸುಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜು.19-ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ 2025-26ನೇ ಸಾಲಿನ (ಜುಲೈ ಆವೃತ್ತಿಯ) ಈ ಕೆಳಕಂಡ ವಿವಿಧ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಪ್ರಾದೇಶಿಕ ಕೇಂದ್ರದ ನಿರ್ದೇಶಕರು ತಿಳಿಸಿದ್ದಾರೆ.

ಪ್ರಥಮ ಬಿ.ಎ., ಬಿ.ಕಾಂ., ಬಿ.ಎಲ್‌ಎಲ್‌ಐಬಿ.ಐ.ಎಸ್ಸಿ, ಬಿ.ಎಸ್ಸಿ, ಬಿ.ಬಿ.ಎ., ಬಿ.ಸಿ.ಎ. ಹಾಗೂ ಪ್ರಥಮ ಎಂ.ಎ.: ಕನ್ನಡ, ಇಂಗ್ಲೀಷ, ಹಿಂದಿ, ಉರ್ದು, ಇತಿಹಾಸ, ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ಸಮಾಜಶಾಸ್ತ್ರ, ಸಾರ್ವಜನಿಕ ಆಡಳಿತ, ಸಮೂಹ ಸಂವಹನ ಮತ್ತು ಪತ್ರಿಕೋದ್ಯಮ, ಎಂ.ಕಾಂ., ಎಂ.ಬಿ.ಎ., ಬಿ.ಎಲ್‌ಎಲ್‌ಐಬಿ.ಐ.ಎಸ್ಸಿ, ಎಂ.ಎಸ್.ಸಿ., ಎಂ.ಎಸ್.ಡಬ್ಲ್ಯೂ, ಬಿ.ಎಸ್.ಡಬ್ಲ್ಯೂ., ಎಂ.ಸಿ.ಎ. ಹಾಗೂ ಡಿಪ್ಲೋಮಾ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ಅರ್ಜಿ ಸಲ್ಲಿಸಬಹುದಾಗಿದೆ. ಬಿಪಿಎಲ್ ಕಾರ್ಡ್ ಹೊಂದಿರುವ ಮಹಿಳಾ ವಿದ್ಯಾರ್ಥಿಗಳಿಗೆ ಬೋಧನಾ ಶುಲ್ಕದಲ್ಲಿ ಶೇ.10ರಷ್ಟು ವಿನಾಯಿತಿ ನೀಡಲಾಗಿದೆ. ದಂಡ ಶುಲ್ಕವಿಲ್ಲದೇ ಪ್ರವೇಶ ಪಡೆಯಲು 2025ರ ಸೆಪ್ಟೆಂಬರ್ 15 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಪ್ರಾದೇಶಿಕ ಕೇಂದ್ರ, ಕನ್ನಡ ಅಧ್ಯಯನ ಸಂಸ್ಥೆ, ಗುಲಬರ್ಗಾ ವಿಶ್ವವಿದ್ಯಾಲಯ ಆವರಣ ಕಲಬುರಗಿ ಕಚೇರಿಯನ್ನು ಹಾಗೂ ಪ್ರಾದೇಶಿಕ ಕೇಂದ್ರದ ನಿರ್ದೇಶಕರಾದ ಡಾ. ಸಂಗಮೇಶ ಹಿರೇಮಠ ಇವರ ಮೊಬೈಲ್ ಸಂಖ್ಯೆ 9916783555 ಹಾಗೂ ವಿಶ್ವವಿದ್ಯಾಲಯದÀ www. ksoumysuru.ac.in ವೆಬ್‌ಸೈಟ್‌ನ್ನು ಸಂಪರ್ಕಿಸಲು

## ಕಮ್ಯುನಿಟಿ ಮೊಬಿಲೈಜರ್ ಹುದ್ದೆಯನೇಮಕಾತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.19-ಕಲಬುರಗಿ ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ 2.0ರ ಅಡಿ ಐ.ಇ.ಸಿ. ಚಟುವಟಿಕೆಗಳನ್ನು ಕೈಗೊಳ್ಳಲು ಸ್ವಸಹಾಯ ಗುಂಪು (ಓಗಐಒ ಖಊಉ) ಸದಸ್ಯರನ್ನು ಕಮ್ಯುನಿಟಿ ಮೊಬಿಲೈಜರ್ ಹುದ್ದೆಗೆ ನೇಮಕಾತಿ ಮಾಡಿಕೊಳ್ಳಲು ಆಸಕ್ತಿಯುಳ್ಳ ನಲ್ಮ್-ಡೇ ಅಡಿ ನೋಂದಾಯಿತ ಎಸ್. ಹೆಚ್.ಜಿ. ಸದಸ್ಯರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಾನಗರಪಾಲಿಕೆಯ ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ) ಅವರು ತಿಳಿಸಿದ್ದಾರೆ.

ಮೂರು ವರ್ಷಗಳವರೆಗೆ ಮಹಾನಗರಪಾಲಿಕೆ ವ್ಯಾಪ್ತಿಯ ಐ.ಇ.ಸಿ. ಚಟುವಟಿಕೆಗಳನ್ನು ಕೈಗೊಳ್ಳಲು ಆಸಕ್ತಿ ಹೊಂದಿರುವ ನಲ್ಮ್-ಡೇ ಅಡಿಯಲ್ಲಿ ನೋಂದಾಯಿತ ಎಸ್. ಹೆಚ್.ಜಿ. ಸದಸ್ಯರು ಕಮ್ಯುನಿಟಿ ಮೊಬಿಲೈಜರ್ ಹುದ್ದೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಇದರ ಟಿಓಆರ್ (ಖಿಂಖ) ಆಯ್ಕೆ ಪ್ರಕ್ರಿಯೆ ಮತ್ತು ಗೌರವಧನಕ್ಕೆ ಸಂಬಂಧಿಸಿದ ಇತರೆ ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು/ ಮುಖ್ಯಾಧಿಕಾರಿಗಳನ್ನು ಸಂಪರ್ಕಿಸಬೇಕು. ಆಸಕ್ತಿಯುಳ್ಳ ನಲ್ಮ್-ಡೇ ಅಡಿಯಲ್ಲಿ ನೋಂದಾಯಿಸಿಕೊಂಡ ಆಸಕ್ತ ಎಸ್.ಹೆಚ್.ಜಿ. ಸದಸ್ಯರು ತಮ್ಮ ಇಚ್ಛಾನುಸಾರ ನಲ್ಮ್-ಡೇ ಹಿಂಬರಹದೊಂದಿಗೆ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು/ ಮುಖ್ಯಾಧಿಕಾರಿಗಳ ಕಚೇರಿಗೆ ಭೇಟಿ ನೀಡಿ ಲಭ್ಯವಿರುವ ನಿಗದಿತ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಮಾಡಿ ಅವಶ್ಯಕ ದಾಖಲಾತಿಗಳನ್ನು ಲಗತ್ತಿಸಿ 2025ರ ಆಗಸ್ಟ್ 2ರ ಸಂಜೆ 5 ಗಂಟೆಯ ರೊಳಗಾಗಿ ಖುದ್ದಾಗಿ ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು/ ಮುಖ್ಯಾಧಿಕಾರಿಗಳ ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು.

ಅಭ್ಯರ್ಥಿಗಳಿಗೆ ಈ ವಿಷಯದ ಕುರಿತು ಅವರಿಗೆ ಇರುವ ಆಸಕ್ತಿ, ಜ್ಞಾನ ಕೌಶಲ್ಯ. /ಮಾಹಿತಿಯ ಕುರಿತು ನಿರ್ಣಯಿಸಲು ಸಂದರ್ಶನವನ್ನು ಆಯೋಜಿಸಿ ಆಯ್ಕೆ ಮಾಡಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.



ಹುಮ್ನಾಬಾದ್.. ಸಂಚಾರಿ ಪೊಲೀಸ್ ಠಾಣೆಯ ಪಿಎಸ್‌ಐ ರವರು ಹುಮ್ನಾಬಾದ್ ಪೊಲೀಸ್ ಉಪ ವಿಭಾಗದ ಡಿವೈಎಸ್ಪಿ ಜೆಎಸ್ ನ್ಯಾಮೇಗೌಡರ್ ರವರಿಗೆ ಹುಲೆಪ್ಪ ಪಿಎಸ್‌ಐರವರು ಸನ್ಮಾನಿಸಿ ಗೌರವಿಸಿದರು. (ಮಲ್ಲಮ್ಮ ನುಡಿ ಚಿತ್ರ)

# ಮನೆ ಮನೆಗೆ ಪೊಲೀಸ್ ಭೇಟಿ





ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಪೊಲೀಸ್ ಇಲಾಖೆಯಿಂದ ಸಾರ್ವಜನಿಕರ ಸುರಕ್ಷತೆಗಾಗಿ ಸರಕಾರ ರೂಪಿಸಲಾದ ಮನೆ ಮನೆಗೆ ಪೊಲೀಸ್ ಎಂಬ ವಿನೂತನ ಕಾರ್ಯಕ್ರಮಕ್ಕೆ ತಾಲೂಕಿನಲ್ಲಿ ಶನಿವಾರ ಚಾಲನೆ ನೀಡಲಾಯಿತು.

ರಾಜ್ಯದ ಗೃಹ ಮಂತ್ರಿಗಳ ಮಹತ್ವಾಕಾಂಕ್ಷಿ ಯೋಜನೆ ಇದಾಗಿದ್ದು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಮಾರ್ಗದರ್ಶನದಲ್ಲಿ ಪಟ್ಟಣದ ಟೀಚರ್ಸ್ ಕಾಲೋನಿ, ಹುಸೇನಿ ಅಲಂ ಕಾಲೋನಿಯಲ್ಲಿ ಮನೆ ಮನೆಗೆ ಪೊಲೀಸ್ ಕಾರ್ಯಕ್ರಮಕ್ಕೆ ಸಿಪಿಐ ಶ್ರೀನಿವಾಸ ಅಲ್ಲಾಪುರ್ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಸಾರ್ವಜನಿಕರಿಗೆ ಅತ್ಯುತ್ತಮ ಸೇವೆ ಒದಗಿಸುವ ಉದ್ದೇಶದಿಂದ ಇಂತಹದೊಂದು ವಿನೂತನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸೈಬರ್ ಅಪರಾಧ, ಕರ್ನಾಟಕ ಡ್ರಗ್ಸ್ ಫ್ರೀ ಆಪ್, ಬಾಲ್ಯವಿವಾಹ ನಿಷೇಧ ಕಾಯ್ದೆ, ಸಾಮಾಜಿಕ ಜಾಲ ತಾಣಗಳಲ್ಲಿ ಬರುವ ಸತ್ಯಾಸತ್ಯತೆ ಬಗ್ಗೆ, ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೇಟ್ ಧರಿಸುವುದು, ಕಾರಿನಲ್ಲಿ ಸಂಚರಿಸುವವರು ಸೀಟ್ ಬೆಲ್ಟ್ ಧರಿಸುವುದು ಸೇರಿದಂತೆ ಇತರೆ ಸುರಕ್ಷತಾ ಕ್ರಮಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಕಾರ್ಯ ಮಾಡಲಾಗುತ್ತದೆ ಎಂದರು.

ಪುರಷ ಪೊಲೀಸ್ ಹಾಗೂ ಮಹಿಳಾ ಪೊಲೀಸ್ ಸಿಬ್ಬಂದಿಗಳು ಸೇರಿದ ತಂಡವು ಮನೆ ಮನೆಗೆ ತೆರಳಿ ಸಾರ್ವಜನಿಕರ ಸುರಕ್ಷತೆಗಾಗಿ ಕೈಗೊಂಡ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುತ್ತದೆ. ಸಾರ್ವಜನಿಕರು ವಾಸಿಸುವ ಮನೆ ಮತ್ತು ವಾರ್ಡಗಳಲ್ಲಿ ಹೆಚ್ಚಿನ ಭದ್ರತೆಗಾಗಿ, ಸಿಸಿಟಿವಿ ಅಳವಡಿಸುವ ಕುರಿತು ಜನರಲ್ಲಿ ಜಾಗೃತಿ ಮೂಡಿಸುವದರ ಜೊತೆಗೆ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿ ಸಣ್ಣ ಪುಟ್ಟ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಪರಿಹಾರ ಕಂಡುಕೊಳ್ಳುವ ಕೆಲಸ ಮಾಡಲಾಗುತ್ತಿದೆ. ಪ್ರಭಾರಿ ಬಿಟಿ, ಬಿಟಿ ಸಿಬ್ಬಂದಿಗಳ ಮೊಬೈಲ್ ನಂಬರಗಳನ್ನು ಸಾರ್ವಜನಿಕರಿಗೆ ಕೊಟ್ಟಿದ್ದು, ತುರ್ತು ಪರಿಸ್ಥಿತಿಯಲ್ಲಿ 112ಗೆ ಕರೆ ಮಾಡಲು ತಿಳಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಪಿಎಸ್‌ಐ ಬಸವಲಿಂಗ ಎಂ. ಗೋಧಿಹಾಳ, ಕ್ರೈಂ ಪಿಎಸ್‌ಐ ಶಿವರಾಜ್, ಪುರಸಭೆ ಸದಸ್ಯ ನಸೀರ್ ಹಕಿಮ್, ಎಎಸ್‌ಐಗಳಾದ ಶಫಿಯುದ್ದೀನ, ಭೀಮರಾವ ರಾಠೋಡ, ಪುಟ್ನಂಜ, ಸಿಬ್ಬಂದಿಗಳಾದ ವಸಂತ ದುರ್ಗೆ, ವಿಜಯಕುಮಾರ್ ಬರ್ಮಾ, ಪ್ರೇಮ ರಾಠೋಡ, ಜಗನಾಥ, ರಾಜಕುಮಾರ ಪ್ರಮುಖರಾದ ನಿಜಾಮ ಹಕಿಮ್ ಸೇರಿದಂತೆ ಓಣಿಯವರು ಉಪಸ್ಥಿತರಿದ್ದರು.

## ಪರಿಸರ ಸಮತೋಲನ ಕಾಪಾಡುವಲ್ಲಿ ವನ್ಯ ಪ್ರಾಣಿಗಳ ಪಾತ್ರ ಅದ್ಭುತ



ಮಲ್ಲಮ್ಮ ನುಡಿ ವಾರ್ತೆ

ಹುಮ್ನಾಬಾದ್:ಪರಿಸರಸಮತೋಲನ ಕಾಪಾಡುವಲ್ಲಿ ವನ್ಯಪ್ರಾಣಿಗಳ ಪಾತ್ರ ಅದ್ಭುತವಾಗಿದೆ ಎಂದು ಪರಿಸರ ವಾಹಿನಿ ಬೀದರ್ ಅಧ್ಯಕ್ಷ ಶೈಲೇಂದ್ರ ಕಾವಡಿ ತಾಲೂಕಿನ ಧುಮ್ಮನ್ಸೂರು ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಪರಿಸರ ಜಾಗೃತಿ ಮಾಹಿತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ತಿಳಿಸಿದರು ,

ಪ್ರಾಣಿಪಕ್ಷಿಗಳು ಮಾನವನೀಗಿಂತ ಬುದ್ಧಿಜೀವಿಗಳಾಗಿವೆ. ವನ್ಯಜೀವಿಗಳು ಪ್ರಕೃತಿ ವಿಕೋಪ ಸಂಭವಿಸುವ ಅದ್ಭುತ ಮುನ್ಸೂಚನೆ ಅರಿಯುವ ಅದ್ಭುತ ಶಕ್ತಿ ಹೊಂದಿವೆ ಪ್ರಾಣಿ ಪಕ್ಷಿಗಳನ್ನು ಬೇಟೆಯಾಡಿದರೆ ಮಹಾಅಪರಾದ. ವನ್ಯಪ್ರಾಣಿಗಳು ದೇಶ ಸಂಪತ್ತು. ಉಳಿಸಿ ಸಂರಕ್ಷಿಸಲು ಪ್ರತಿಯೊಬ್ಬರು ವಿಶೇಷ ಕಾಳಜಿ ವಹಿಸಬೇಕು.

ವಿದ್ಯಾರ್ಥಿಗಳಿಗೆ ಪ್ರಾಥಮಿಕ ಹಂತದಲ್ಲಿ ಪರಿಸರ ಕಾಳಜಿಯ ಬಗ್ಗೆ ಜಾಗೃತಿ ಒಡ ಮೂಡಿಸಿದರೆ ಭವಿಷ್ಯದಲ್ಲಿ ಪರಿಸರ ಕಾಳಜಿ ವಹಿಸಲು ಸಹಾಯವಾಗುತ್ತದೆ ಎಂದು ಶೈಲೇಂದ್ರ ಕಾವಡಿ ತಿಳಿಸಿದರು,

ಜಿಲ್ಲಾ ಹೈನುಗಾರಿಕಾ ಸಮನ್ವಯ ಅಧಿಕಾರಿಯವರು ಅರುಣ್ ಕುಮಾರ್ ಮುಖ್ಯ ಅತಿಥಿ-ಯಾಗಿ ಮಾತನಾಡಿ ಶ್ರೀ ಕ್ಷೇತ್ರ ಧರ್ಮಸ್ಥಳ ಸಂಸ್ಥೆಯು ಪರಿಸರ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಿದೆ ರಾಜ್ಯಾದ್ಯಂತ ಒಂದು ಲಕ್ಷ ಸಸಿ ನೆಡುವ ಗುರಿ ಹೊಂದಿದೆ . ಪ್ರತಿವರ್ಷ ವಿದ್ಯಾರ್ಥಿಗಳಿಗೆ ಪರಿಸರ ಅರಿವು ಮೂಡಿಸಲು ಜಾಗೃತಿ ಕಾರ್ಯಕ್ರಮಗಳನ್ನು ಸಂಸ್ಥೆಯ ವತಿಯಿಂದ ಪರಿಸರ ಜಾಗೃತಿ ಮಾಹಿತಿ ಕಾರ್ಯಕ್ರಮಗಳನ್ನು ಮಾಡಲಾಗುತ್ತಿದೆ. ಶಾಲೆಯ ಮುಖ್ಯಗುರುಗಳಾದ ಶಿವರಾಜ ಮೇತ್ರಿ ಅಧ್ಯಕ್ಷತೆ ವಹಿಸಿದರು, ವಲಯದ ಮೇಲ್ವಿಚಾರಕರಾದ ಮಲ್ಲಯ್ಯ ಹಿರೇಮಠ ಅವರು ವಾಸ್ತವಿಕ ಮಾತನಾಡಿದರು. ಶಾಲಾ ಆವರಣದಲ್ಲಿ ಕಾರ್ಯಕ್ರಮದ ಸವಿನೆನಪಿಗಾಗಿ ಸಸಿ ನೆಡಿಸಲಾಯಿತು ಹಾಗೂ ವಿದ್ಯಾರ್ಥಿಗಳಿಗೆ ಸಸಿ ವಿತರಿಸಲಾಯಿತು ಸಿದ್ಧಾರೂಢ ಶಾಲಾ ಮಕ್ಕಳು ಉಪಸ್ಥಿತರಿದ್ದರು

ಶಿವಾನಂದ್ ಕೃಷಿ ಮೇಲ್ವಿಚಾರಕರು ಸ್ವಾಗತಿಸಿದರು

ಈ ಕಾರ್ಯಕ್ರಮದಲ್ಲಿ ಸೇವಾ ಪ್ರತಿನಿಧಿಯಾದ ಸಂಗೀತ ಹಾಗೂ ಸಿ ಎಸ್ ಸಿ ಸೇವಾದಾರರು ನಿವೇದಿತಾ ಉಪಸ್ಥಿತರಿದ್ದರು ಹಾಗೂ ಸಹಾಯಕ ಪ್ರಬಂಧ ಶಿವಕಾಂತ್ ಕೊನೆಯಲ್ಲಿ ವಂದಿಸಿದರು.

## ಜಲಜೀವನ ಮೀಷನ್ ಕಾಮಗಾರಿಗಳು ಪರಿವೀಕ್ಷಣೆ ಮಾಡಿದ ಜಿಲ್ಲಾ ಪಂಚಾಯತ ಸಿಇಓ ಡಾ.ಗಿರೀಶ್ ಬದೋಲೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜುಲೈ.19-- ಭಾಲ್ಕಿ ತಾಲ್ಲೂಕಿನ ಬಹುಗ್ರಾಮ ಕುಡಿಯುವ ನೀರು ಯೋಜನೆಗಳಾದ 1) Multi Village water supply scheme to Alwai & Other 2 Habitaions in Bhalki taluka of Bidar Dist, 2) MULTI VILLAGE WATER SUPPLY SCHEME FOR MEHKAR & OTHER 4 HABITATIONS IN BHALKI TALUK OF BIDAR DISTRICT, 3) Multi village water supply Scheme to Wanjarkhed & other 5 habitations in Bhalki taluka of Bidar Dist ಕಾಮಗಾರಿಯನ್ನು ಪರಿವೀಕ್ಷಣೆ ಕೈಗೊಂಡು ಸದರಿ ಯೋಜನೆಯಡಿ ಕೈಗೊಳ್ಳಲಾಗುವ WTP, Jackwell, Sump, MBR, Rising main, Distribution & Water Source, ಗಳನ್ನು ಪರಿಶೀಲಿಸಿ ಸದರಿ ಕಾಮಗಾರಿಗಳು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಗ್ರಾ.ಕು.ನೀ ಮತ್ತು ನೈ. ಉಪ-ವಿಭಾಗ ಭಾಲ್ಕಿ ಹಾಗೂ ಸಂಬಂಧಪಟ್ಟ ಗುತ್ತಿಗೆದಾರರಿಗೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ್ ಬದೋಲೆ ಸೂಚಿಸಿದರು.


ಅವರು ಶನಿವಾರ ಭಾಲ್ಕಿ ತಾಲ್ಲೂಕಿನ ಅಳವಾಯಿ, ಮೇಹಕರ, ಅಟರರ್ಗಾ, ಹಾಗೂ ಸಾಯಿಗಾಂವ ತಾಂಡಾ ಗ್ರಾಮಗಳ ಜಲ ಜೀವನ ಮೀಷನ್ ಕಾಮಗಾರಿಗಳ ಪರಿವೀಕ್ಷಣೆ ಮಾಡಿ ಮಾತನಾಡಿದರು.

ಅಟರರ್ಗಾ ಗ್ರಾಮ ಪಂಚಾಯತಿಯ ಅಟರರ್ಗಾ ಗ್ರಾಮ ಹಾಗೂ ಸಾಯಗಾಂವ ಗ್ರಾಮ ಪಂಚಾಯತಿಯ ಸಾಯಗಾಂವ ತಾಂಡಾ ಗ್ರಾಮದ ಜಲ ಜೀವನ ಮೀಷನ ಯೋಜನೆಯ ಎಕ ಗ್ರಾಮ ಕುಡಿಯುವ ನೀರಿನ ಯೋಜನೆ ಕಾಮಗಾರಿಗಳನ್ನು ಪರಿಶೀಲಿಸಲಾಗಿದ್ದು ಸದರಿ ಗ್ರಾಮಗಳ ಕಾಮಗಾರಿಗಳು ಇಗಾಗಲೇ ಹರ್ ಘರ್ ಜಲ್ ಗ್ರಾಮವೆಂದು ಘೋಷಿಸಿ ಗ್ರಾಮ ಪಂಚಾಯತಿಗಳಿಗೆ ಹಸ್ತಾಂತರಿಸಲಾಗಿದೆ. ಸದರಿ ಯೋಜನೆಯ ಕಾಮಗಾರಿಗಳ ಕಾರ್ಯಚರಣೆ ಮತ್ತು ನಿರ್ವಹಣೆಯು ಗ್ರಾಮ ಪಂಚಾಯತಿ ಯಿಂದ ನಿರ್ವಹಿಸಿ ಗ್ರಾಮದ ಪ್ರತಿಯೊಬ್ಬ ನಾಗರಿಕರಿಗೆ ಶುದ್ಧ ಕುಡಿಯುವ ನೀರು ಪೂರೈಸಲು ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಅಟರರ್ಗಾ ಹಾಗೂ ಸಾಯಗಾಂವ ಅವರಿಗೆ ತಿಳಿಸಿದರು.

ಭಾಲ್ಕಿ ತಾಲೂಕಿನ ಅಳವಾಯಿ ಗ್ರಾಮ ಪಂಚಾಯತಿಯ ಅಳವಾಯಿ ಗ್ರಾಮ ಹಾಗೂ ಮೇಹಕರ ಗ್ರಾಮ ಪಂಚಾಯತಿಯ ಮೇಹಕರ ಗ್ರಾಮಗಳ ಜಲ ಜೀವನ ಮೀಷನ ಯೋಜನೆಯ ಕಾಮಗಾರಿಗಳು ಪರಿಶೀಲಿಸಲಾಗಿದ್ದು ಸದರಿ ಕಾಮಗಾರಿಗಳು ಪ್ರಗತಿಯಲ್ಲಿರುವುದರಿಂದ, ಗುಣಮಟ್ಟದಿಂದ ಕೈಗೊಳ್ಳಲು ಹಾಗೂ ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಗ್ರಾ.ಕು.ನೀ&ನೈ. ಉಪ-ವಿಭಾಗ ಭಾಲ್ಕಿ ಹಾಗೂ ಸಂಬಂಧಪಟ್ಟ ಗುತ್ತಿಗೆದಾರರಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಭಾಲ್ಕಿ ತಾಲ್ಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ, ಭಾಲ್ಕಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ-ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಮಾಣಿಕರಾವ ಕೇರೂರೆ, ಬೀದರ ಜಿಲ್ಲಾ ಪಂಚಾಯತ ಜಿಲ್ಲಾ ಯೋಜನಾ ವ್ಯವಸ್ಥಾಪಕ ಪತ್ರು ಜೇ. ಶಾಖಾಧಿಕಾರಿಗಳು ಗ್ರಾ. ಕು.ನೀ ಮತ್ತು ನೈಉವಿ ಭಾಲ್ಕಿ ಹಾಗೂ ಭಾಲ್ಕಿ ತಾಲ್ಲೂಕಿನ ಅಳವಾಯಿ, ಅಟರರ್ಗಾ, ಮೇಹಕರ ಮತ್ತು ಸಾಯಿಗಾಂವ ಗ್ರಾಮಗಳ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ನ್ಯಾಯ ಬೆಲೆ ಅಂಗಡಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು:- ಡಾ. ರವಿ ಸ್ವಾಮಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಸರ್ಕಾರದ ನಿಯಮದಂತೆ ಕೆಲಸ ನಿರ್ವಹಣೆ ಮಾಡುವಲ್ಲಿ ಉದಾಸೀನತೆ ಮಾಡುತ್ತಿರುವ ತಾಲೂಕಿನ ನ್ಯಾಯ ಬೆಲೆ ಅಂಗಡಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಕನ್ನಡ ಸೇನೆ ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ ಆಗ್ರಹಿಸಿದರು. ಪಟ್ಟಣದಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ನಿರೀಕ್ಷಕರಿಗೆ ಮನವಿ ಪತ್ರ ಸಲ್ಲಿಸಿ ಮಾತನಾಡಿದ ಅವರು, ತಾಲೂಕಿನಲ್ಲಿರುವ ನ್ಯಾಯಬೆಲೆ ಅಂಗಡಿಗಳು ಸಮಯಕ್ಕೆ ಸರಿಯಾಗಿ ಆರಂಭವಾಗುತ್ತಿಲ್ಲ. ಅವರು ಮನಬಂದಂತೆ ಅಂಗಡಿಗಳು ನಡೆಸುತ್ತಿದ್ದಾರೆ. ಸರಕಾರದ ನಿಯಮಗಳು ಸರಿಯಾಗಿ ಪಾಲಿಸುತ್ತಿಲ್ಲ. ಬಡ ಜನರಿಗೆ ಬಹಳಷ್ಟು ತೊಂದರೆ ಮಾಡುತ್ತಿದ್ದಾರೆ. ಸರಕಾರದ ನಿಯಮದಂತೆ ಕೆಲಸ ನಿರ್ವಹಣೆ ಮಾಡಬೇಕು.

ಒಂದು ವೇಳೆ ಸರ್ಕಾರದ ನಿಯಮಗಳು ಪಾಲಿಸದೆ ಹೋದಲ್ಲಿ ಅಂತಹ ನ್ಯಾಯಬೆಲೆ ಅಂಗಡಿಗಳನ್ನು ಈ ತಕ್ಷಣವೇ ರದ್ದುಗೊಳಿಸಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ತಾಲೂಕಾಧ್ಯಕ್ಷ ಪವನ ಪೂಜಾರಿ, ತಿಪಣ್ಣ ಇಟಗಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಶಾಲೆಗಳೆ ಜೀವಂತ ದೇವಾಲಯ : ಮಾರುತಿ ಹುಜರಾತಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸೇಡಂ.



ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಜೂ, 19. ತಾಲೂಕಿನ ಮಲ್ಕಾಪಲ್ಲಿ, ಸ.ಹಿ.ಪ್ರಾ.ಶಾಲೆಯಲ್ಲಿ ಯೂಥ್ ಫಾರ ಸೇವಾ ಹುಬ್ಬಳ್ಳಿ ಸಂಸ್ಥೆ ವತಿಯಿಂದ 256 ಮಕ್ಕಳಿಗೆ ಉಚಿತವಾಗಿ ಶಾಲಾ ಬ್ಯಾಗ್ ಮತ್ತು ಕಿಟ್ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿದ ಸೇಡಂನ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಮಾರುತಿ ಹುಜರಾತಿ ರವರು, ಮಕ್ಕಳೇ ದೇವರುಗಳು, ಶಾಲೆಗಳೆ ಜೀವಂತ ದೇವಾಲಯ ಎಂದು ಮತ್ತು ಮಕ್ಕಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಣ ಅತಿ ಮಹತ್ತರವಾದದ್ದು ಎಂದು ಮಾತುಗಳನ್ನಾಡಿದರು.

ಕಾರ್ಯಕ್ರಮದಲ್ಲಿ ಬಿ.ಆರ್.ಪಿ ಗಳಾದ ಶಿವಕುಮಾರ್, ಸಿ.ಆರ್.ಪಿ ಗಳಾದ ಬಂಡೆಪ್ಪ , ಕಾಶೀನಾಥ , ಎ.ಪಿ.ಎಫ್ ತಾಲೂಕು ಸಂಯೋಜಕರಾದ ಗಂಗಾಧರ ಸ್ವಾಮಿ, ಊರಿನ ಹಿರಿಯರಾದ ಶಂಕರ್ ಗೌಡ ಪಾಟೀಲ್, ವೆಂಕಟರೆಡ್ಡಿ ,ಬಸ ರೆಡ್ಡಿ, ಗ್ರಾಮ ಪಂಚಾಯತ್ ಸದಸ್ಯರುಗಳಾದ ನವದ್ ರೆಡ್ಡಿ, ವಿಜಯ್ ಕುಮಾರ್, ವೆಂಕಟಪ್ಪ, ಸಾಮವೇಲ್ , ಖಿಏಆಖಿಆಕ ಯ ರಾಚಪ್ಪ ರವರು ಉಪಸ್ಥಿತರಿದ್ದರು. ಶಾಲೆಯ ಮುಖ್ಯಗುರುಗಳಾದ ದೇವರಾಜ ಕೋರಿ ಅಧ್ಯಕ್ಷತೆ ವಹಿಸಿದ್ದರು.

ಶಿಕ್ಷಕಿ ಶ್ರೀಮತಿ ಪ್ರತಿಮಾ ನಿರೂಪಿಸಿದರು, ಮೊಗಲಪ್ಪ ಸ್ವಾಗತಿಸಿದರು. ದೇವರಾಜು ರವರು ವಂದಿಸಿದರು.

## ಗ್ರಾಮೀಣ ಪ್ರದೇಶದಲ್ಲಿ ಜಿಪಂ ಸಿಇಓ ಸಂಚಾರ: ಶಾಲೆಗೆ ಭೇಟಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 19- ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕಾಂದೂ ಅವರು ಜುಲೈ 19ರಂದು ಗ್ರಾಮೀಣ ಭಾಗದಲ್ಲಿ ಪ್ರವಾಸ ಕೈಗೊಂಡು ಮಸ್ಕಿ ತಾಲೂಕಿನ ವಟಗಲ್ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಗೆ ಭೇಟಿ ನೀಡಿದರು.

ಕೂಲಿ ಕಾರ್ಮಿಕರ ಮಕ್ಕಳ ಪಾಲನೆಪೋಷಣೆಗಾಗಿ ಆರಂಭಿಸಿದ ಕೂಸಿನ ಮನೆಯ ವೀಕ್ಷಣೆ ನಡೆಸಿದ ಸಿಇಓ ಅವರು ಅಲ್ಲಿನ ಮಕ್ಕಳ ಹಾಜರಾತಿ ಮತ್ತು ಶಿಶು ಪಾಲಕಿಯರ ಕಾರ್ಯವೈಖರಿಯ ಬಗ್ಗೆ ಪರಿಶೀಲಿಸಿದರು.

ಪ್ರತಿನಿತ್ಯ ಶಿಶುಪಾಲನಾ ಕೇಂದ್ರದಲ್ಲಿ ವಿತರಿಸುವ ಆಹಾರದ ಕುರಿತು ಶಿಶು ಪಾಲಕಿಯರು ಮಕ್ಕಳಿಂದ ಮಾಹಿತಿ ಪಡೆದರು. ಮಕ್ಕಳಿಗೆ ವಿತರಿಸಲು ತಯಾರಿಸಿದ ಬೇಯಿಸಿದ ಮೊಟ್ಟೆ, ಶೇಂಗಾದ ಗುಣಮಟ್ಟ ಪರಿಶೀಲಿಸಿದರು.

ಜಿಲ್ಲಾ ಪಂಚಾಯತಿಯ ನಿರ್ದೇಶನದಂತೆ ಕೂಸಿನ ಮನೆಗಳಲ್ಲಿ ಆಹಾರ ಪಟ್ಟಿಯನ್ನು (ಫುಡ್ ಮೆನು) ಪ್ರದರ್ಶಿಸಿ ಅದರಂತೆ ಮಕ್ಕಳಿಗೆ ಆಹಾರ ಒದಗಿಸಬೇಕು. ಗ್ರಾಮ ಪಂಚಾಯಿತಿಯಿಂದ ಕೂಸಿನ ಮನೆ ಆರಂಭಿಸಿರುವ ಬಗ್ಗೆ ಪ್ರಚಾರ ನಡೆಸಿ, ಮಕ್ಕಳ ಸಂಖ್ಯೆ ಹೆಚ್ಚಳಕ್ಕೆ ಕ್ರಮ ಕೈಗೊಳ್ಳಬೇಕು. ಶಿಶು ಪಾಲಕಿಯರಿಗೆ ಎನ್‌ಎಂಆರ್‌ಗಳನ್ನು ತೆಗೆದು ಕೂಲಿ ಪಾವತಿಸಬೇಕು ಎಂದು ಇದೆ ವೇಳೆ ಸಿಇಓ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೆ ವೇಳೆ ಸಿಇಓ ಅವರು ಪ್ರಾಥಮಿಕ ಶಾಲೆಯ 8ನೇ ತರಗತಿಗೆ ಭೇಟಿ ನೀಡಿ ಮಕ್ಕಳೊಂದಿಗೆ ಮಾತನಾಡಿ ರಾಜ್ಯದ ಸಂಕ್ಷಿಪ್ತ ಮಾಹಿತಿ, ಕೇಂದ್ರ ಆಡಳಿತ ಪ್ರದೇಶಗಳ ಸಂಖ್ಯೆ ಕುರಿತು ಮಕ್ಕಳಿಂದ ಮಾಹಿತಿ ಪಡೆದರು.

ಇದೆ ವೇಳೆ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಾದ ಅಮರೇಶ್, ಸಹಾಯಕ ನಿರ್ದೇಶಕರಾದ ಶಿವಾನಂದ ರಡ್ಡಿ, ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿ ಸೋಮನಗೌಡ ಪಾಟೀಲ್, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಾದ ತಿಮ್ಮನಗೌಡ, ತಾಂತ್ರಿಕ ಸಂಯೋಜಕರಾದ ಅಶೋಕ್, ತಾಂತ್ರಿಕ ಸಹಾಯಕ ಅಭಿಯಂತರರಾದ ಪ್ರದೀಪ್, ಗ್ರಾಪಂ ಅಧ್ಯಕ್ಷರು, ಸದಸ್ಯರು, ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಸಹಾಯಕ ಅಭಿಯಂತರರಾದ ಬಸವರಾಜು, ವಿವಿಧ ಇಲಾಖೆ ಅಧಿಕಾರಿಗಳು, ತಾಪಂ ಮತ್ತು ಗ್ರಾಪಂ ಸಿಬ್ಬಂದಿ ಉಪಸ್ಥಿತರಿದ್ದರು.

# ಕಡಿಮೆ ವೆಚ್ಚದ ಮನೆ ನಿರ್ಮಾಣಕ್ಕೆ ತಂತ್ರಜ್ಞಾನ ಬಳಸಿಕೊಳ್ಳಿ: ಬಂಡೆಪ್ಪ ಕಾಶೆಂಪುರ




ಬೀದರ.ಜು.19:ಅತ್ಯಾಧುನಿಕ ತಂತ್ರಜ್ಞಾನ ಬಳಸಿ ಕಡಿಮೆ ವೆಚ್ಚದಲ್ಲಿ ಗುಣಮಟ್ಟದ ಮನೆ ನಿರ್ಮಿಸುವ ಕುರಿತು ಸಲಹೆ ನೀಡುವ ಮೂರು ದಿನಗಳ 'ಬಿಲ್ಡ್ ಟೆಕ್–2025' ವಸ್ತು ಪ್ರದರ್ಶನ ಇಲ್ಲಿಯ ಕೇಂದ್ರ ಬಸ್ ನಿಲ್ದಾಣ ಬಳಿಯ ಝೀರಾ ಫಂಕ್ಷನ್ ಹಾಲ್‌ನಲ್ಲಿ ಶುಕ್ರವಾರ ಆರಂಭಗೊಂಡಿತು.

ಮೊದಲ ದಿನ ಪ್ರದರ್ಶನಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು. ಈಗಾಗಲೇ ಮನೆ ನಿರ್ಮಿಸುತ್ತಿರುವವರು, ಹೊಸ ಮನೆ ನಿರ್ಮಾಣ, ನವೀಕರಣಕ್ಕೆ ಯೋಚಿಸುತ್ತಿರುವವರು, ಬಿಲ್ಡರ್, ಆರ್ಕಿಟೆಕ್ಟ್, ಸಿವಿಲ್ ಎಂಜಿನಿಯರ್ ಮತ್ತಿತರರು ಪ್ರದರ್ಶನಕ್ಕೆ ಭೇಟಿ ನೀಡಿ ಗೃಹ ನಿರ್ಮಾಣದ ನವೀನ ತಂತ್ರಜ್ಞಾನಗಳ ಮಾಹಿತಿ ಪಡೆದರು.

ಮನೆ ನಿರ್ಮಿಸಲು ಬೇಕಾಗುವ ಸಾಮಗ್ರಿಗಳ ದರ, ಬಾಳಿಕೆ ಅವಧಿ, ಗುಣಮಟ್ಟದ ಬಗ್ಗೆ ಕೇಳಿ ತಿಳಿದುಕೊಂಡರು.

ಪ್ರದರ್ಶನದಲ್ಲಿ ದೇಶದ ಬೇರೆ ಬೇರೆ ಭಾಗಗಳ ವಿವಿಧ ಕಂಪನಿಗಳ 70 ಅಂಗಡಿಗಳು ತೆರೆದುಕೊಂಡಿವೆ.

ಇವುಗಳಲ್ಲಿ ಸ್ಟೀಲ್, ಸಿಮೆಂಟ್, ಟೈಲ್ಸ್, ಕಿಟಕಿ, ಬಾಗಿಲು, ಎಲೆಕ್ಟ್ರಿಕಲ್, ಸೋಲಾರ್, ಇಂಟೆರಿಯರ್ ಆಯಿಂಡ್ ಎಕ್ಸ್‌ಟೆರಿಯರ್, ಅಲ್ಯುಮಿನಿಯಂ ಸಾಮಗ್ರಿ, ಕೈಯಿಂದ ತಯಾರಿಸಿದ ಐಷಾರಾಮಿ ಸೋಫಾ, ಡೈನಿಂಗ್ ಹಾಲ್ ಸೇರಿ ವಿವಿಧ ಪೀಠೋಪಕರಣ, ದೇವರ ಕಂಚಿನ ಮೂರ್ತಿಗಳು, ವಾಟರ್ ಪ್ರೂಫಿಂಗ್ ಮೊದಲಾದವು ಸೇರಿವೆ.

ತಂತ್ರಜ್ಞಾನ ಬಳಸಿಕೊಳ್ಳಿ: ಪ್ರದರ್ಶನಕ್ಕೆ ಚಾಲನೆ ನೀಡಿದ ಮಾಜಿ ಸಚಿವ ಬಂಡೆಪ್ಪ ಕಾಶೆಂಪುರ ಅವರು ಕಡಿಮೆ ವೆಚ್ಚದಲ್ಲಿ ಗುಣಮಟ್ಟದ ಮನೆ ನಿರ್ಮಾಣಕ್ಕೆ ಅತ್ಯಾಧುನಿಕ ತಂತ್ರಜ್ಞಾನ ಬಳಸಿಕೊಳ್ಳಬೇಕು ಎಂದು ಹೇಳಿದರು.

ಮನೆ ನಿರ್ಮಾಣ ಬಡವರ ಕನಸು ಆಗಿರುತ್ತದೆ. ಹೀಗಾಗಿ ಅವರ ಕನಸು ಸಾಕಾರಗೊಳಿಸಲು ವಿವಿಧ ಕಂಪನಿಗಳು ಕಡಿಮೆ ದರದಲ್ಲಿ ಕಟ್ಟಡ ಸಾಮಗ್ರಿ ಪೂರೈಸುವ ಯೋಜನೆ ರೂಪಿಸಬೇಕು ಎಂದರು.

ಲೋಕೋಪಯೋಗಿ ಇಲಾಖೆಯ ಪೂರ್ವೋತ್ತರ ವಲಯದ ಮುಖ್ಯ ಎಂಜಿನಿಯರ್ ಶರಣಪ್ಪ ಸುಲಗುಂಟೆ ಮಾತನಾಡಿ, ಜನರ ಕೈಗೆಟಕುವ ವೆಚ್ಚದಲ್ಲಿ ಮನೆ ನಿರ್ಮಾಣ ಇಂದಿನ ಅವಶ್ಯಕತೆಯಾಗಿದೆ ಎಂದು ತಿಳಿಸಿದರು. ರಾಜ್ಯ ಎಂಜಿನಿಯರ್‌ಗಳ ಕೌನ್ಸಿಲ್ ಸದಸ್ಯ ಮುರಳಿಧರ ಕರಲೆಕರ್ ಮಾತನಾಡಿ, ಬೀದರನಲ್ಲಿ ವಿವಿಧೆಡೆಯ ಕಟ್ಟಡ ನಿರ್ಮಾಣ ಸಾಮಗ್ರಿಗಳ ಕಂಪನಿಗಳನ್ನು ಆಹ್ವಾನಿಸಿ, ವಸ್ತು ಪ್ರದರ್ಶನ ಹಮ್ಮಿಕೊಂಡಿರುವುದು ಉತ್ತಮ ಬೆಳವಣಿಗೆ ಎಂದು ಹೇಳಿದರು.

ಇಂಡಿಯನ್ ಕಾಂಕ್ರೀಟ್ ಇನ್‌ಸ್ಟಿಟ್ಯೂಟ್ ಅಧ್ಯಕ್ಷ ಹಾವಶೆಟ್ಟಿ ಪಾಟೀಲ ಮಾತನಾಡಿ, ಕಡಿಮೆ ವೆಚ್ಚದಲ್ಲಿ ಸುಲಭವಾಗಿ ಉತ್ಕೃಷ್ಟ ಗುಣಮಟ್ಟದ ಮನೆ ನಿರ್ಮಾಣಕ್ಕೆ ಅನೇಕ ನವೀನ ತಂತ್ರಜ್ಞಾನಗಳು ಬಂದಿವೆ. ಮನೆ ಸಾಮಗ್ರಿಗಳ ಬಗ್ಗೆ ಅರಿತರೆ ಸುಂದರ ಮನೆ ನಿರ್ಮಿಸಬಹುದು. ಈ ದಿಸೆಯಲ್ಲಿ ಜನರಿಗೆ ಸಲಹೆ ನೀಡಲು ಪ್ರದರ್ಶನ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಕ್ರೆಡಾಯ್ ಬೀದರ್ ಅಧ್ಯಕ್ಷ ರವಿ ಮೂಲಗೆ ಮಾತನಾಡಿ, ದೊಡ್ಡ ದೊಡ್ಡ ನಗರಗಳಲ್ಲಿ ನಡೆಯುತ್ತಿದ್ದ ಪ್ರದರ್ಶನವನ್ನು ಜಿಲ್ಲೆಯ ಜನರ ಅನುಕೂಲಕ್ಕಾಗಿ ಬೀದರನಲ್ಲಿ ಸಂಘಟಿಸಲಾಗಿದೆ. ಮನೆ ನಿರ್ಮಿಸಬಯಸುವವರು ಇದರ ಲಾಭ ಪಡೆಯಬೇಕು ಎಂದು ಹೇಳಿದರು.

ರಾಮಕೃಷ್ಣ ವಿವೇಕಾನಂದ ಆಶ್ರಮದ ಅಧ್ಯಕ್ಷ ಜ್ಯೋತಿರ್ಮಯಾನಂದ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಎಂಜಿನಿಯರ್ ಶಿವಶಂಕರ ಕಾಮಶೆಟ್ಟಿ, ಯು.ಎಸ್. ಕಮ್ಯುನಿಕೇಷನ್‌ನ ಉಮಾಪತಿ, ಕಲ್ಮೇಶ್ ತೊಟದ, ಕ್ರೆಡಾಯ್ ಬೀದರ್ ಕಾರ್ಯದರ್ಶಿ ಅನಿಲ್ ಖೇಣಿ, ರಾಜೋರಿ ಸ್ಟೀಲ್ ಕರ್ನಾಟಕ–ತೆಲಂಗಾಣ ಮಾರುಕಟ್ಟೆ ಮುಖ್ಯಸ್ಥ ಆದಿನಾಥ, ಬೀದರ್ ಜಿಲ್ಲಾ ವಿತರಕ ಸುಧೀರ್ ಅಗ್ರವಾಲ್, ಪ್ರದೀಪ್ ಕುಲಕರ್ಣಿ ಮತ್ತಿತರರು ಇದ್ದರು.

ಇಂಡಿಯನ್ ಕಾಂಕ್ರೀಟ್ ಇನ್‌ಸ್ಟಿಟ್ಯೂಟ್, ಕ್ರೆಡಾಯ್ ಬೀದರ್ ಹಾಗೂ ಯು.ಎಸ್. ಕಮ್ಯುನಿಕೇಷನ್ಸ್ ಸಹಯೋಗದಲ್ಲಿ ವಸ್ತು ಪ್ರದರ್ಶನ ಹಮ್ಮಿಕೊಳ್ಳಲಾಗಿದೆ. ಪ್ರದರ್ಶನ ಭಾನುವಾರದ ವರೆಗೆ ನಡೆಯಲಿದೆ.

# ಪೋಚಮ್ಮ ದೇವಿಯ, ನಾಗಲಿಂಗೇಶ್ವರ ದೇವರ ಮೂರ್ತಿ ಪ್ರತಿಷ್ಠಾಪನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 19 : ಬೀದರ್ ತಾಲೂಕಿನ ಬಾವಗಿ ಹಾಗೂ ಶಮಶೀರನಗರ ಗ್ರೋಮದ ಸೀಮೆಯಲ್ಲಿ ನೂತನ ಪೋಚಮ್ಮ ದೇವಿ, ನಾಗಲಿಂಗೇಶ್ವರ ದೇವರ ಮೂರ್ತಿ ಪ್ರಾಣ ಪ್ರತಿಷ್ಠಾಪನಾ ಕಾರ್ಯಕ್ರಮ ಭಕ್ತಿಭಾವದಿಂದ ನಡೆಯಿತು.

ಎರೆಡು ಗ್ರಾಮದ ಭಕ್ತರು ಸೇರಿ ಕೊಂಡು ಪೋಚಮ್ಮ ದೇವಿ ನಾಗಲಿಂಗೇಶ್ವರ ದೇವರ ಮೂರ್ತಿ ಮೆರವಣಿಗೆ, ಕುಂಭ ಕಳಶದ ಮೆರವಣಿಗೆಯೊಂದಿಗೆ ದೇವಸ್ಥಾನ ತಲುಪಿ, ಜಲನಿವಾಸ, ಧಾನ್ಯ ನಿವಾಸ, ಸಂಗೀತ ರುದ್ರಾಭೀಷೇಕ, ಹೋಮ–ಹವನ ಇನ್ನಿತರ ಪೂಜೆ ಧಾರ್ಮಿಕ ವಿಧಿ ವಿಧಾನಗಳ ಪ್ರಕಾರ ದೇವರ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ನೆರವೇರಿತು. ಈ ವೇಳೆ ಬಾವಗಿ ಶ್ರೀ ಗುರು ಭದ್ರೇಶ್ವರ ಸಂಸ್ಥಾನದ ವೇದಮೂರ್ತಿ ಶ್ರೀ ಶಾಂತಕುಮಾರ್ ಸ್ವಾಮಿಯವರು ಗ್ರಾಮ ಸೀಮೆಯ ಲಿರುವ ದೇವರುಗಳಿಂದ ಗ್ರಾಮಕ್ಕೆ ಬರುವ ದುಷ್ಟ ಶಕ್ತಿಗಳನ್ನು ಹೊಡೆ ದೋಡಿಸಿ ಜನರ ರಕ್ಷಣೆ ಮಾಡುವರು, ಎಂದು ಆಶೀರ್ವಾದ ವಾಣಿ ನುಡಿದರು.

ಈ ಕಾರ್ಯಕ್ರಮ ದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶಾಂತವೀರ ಹಜ್ಜರಗಿ, ಶ್ರೀ ಭದ್ರಯ್ಯ ಸ್ವಾಮಿ, ರುದ್ರಮುನಿ ದೇವರು, ನಾಗರಾಜ ಶಾಸ್ತ್ರಿ, ರಾಜಕುಮಾರ ಪಾಂಚಾಳ, ರಾಜಕುಮಾರ ವಾಡಿ, ಚನ್ನಮಲ್ಲಪ್ಪ ಹಜ್ಜರಗಿ, ಸಂಗಮೇಶ ಹಜ್ಜರಗಿ, ರೇವಣಪ್ಪ ಭದ್ರಣ, ಶರಣಪ್ಪ ಮುದ್ದಾ ಮಾರುತಿ ವಾಡಿ ವಿಜಯಕುಮಾರ ಇಡಗಾರ, ಶಿವರಾಜ ಪಾಟೀಲ, ವೀರಶೆಟ್ಟಿ ಪಾಟೀಲ, ಸಾಯಿನಾಥ ಪಾಟೀಲ, ಧೂಳಪ್ಪ ತೋರಣ, ವೀರಶಟ್ಟಿ ಉಳ್ಳಾಗಡ್ಡಿ, ಕಲ್ಲಪ್ಪ ಬೊಮ್ಮಣಿ, ಶರಣಪ್ಪ ಬೆಲ್ದಾರ, ಝರಪ್ಪ ಸೋನಿ, ನಂದುಕುಮರ, ಗಣಪತಿ ವಾಡಿ, ವಿರೇಷ ಸ್ವಾಮಿ, ಶಮಶೀರನಗರ ಹಾಗೂ ಬಾವಗಿ ಗ್ರಾಮದ ಸರ್ವ ಭಕ್ತಾದಿಗಳು ಭಾಗವಹಿಸಿದ್ದರು.

# ಬ್ರಿಮ್ಸ್‌ನಲ್ಲಿ ವಿದ್ಯುತ್ ವ್ಯತ್ಯಯ ಸಮಸ್ಯೆ: ತನಿಖೆಗೆ ಈಶ್ವರ ಖಂಡ್ರೆ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 19 : ಇಲ್ಲಿನ ಬೀದರ್ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ (ಬ್ರಿಮ್ಸ್) ಇತ್ತೀಚೆಗೆ ವಿದ್ಯುತ್ ವ್ಯತ್ಯಯದಿಂದ ರೋಗಿಗಳಿಗೆ ಆಗಿರುವ ತೊಂದರೆಗೆ ಸಂಬಂಧಿಸಿದಂತೆ ತನಿಖೆ ನಡೆಸಿ 48 ಗಂಟೆಯೊಳಗೆ ವರದಿ ಸಲ್ಲಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರಿಗೆ ಸೂಚನೆ ನೀಡಿದ್ದಾರೆ. ಬ್ರಿಮ್ಸ್‌ನಲ್ಲಿ ಇತ್ತೀಚೆಗೆ ವಿದ್ಯುತ್ ಸಮಸ್ಯೆ ಉಂಟಾಗಿ ರೋಗಿಗಳಿಗೆ ತೊಂದರೆ ಉಂಟಾಗಿ–ತ್ತು. ಇದರ ವಿರುದ್ಧ ಜಿಲ್ಲಾ ಬಿಜೆಪಿ 'ಕ್ಯಾಂಡಲ್ ಮಾರ್ಚ್' ನಡೆಸಿ ಪ್ರತಿಭಟಿಸಿತ್ತು. ಇದರ ಬೆನ್ನಲ್ಲೇ ಸಚಿವರಾದ ಈಶ್ವರ ಬಿ. ಖಂಡ್ರೆ ಹಾಗೂ ರಹೀಂ ಖಾನ್ ಅವರು ಶುಕ್ರವಾರ ಬ್ರಿಮ್ಸ್‌ಗೆ ಭೇಟಿ ನೀಡಿ ಪರಿಶೀಲಿಸಿದರು. ಅಧಿಕಾರಿಗಳಿಂದ ಮಾಹಿತಿ ಪಡೆದರು. ಬಳಿಕ ಪತ್ರಕರ್ತರೊಂದಿಗೆ ಮಾತನಾಡಿದ ಈಶ್ವರ ಬಿ. ಖಂಡ್ರೆ, '45 ನಿಮಿಷಗಳ ಕಾಲ ವಿದ್ಯುತ್ ಕಡಿತ ಉಂಟಾಗಿತ್ತು ಎಂದು ಆಸ್ಪತ್ರೆಯವರು ಹೇಳಿದ್ದಾರೆ. ಆದರೆ, ಜಿಲ್ಲಾಮಟ್ಟದ ಆಸ್ಪತ್ರೆಯಲ್ಲಿ ವಿದ್ಯುತ್ ಕಡಿತಕ್ಕೆ ಕಾರಣವೇನು? ಆಸ್ಪತ್ರೆಯಲ್ಲಿ ಸದಾ ವಿದ್ಯುತ್ ವ್ಯವಸ್ಥೆ ಇರಬೇಕು. ಈಗಾಗಲೇ ಜಿಲ್ಲಾಧಿಕಾರಿಗೆ ವರದಿ ಸಲ್ಲಿಸಲು ಸೂಚಿಸಿದ್ದು, ವರದಿ ಆಧರಿಸಿ ಕ್ರಮ ಜರುಗಿಸಲಾಗುವುದು. ಬ್ರಿಮ್ಸ್‌ನಲ್ಲಿ ಏನೇನು ನ್ಯೂನತೆ, ಕೊರತೆಗಳಿವೆಯೋ ಅದನ್ನು ಪರಿಶೀಲಿಸಿ, ಸರಿಪಡಿಸುವ ಕೆಲಸ ಮಾಡಲಾಗುವುದು' ಎಂದು ಹೇಳಿದರು. 'ಬೀದರ್ ಜಿಲ್ಲೆಯ ಜನರಿಗೆ ಉತ್ತಮ ಗುಣಮಟ್ಟದ ಚಿಕಿತ್ಸೆ ಸಿಗಬೇಕು. ಯಾರಿಗೂ ತೊಂದರೆ ಆಗಬಾರದು. ವಿಷಯ ಗೊತ್ತಾದ ನಂತರ ನಾನು ಎಲ್ಲ ವಾರ್ಡ್‌ಗಳಿಗೆ ಭೇಟಿ ಕೊಟ್ಟು ರೋಗಿಗಳ ಜೊತೆಗೆ ಸಮಾಲೋಚನೆ ನಡೆಸಿದ್ದೇನೆ. ಸ್ವಚ್ಛತೆ ಕಾಪಾಡಬೇಕು. ಗುಣಮಟ್ಟದ ಆಹಾರ ಹಾಗೂ ಔಷಧ ಕೊಡಬೇಕು ಎಂದು ಸೂಚಿಸಿದ್ದೇನೆ' ಎಂದರು. 'ಕ್ಯಾಥ್‌ಲ್ಯಾಬ್ ಕೆಲಸ ಈಗಾಗಲೇ ಮುಗಿದಿದೆ. ಆದರೆ, ಕಾರ್ಡಿಯೊಲಜಿಸ್ಟ್ ಮತ್ತು ಅಗತ್ಯ ತಂತ್ರಜ್ಞರ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಿದರೂ ಯಾರೊಬ್ಬರು ಮುಂದೆ ಬಂದಿಲ್ಲ. ಈ ಕುರಿತು ಸಂಪುಟ ಸಭೆಯಲ್ಲಿ ಚರ್ಚಿಸಲಾಗಿದೆ. ಒಂದು ವಾರದೊಳಗೆ ನೇಮಕಕ್ಕೆ ಕ್ರಮ ಜರುಗಿಸಲಾಗುವುದು' ಎಂದು ತಿಳಿಸಿದರು. ನಗರಸಭೆ ಅಧ್ಯಕ್ಷ ಮುಹಮ್ಮದ್ ಗೌಸ್, ಬ್ರಿಮ್ಸ್ ನಿರ್ದೇಶಕ ಡಾ. ಶಿವಕುಮಾರ ಶೆಟಕಾರ ಮತ್ತಿತರರು ಇದ್ದರು. ಸಚಿವರಾದ ಈಶ್ವರ ಖಂಡ್ರೆ, ರಹೀಂ ಖಾನ್ ಭೇಟಿ ಬ್ರಿಮ್ಸ್ ವಿವಿಧ ವಾರ್ಡ್‌ಗಳಿಗೆ ಭೇಟಿ, ಪರಿಶೀಲನೆ 48 ಗಂಟೆಯೊಳಗೆ ತನಿಖಾ ವರದಿ ಸಲ್ಲಿಕೆಗೆ ಸೂಚನೆ

# ವಿದ್ಯಾರ್ಥಿಗಳ ಬೆಳವಣಿಗೆಗೆ ಎನ್.ಎಸ್.ಎಸ್. ಪೂರಕ:ಪ್ರೊ.ಬಿ.ಎಸ್.ಬಿರಾದಾರ




ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು.19:ರಾಷ್ಟ್ರೀಯ ಸೇವಾ ಯೋಜನೆ ಶಿಬಿರಗಳಿಂದ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನದೊಂದಿಗೆ, ಸರ್ವತೋಮುಖ ಕ್ರಿಯಾಶೀಲ ಮನೋಭಾವ ಬೆಳೆಯುತ್ತದೆ ಎಂದು ಬೀದರ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಬಿ.ಎಸ್.ಬಿರಾದಾರರ ನುಡಿದರು.

ಅವರು ಇತ್ತೀಚಿಗೆ ಬೀದರ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಘಟಕದ ವತಿಯಿಂದ ಮಳಚಾಪೂರ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಸೇವಾ ಸೇವಾ ಯೋಜನೆಯ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ವಿದ್ಯಾರ್ಥಿಗಳು ಅಭ್ಯಾಸದ ಸಂದರ್ಭದಲ್ಲಿ ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಲು ರಾಷ್ಟ್ರೀಯ ಸೇವಾ ಯೋಜನೆ ಅವಕಾಶ ಕಲ್ಪಿಸುತ್ತದೆ. ಯುವ ಜನಾಂಗದ ಮೇಲೆ ಮಹತ್ವದ ಜವಾಬ್ದಾರಿಯಿದೆ. ಆ ನಿಟ್ಟಿನಲ್ಲಿ ವಿದ್ಯಾರ್ಥಿಗಳು ತಮ್ಮ ಜೀವನವನ್ನು ಸಾರ್ಥಕಪಡಿಸಿಕೊಳ್ಳಬೇಕೆಂದರು.

ಬೀದರ ವಿಶ್ವವಿದ್ಯಾಲಯದ ಆಡಳಿತ ಕುಲಸಚಿವರಾದ ಸುರೇಖಾ ಕೆ.ಎ.ಎಸ್. ಮಾತನಾಡಿ, ಶ್ರಮ ಸಂಸ್ಕೃತಿ, ನಿಸ್ವಾರ್ಥ ಮನೋಭಾವ ಬೆಳೆಸಿಕೊಳ್ಳಬೇಕು. ಮನುಷ್ಯನಲ್ಲಿ ಅಹಂ ಬರಬಾರದು, ಸೂರ್ಯ–ಚಂದ್ರ, ನಕ್ಷತ್ರಗಳು ನಿಸ್ವಾರ್ಥದಿಂದ ಈ ಜಗತ್ತನ್ನು ಬೆಳಗುತ್ತಿವೆ. ಈ ಜಗತ್ತಿನಲ್ಲಿ ಮನುಷ್ಯ ಒಂದು ಕಣ ಮಾತ್ರ. ಮನುಷ್ಯ ಜನ್ಮವೇ ಕ್ಷಣಿಕ. ಹೀಗಾಗಿ ನಿರಹಂಕಾರದಿಂದ ಬಾಳುತ್ತಾ ಪರಿಪೂರ್ಣ ವ್ಯಕ್ತಿತ್ವ ರೂಪಿಸಿಕೊಳ್ಳಬೇಕಾಗಿದೆ. ಪದವಿಗಿಂತ ವ್ಯಕ್ತಿತ್ವ ಮುಖ್ಯವಾಗುತ್ತದೆ. ಜೀವನದಲ್ಲಿ ಶಿಸ್ತು ಮುಖ್ಯವಾಗುತ್ತದೆ. ಜೀವನದಲ್ಲಿ ತಾಳ್ಮೆ, ಸಹನೆ, ನಿಷ್ಠೆ ಮುಖ್ಯವಾಗಿದೆ. ಹೀಗಾಗಿ ಎಲ್ಲರೂ ಉತ್ತಮ ಜೀವನ ರೂಪಿಸಿಕೊಳ್ಳಬೇಕಾಗಿದೆ ಎಂದರು.

ಬೀದರ ತಾಲ್ಲೂಕು ಪಂಚಾಯತ್‌ನ ಅಧಿಕಾರಿ ಚಂದ್ರಶೇಖರ ಮಾತನಾಡಿ, ವಿದ್ಯಾರ್ಥಿಗಳು ಈ ಮಹತ್ವದ ಜೀವನವನ್ನು ವ್ಯರ್ಥ ಮಾಡಿಕೊಳ್ಳದೆ ಸಾರ್ಥಕ ಮಾಡಿಕೊಳ್ಳಬೇಕು. ಜೀವನದ ಪ್ರತಿ ಕ್ಷಣವೂ ಸಹ ಮಹತ್ವದ್ದಾಗಿದೆ. ಕಳೆದ ಸಮಯ ಬಾರದು ಹಾಗಾಗಿ ಸಮಯಕ್ಕೆ ಮಹತ್ವ ನೀಡಬೇಕೆಂದರು.

ಈ ಸಂದರ್ಭದಲ್ಲಿ ಬೀದರ ವಿಶ್ವವಿದ್ಯಾಲಯದ ವಾಣಿಜ್ಯ ನಿಕಾಯದ ಡೀನರಾದ ಡಾ.ಶರಣಪ್ಪ ಮಲಗೊಂಡ, ಬೀದರ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆಯ ಸಂಯೋಜಕರಾದ ಡಾ.ರವೀಂದ್ರನಾಥ ವಿ.ಗಬಾಡಿ ಬೀದರ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಘಟಕದ ಕಾರ್ಯಕ್ರಮ ಅಧಿಕಾರಿ ಡಾ.ರಾಮಚಂದ್ರ ಗಣಾಪೂರ, ಮಳಚಾಪೂರ ಗ್ರಾಮದ ಮುಖಂಡರಾದ ಪ್ರಭು ಪಾಟೀಲ, ಗುಂಡಪ್ಪ ಜ್ಯಾಂತೆ ಸೇರಿದಂತೆ ಬೀದರ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆಯ ಶಿಬಿರಾರ್ಥಿಗಳು, ಗ್ರಾಮಸ್ಥರು, ವಿಶ್ವವಿದ್ಯಾಲಯದ ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿವರ್ಗದವರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ವಾಣಿಶ್ರೀ ಪ್ರಾರ್ಥಿಸಿದರು, ಅಭಿಷೇಕರವರು ಕಾರ್ಯಕ್ರಮ ನಿರೂಪಿಸಿದರು.

# ಇ-ಪೌತಿ ಆಂದೋಲನದ ಸದುಪಯೋಗ ಪಡೆಯಿರಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.19: ಈ ಭಾಗದ ಎಲ್ಲಾ ರೈತರು, ರಾಜ್ಯ ಸರ್ಕಾರ ಹಮ್ಮಿಕೊಂಡಿರುವ ಇ–ಪೌತಿ ಆಂದೋಲನದ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರೆ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು, ಮೃತ ರೈತರ ಹೆಸರಿನಲ್ಲಿರುವ ಪಹಣಿ ಪತ್ರಿಕೆಳಿಗೆ ಯಾವುದೇ ರೀತಿಯ ಉಪಯೋಗವಿಲ್ಲ. ಬೆಳೆ ಪರಿಹಾರ, ಬೆಳೆ ವಿಮೆಯ ಹಣ ಪಡೆಯುವುದು ಸೇರಿದಂತೆ ಹಲವಾರು ಸರ್ಕಾರದ ಯೋಜನೆಗಳು ರೈತರ ಖಾತೆಗೆ ಸೇರುತ್ತಿಲ್ಲ. ಇದಕ್ಕೆ ಕಾರಣ ಮೃತ ರೈತರ ಹೆಸರಲ್ಲಿ ಪಹಣಿ ಇರುವುದು. ಹೀಗಾಗಿ ರಾಜ್ಯ ಸರ್ಕಾರ ಇ–ಪೌತಿ ಆಂದೋಲನ ಹಮ್ಮಿಕೊಂಡಿದ್ದು, ರೈತಬಾಂಧವರು ಮೃತ ಹೊಂದಿರುವ ಪಟ್ಟೆದಾರರ ಮರಣ ಪ್ರಮಾಣ ಪತ್ರ, ವಂಶಾವಳಿ, ಕುಟುಂಬಸ್ಥರ ಆಧಾರ ಕಾರ್ಡ, ಶಪಥ ಪತ್ರ ನೀಡಿ, ಮೃತರ ಖಾತೆಯನ್ನು ಗ್ರಾಮ ಆಡಳಿತ ಅಧಿಕಾರಿಗಳನ್ನು ಸಂಪರ್ಕಿಸಿ ಸಂಬಂಧಪಟ್ಟವರ ಹೆಸರಿಗೆ ಬದಲಿಸಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

## ಕಾಂಗ್ರೆಸ್ ಕಾರ್ಯಕರ್ತರ ಸಭೆ ಇಂದು

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.19: ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಭಾನುವಾರ ಬೆಳಿಗ್ಗೆ 11 ಗಂಟೆಗೆ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಸಭೆ ಜರುಗಲಿದೆ ಎಂದು ತಾಲೂಕು ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಹಣಮಂತರಾವ ಚವ್ಹಾಣ ತಿಳಿಸಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅಧ್ಯಕ್ಷತೆಯಲ್ಲಿ ನಡೆಯಲಿರುವ ಸಭೆಯಲ್ಲಿ ಹಿರಿಯ ಮುಖಂಡ ಶ್ರಾವಣಕುಮಾರ ಗಾಯಕವಾಡ್ ಪುರಸಭೆಯ ಮಾಜಿ ಅಧ್ಯಕ್ಷ ಚಂದ್ರಕಾಂತ ಪಾಟೀಲ್ ಸೇರಿದಂತೆ ಹಲವರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ ಆಗಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚಂದ್ರಕಾಂತ ಹುಣಸಗಿ ಅವರಿಗೆ ಶಂಕರಪ್ರಸಾದ ದುಬೆ ಪ್ರಶಸ್ತಿ ಪ್ರದಾನ ಬಸವಕಲ್ಯಾಣದಲ್ಲಿ ತಾಲೂಕು ಮಟ್ಟದ ಪತ್ರಿಕಾ ದಿನಾಚರಣೆ ಇಂದು



ಬಸವಕಲ್ಯಾಣ:ಜು.19:ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಬಸವಕಲ್ಯಾಣ ತಾಲೂಕು ಘಟಕದಿಂದ ಪತ್ರಿಕಾ ದಿನಾಚರಣೆ ಹಾಗೂ ಶಂಕರಪ್ರಸಾದ ದುಬೆ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ನಗರದ ತ್ರಿಪುರಾಂತ ಯಾತ್ರಿನಿವಾಸದಲ್ಲಿ ಭಾನುವಾರ ಮಧ್ಯಾಹ್ನ 3 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಕಾರ್ಯಕ್ರಮ ಉದ್ಘಾಟಿಸಲಿದ್ದು, ಸ್ಥಳೀಯ ಶಾಸಕ ಶರಣು ಸಲಗರ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಸಂಜೆವಾಣಿ ಪತ್ರಿಕೆಯ ಕಲಬುರಗಿ ಮುಖ್ಯ ವರದಿಗಾರ ಚಂದ್ರಕಾಂತ ಹುಣಸಗಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಎಂ.ಜಿ.ಮುಳೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಾಲಾ ಬಿ.ನಾರಾಯಣರಾವ, ಮಾಜಿ ಶಾಸಕ ಮಲ್ಲಿಕಾರ್ಜುನ ಖೂಬಾ, ವಿಧಾನ ಪರಿಷತ್ ಮಾಜಿ ಸದಸ್ಯ ವಿಜಯಸಿಂಗ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜೆ.ಸಿ. ಲೋಕೇಶ, ನಗರಸಭೆ ಅಧ್ಯಕ್ಷ ಎಂಡಿ ಸಗೀರೋದ್ದಿನ್, ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷ ಭವಾನಿಸಿಂಗ್ ಠಾಕೂರ, ಜಿಲ್ಲಾಧ್ಯಕ್ಷ ಡಿ.ಕೆ.ಗಣಪತಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ, ರಾಜ್ಯ ಪ್ರತಿನಿಧಿ ಬಸವರಾಜ ಕಾಮಶೆಟ್ಟಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ದಿಲೀಪಕುಮಾರ ಉತ್ತಮ, ನಿವೃತ್ತ ಅಭಿಯಂತರ ಚಂದ್ರಶೇಖರ್ ದುಬೆ ಭಾಗವಹಿಸುವರು ಎಂದು ಸಂಘದ ತಾಲೂಕು ಅಧ್ಯಕ್ಷ ಮಾರ್ತಂಡ ಜೋಶಿ, ಪ್ರಧಾನ ಕಾರ್ಯದರ್ಶಿ ಉದಯಕುಮಾರ ಮುಳೆ ತಿಳಿಸಿದ್ದಾರೆ.

ಇದೆ ವೇಳೆ ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದಿಂದ ಪ್ರತಿಭಾ ಪುರಸ್ಕಾರ ಪಡೆದಿರುವ ಕು. ಕೃತಿ ಕಲ್ಯಾಣರಾವ ಮದರಗಾಂವ ಅವರನ್ನು ಸನ್ಮಾನಿಸಲಾಗುತ್ತಿದ್ದು, ಕಾರ್ಯಕ್ರಮದಲ್ಲಿ ವಿವಿಧ ಸಂಘ ಸಂಸ್ಥೆಗಳ ಪ್ರಮುಖರು, ಪದಾಧಿಕಾರಿಗಳು ಸೇರಿದಂತೆ ಸ್ಥಳೀಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

# ಜು.29 ರಂದು ತ್ರೈಮಾಸಿಕ ಕೆಡಿಪಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು.19 : ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ತ್ರೈಮಾಸಿಕ (ಕೆಡಿಪಿ) ಪ್ರಗತಿ ಪರಿಶೀಲನಾ ಸಭೆಯನ್ನು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರ ಅಧ್ಯಕ್ಷತೆಯಲ್ಲಿ ಜುಲೈ.29 ರಂದು ಬೆಳಿಗ್ಗೆ 11 ಗಂ–ಟೆಗೆ ಜಿಲ್ಲಾ ಪಂಚಾಯತ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಜಿಲ್ಲಾ ಮಟ್ಟದ ಅಧಿಕಾರಿಗಳು ತಮ್ಮ ತಮ್ಮ ಇಲಾಖೆಯ ಪ್ರಗತಿ ವರದಿ ಮತ್ತು ಅನುಪಾಲನಾ ವರದಿಯೊಂದಿಗೆ ತಪ್ಪದೇ ಸಭೆಗೆ ಹಾಜರಾಗಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವೀರಶೈವ ಮಹಾಸಭಾ ಯುವ ಘಟಕಕ್ಕೆ ಪದಾಧಿಕಾರಿಗಳ ನೇಮಕ.

## ಅಧ್ಯಕ್ಷರಾಗಿ ಸುರೇಶ ಜಾಕಾ, ಪ್ರಧಾನ ಕಾರ್ಯದರ್ಶಿಯಾಗಿ ಅರವಿಂದ ಕೆಂಭಾವಿ ನೇಮಕ





ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಅಖಿಲ ಭಾರತ ವೀರಶೈವ ಮಹಾಸಭಾದ ಜಿಲ್ಲಾ ಯುವಘಟಕಕ್ಕೆ ಪದಾಧಿಕಾರಿಗಳನ್ನು ನೇಮಕ ಮಾಡಿದ ಆದೇಶಕ್ಕೆ ಅಖಿಲ ಭಾರತ ವೀರಶೈವ ಮಹಾಸಭಾದರಾಷ್ಟ್ರೀಯಅಧ್ಯಕ್ಷರಾದ ಡಾ.ಶಾಮನೂರು ಶಿವಶಂಕರೆಪ್ಪ ಅನುಮೊದನೆ ನೀಡಿದ್ದಾರೆಂದು ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ಚನ್ನಪ್ಪಗೌಡ ಮೊಸಂಬಿ ತಿಳಿಸಿದ್ದಾರೆ.

ಅಧ್ಯಕ್ಷರಾಗಿ ಸುರೇಶ ಜಾಕಾ, ಉಪಾಧ್ಯಕ್ಷರಾಗಿ ಸಂಗಮೇಶ ಪಣಿ, ಸಂಗಮೇಶ ಯಾಳವಾರ, ರಾಜೇಶ, ಮಡಿವಾಳಪ್ಪ ಪಾಟೀಲ್, ಪ್ರಧಾನ ಕಾರ್ಯದರ್ಶಿಗಳಾಗಿ ಅರವಿಂದ ಕೆಂಭಾವಿ, ಕಾರ್ಯದರ್ಶಿಗಳಾಗಿ ಸುಭಾಷ ದೇವದುರ್ಗ, ಸುರೇಶ ಕೋರಿಶೆಟ್ಟಿ, ನಾಗರಾಜ್ ಲದ್ದಿ, ಸಂಗಣ್ಣಗೌಡ ಮತ್ತು ಖಜಾಂಚಿಗಳಾಗಿ ನವೀನ್ ಕುಮಾರ ಅವರು ನೇಮಕಗೊಂಡಿದ್ದಾರೆಂದು ಅವರು ತಿಳಿಸಿದ್ದಾರೆ.

ಇನ್ನೂ ಕಾರ್ಯಕಾರಿ ಸದಸ್ಯರಾಗಿ ಸತೀಶ ಫಲಪುಲ್, ಶಿವಬಸವರಡ್ಡಿ, ಅಶೋಕರಡ್ಡಿ, ಮಲ್ಲಿನಾಥ ಆಂದೋಲ್, ಮೌನೇಶ ಪಾಟೀಲ್, ನಾಗೇಂದ್ರಪ್, ರವಿಚಂದ್ರನ್, ಶರಣಬಸಪ್ಪ ಸಾಹುಕಾರ, ಕಲ್ಯಾಣಶೆಟ್ಟಿ ಕನ್ನಳ್ಳಿ, ಶರಣಪ್ಪ, ಉದಯ ಪಾಟೀಲ್, ಗುರುರಾಜ್ ವಾಲಿ, ಗಿರಿಧರ, ರಾಚಣ್ಣಗೌಡ ಪಾಟೀಲ್, ಬಸವರಾಜ ಸಜ್ಜನ್, ಶರಣು ಪ್ರಸಾದ, ಆನಂದ, ಬಸಣ್ಣಗೌಡ, ಸೂಗುರಡ್ಡಿ ಮತ್ತು ಬಸವರಾಜ ಮಾಮುಡಿ ಅವರನ್ನು ನೇಮಕ ಮಾಡಲಾಗಿದೆ ಎಂದು ಅವರು ಹೇಳಿದ್ದಾರೆ.

## ಚಾಮನಹಳ್ಳಿ – ಹೋರುಂಚಾ ಕೊಚ್ಚಿ ಹೋದ ರಸ್ತೆ : ಜನಜೀವನ ಅಸ್ತವ್ಯಸ್ತ



ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್: ಮತಕ್ಷೇತ್ರದ ಚಾಮನಹಳ್ಳಿ ಗ್ರಾಮದಿಂದ ಹೋರುಂಚಾ ಕಡೆಗೆ ಸಾಗುವ ಪ್ರಮುಖ ಗ್ರಾಮಾಂತರ ರಸ್ತೆ ಭಾರಿ ಮಳೆಗೆ ಸಂಪೂರ್ಣವಾಗಿ ಕೊಚ್ಚಿಕೊಂಡು ಹೋಗಿರುವ ಘಟನೆ ನಡೆದಿದೆ. ನಿನ್ನೆ ರಾತ್ರಿ ಸುರಿದ ಭಾರೀ ಮಳೆಗೆ ಆ ರಸ್ತೆಯು ಬಹುಭಾಗದಲ್ಲಿ ಕಪ್ಪಾಗಿ ಹಾಳಾಗಿದ್ದು, ಸಂಚಾರ ಸಂಪೂರ್ಣವಾಗಿ ಸ್ಥಗಿತಗೊಂಡಿದೆ.

ಚಿತ್ರಗಳಲ್ಲಿ ಸ್ಪಷ್ಟವಾಗಿ ಕಾಣುವಂತೆ, ರಸ್ತೆ ಸಂಪೂರ್ಣವಾಗಿ ಕುಸಿತಗೊಂಡಿದ್ದು, ಮಣ್ಣು ಹಾಗೂ ಜಲಸಂಧಿ ಭಾಗದಲ್ಲಿ ಗರ್ಭಾಳದಂತ ಕುಳ್ಳಿಗಳು ಉಂಟಾದಿವೆ. ಸ್ಥಳೀಯ ರೈತರ ಕೃಷಿ ಭೂಮಿ ಕೂಡಾ ಹಾನಿಗೊಳಗಾಗಿರುವುದು ಗೋಚರವಾಗುತ್ತಿದೆ.

ಗ್ರಾಮಸ್ಥರ ಆಕ್ರೋಶ: ಗ್ರಾಮಸ್ಥರು ಕೂಡಲೇ ರಸ್ತೆ ದುರಸ್ತಿ ಮತ್ತು ತಾತ್ಕಾಲಿಕ ಸಂಪರ್ಕ ಮಾರ್ಗ ಕಲ್ಪಿಸಲು ಸ್ಥಳೀಯ ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ. ರೈತರು, ದೈನಂದಿನ ಕೆಲಸಗಾರರಿಗೆ ಬಹು ದೊಡ್ಡ ಸಮಸ್ಯೆ ಉಂಟಾಗಿದೆ ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದಾರೆ. ಅಧಿಕೃತ ಪ್ರತಿಕ್ರಿಯೆ ಇನ್ನಷ್ಟೇ ನಿರೀಕ್ಷೆ.

ಸಂಬಂಧಿತ ಇಲಾಖೆಯಿಂದ ಯಾವುದೇ ದುರಸ್ತಿ ಕಾರ್ಯ ಪ್ರಾರಂಭವಾಗಿಲ್ಲ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

## ಯಾದಗಿರಿ : ಸಂಚಾರಿ ಪೊಲೀಸ್ ಠಾಣೆಯ ವಿರುದ್ಧ ರಾಹುಲ್ ಕೊಲ್ಲೂರಕರ್ ಆಕ್ರೋಶ,




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ :– ಅಂಬೇಡ್ಕರ್ ಸೇವಾ ಸಮಿತಿ ಯಾದಗಿರಿ ಜಿಲ್ಲಾ ಸಮಿತಿ ವತಿಯಿಂದ, ಯಾದಗಿರಿ ಸಂಚಾರಿ ಪೊಲೀಸ್ ಠಾಣೆಯ ಸಿಬ್ಬಂದಿಗಳ ಕಾರ್ಯವೈಖರಿಯ ಹಾಗೂ ಕಾಶಪ್ಪ ಇವರ ಮೇಲೆ ಶಿಸ್ತುಕ್ರಮ ಜರುಗಿಸುವ ಕುರಿತು ಮಾನ್ಯ ಜಿಲ್ಲಾ ಪೊಲೀಸ್ ವರೀಷ್ಠಾಧಿಕಾರಿಗಳಿಗೆ ಮನವಿಯನ್ನು ನೀಡಲಾಯಿತ್ತು.

ಯಾದಗಿರಿ ಸಂಚಾರಿ ಪೊಲೀಸ್ ಠಾಣೆಯ ಅಧಿಕಾರಿಗಳ ದರ್ಪ ದಿನ ದಿನಕ್ಕೆ ಮಿತಿ ಮಿರುತ್ತಿದೆ, ಸಂಚಾರಿ ಠಾಣೆಯ ಸಿಬ್ಬಂದಿಗಳು ಒಂದೇ ಜಾಗದಲ್ಲಿ 7 – 8 ಜನ ಗುಂಪು ಕಟ್ಟಿಕೊಂಡು ಬಂದು. ಹಳ್ಳಿಯಿಂದ ಬರುವ ಜನರಿಂದ ಹಣ ವಸೂಲಿ ಮಾಡುತ್ತಿದ್ದು, ಫೈನ್ ಇಲ್ಲದೆ ಹೋದರೆ 200,300 ಡಿಮ್ಯಾಂಡ್ ಮಾಡುತ್ತಾರೆ ಯಾವುದ್ದೇ ರಸೀದಿ ನೀಡುವದಿಲ್ಲ ಅದೇ ರೀತಿ ಸಾರ್ವಜನಿಕರು ಅವರ ಜೊತೆ ಚರ್ಚೆ ಮಾಡಿದರೆ ದರ್ಪದಿಂದ, ಅವಾಚ್ಯ ಶಬ್ದದಿಂದ ಬೈದು, ಅವರ ವಾಹನವನ್ನು ಜಪ್ತಿ ಮಾಡುತ್ತಾರೆ,

ಅಲ್ಲದೇ ತಮ್ಮ ಸಿಬ್ಬಂದಿಗಳು ಯಾದಗಿರಿಯಲ್ಲಿ ಪ್ರತಿ ಮಂಗಳವಾರ ನಡೆಯುವ ಸಂತೆಯಲ್ಲಿ ಗ್ರಾಮೀಣ ಭಾಗದ ಬಡ ರೈತರು, ಕಾರ್ಮಿಕರು, ತರಕಾರಿ, ಇತರೆ ಸಾಮಾಗ್ರಿ ತರುವ ವಾಹನಗಳಿಗೆ ಅಡ್ಡಗಟ್ಟಿ, ಅವರಿಗೆ ಧಮಕಿ ಹಾಕಿ, ವಾಹನಗಳ ದಾಖಲೆಗಳು ಇದ್ದರೂ ಕೂಡಾ ಅವರ ಬಳಿ ಹಣ ವಸೂಲಿ ಮಾಡುತ್ತಿದ್ದು, ನಾಮಕೆವಾಸ್ತೆ ಕೆಲವು ವಾಹನಗಳಿಗೆ ದಂಡ ಹಾಕಿ, ರಸೀದಿಗಳು ನೀಡುತ್ತಿದ್ದು, ಹೀಗಾದರೆ ಬಡ ರೈತರು, ಕಾರ್ಮಿಕರು, ಸಾರ್ವಜನಿಕರು, ಜಿಲ್ಲಾ ಕೇಂದ್ರಕ್ಕೆ ಬಂದು ಹೇಗೆ ಅವರ ವ್ಯಾಪಾರ ಮಾಡಬೇಕು, ಮತ್ತು ಅವರ ಕುಟುಂಬ ಹೇಗೆ ನಡೆಸಬೆಕು,

ಅಲ್ಲದೇ ತಮ್ಮ ಠಾಣೆಯ ಸಿಬ್ಬಂದಿಗಳು ರೈತರಿಗೆ ಬಾಯಿಗೆ ಬಂದ ಹಾಗೆ, ಅವಾಚ್ಯ ಶಬ್ದಗಳಿಂದ ನಿಂದಿಸಿ, ದರ್ಪದ ವರ್ತನೆ ತೋರಿ, ಅವರ ಮೇಲೆ ಹಲ್ಲೆ ಕೂಡಾ ಮಾಡುತ್ತಿದ್ದು, ಇದು ಮಾನವ ಹಕ್ಕುಗಳ ಉಲ್ಲಂಘನೆ ಆಗಿದ್ದೆ, ಹೊಡೆಯುವ ಅಧಿಕಾರ ಯಾರು ಕೊಟ್ಟಿದ್ದಾರೆ. ಮತ್ತು ವಾಹನ ಸವಾರರ ಮೇಲೆ ಹಲ್ಲೆ ಮಾಡಿ,

ಅವರ ಮೊಬೈಲ್ ಕಸಿದುಕೊಳ್ಳುತ್ತಿದ್ದು. ಇದಕ್ಕೆ ಸಿಸಿ ಟಿವಿ ಫೂಟೇಜ್‌ಗಳಿಲ್ಲ, ಅಪಘಾತಗಳು ಸಂಭವಿಸಿ, ಮರಣ ಹೊಂದುತ್ತಿದ್ದು, ಕೇವಲ ತೆ–ಉಂದರೆ ಕೊಡುವ ಕೆಲಸದಲ್ಲಿ ನಿರತರಾಗಿದ್ದಾರೆ,

ಸುಮ್ಮಸುಮ್ಮನೆ ಡ್ರಿಂಕ್ ಡ್ರೈವ್ ಕೇಸ್ ಹಾಕುತ್ತಿದ್ದು, ನಿಂತ ವಾಹನಗಳ ಮೇಲೆ ದೌರ್ಜನ್ಯದಿಂದ ಕೇಸ್ ಅಡ್ಡಾ–ದಿಡ್ಡಿಯಾಗಿ ವಾಹನ ಓಡಿಸಿದ್ದಾನೆಂದು ಸುಳ್ಳು ಆರೋಪ ಮಾಡಿ, ಜೀವದ ಜೊತೆ ಆಟ ಆಡುತ್ತಿದರೆ, ಇದು ಎಷ್ಟರ ಮಟ್ಟಿಗೆ ನ್ಯಾಯ ಇದೆ,

ಇಲ್ಲಿಯವರೆಗೂ 4 ಚಕ್ರದ ವಾಹನಗಳ ಮೇಲೆ ಡ್ರಿಂಕ್ ಡ್ರೈವ್ ಕೇಸ್ ಎಷ್ಟು ಹಾಕಿದ್ದೀರಿ, ಈ ವಾಹನಗಳು ತಮ್ಮ ಕಣ್ಣಿಗೆ ಸಿಕ್ಕಿಲ್ಲವೇ?, ನಿಮ್ಮ ಈ ದಬ್ಬಾಳಿಕೆಯಿಂದ ರೈತರು, ಜನ ಸಾಮಾನ್ಯರು ಹೆದರಿ ಓಡಾಡುವಂತ ಪರಿಸ್ಥಿತಿ ಉಂಟಾಗಿದೆ. ಅಪಘಾತ ತಡೆಯಬೇಕಾದರೆ ಮೊದಲು ಗುಂಡಿ ಬಿದ್ದ ರಸ್ತೆಗಳ ರಿಪೇರಿ ಮಾಡಲು ಮುಂದಾಗಬೇಕು,

ಟ್ರಾಫಿಕ್ ಸಿಗ್ನಲ್‌ಗಳಲ್ಲಿ ತಮ್ಮ ಸಿಬ್ಬಂದಿಗಳು ನಿಲ್ಲದೇ, ಸಂಧಿ–ಗೊಂಧಿಯಲ್ಲಿ ನಿಂತು, ಚಂದಾ ವಸೂಲಿಗೆ ಇಳಿದಿದ್ದಾರೆ. ಇದು ಯಾವ ನ್ಯಾಯ,

ತಮ್ಮ ಸಿಬ್ಬಂದಿಗಳ ಕಣ್ಣಿಗೆ ರಜಿಸ್ಟರ್ ಇಲ್ಲದ, ನೇಮ್ ಬೋರ್ಡ ಇಲ್ಲದ ವಾಹನಗಳು ಕಾಣುವುದಿಲ್ಲ, ಹಾಗೂ 4 ವೀಲರ್‌ಗಳು ಕೂಡಾ ತಮ್ಮ ಕಣ್ಣಿಗೆ ಕಾಣುವುದಿಲ್ಲ, ಕೇವಲ ದ್ವಿಚಕ್ರ ವಾಹನ, ರೈತರ ಗೂಡ್ಸ್ ಗಾಡಿಗಳು, ಕಾರ್ಮಿಕರ ದ್ವಿಚಕ್ರ ವಾಹನ, ಆಟೋಗಳು, ಟಂಟಂ, ನಿಮಗೆ ಕಣ್ಣುತಿವೆ, ಹೊರತು, 4 ಚಕ್ರದ (ಕಾರ್) ವೀಲರ್‌ಗಳು ತಮಗೆ ಸಿಗುವುದಿಲ್ಲ.,

ಈ ತಾರತಮ್ಯ ಯಾಕೆ? ಈ ನಿಮ್ಮ ನಡುವಳಿಕೆ ಹೀಗೆ ಮುಂದುವರೆದರೆ ಎಲ್ಲಾ ರೈತರು, ಕಾರ್ಮಿಕರು, ಸಾರ್ವಜನಿಕರು ಸೇರಿ ತಮ್ಮ ವಿರುದ್ಧ ಹೋರಾಟ ಮಾಡಲಾಗುವುದು.

ಆದ ಕಾರಣ ಇದಕ್ಕೆ ಕಡಿವಾಣ ಹಾಕಿ, ರೈತರಿಗೆ/ ಕಾರ್ಮಿಕರಿಗೆ, ಜನ ಸಾಮಾನ್ಯರಿಗೆ ಪ್ರಾಮುಖ್ಯತೆ ನೀಡಿ, ಕಾನೂನಿನ ಚೌಕಟ್ಟಿನಲ್ಲಿ ಕ್ರಮಕ್ಕೆ ಮುಂದಾಗಬೇಕೆಂದು ಎಂದು ರಾಹುಲ್ ಕೊಲ್ಲೂರಕರ್ ಜಿಲ್ಲಾಧ್ಯಕ್ಷರು ಮಾತನಾಡಿದರು.

ಈ ಸಂದರ್ಭದಲ್ಲಿ

ಬಂದಪ್ಪ ಕಟ್ಟಿಮನಿ, ಕಾಶೀನಾಥ್ ಕಾಣೆಕಲ್, ಬಿ ಆಂಜನೇಯ ಭಂಡಾರಿ, ಮೋನಪ್ಪ ಮುನೇಪ್ಪಾನೋರ್, ಸೈದಪ್ಪ ಕೂಲೂರ್, ರಮೇಶ್ ಕ್ಯಾತ್ನಾಳ್, ಮಶಪ್ಪ ಅರಿಕೇರಿ, ರಮೇಶ್ ಗಣಪುರ, ಹಣಮಂತ ಕೊಲ್ಲೂರ್, ಬಾಲು ಹಳ್ಳಿ, ಅನೇಕ ಉಪಸ್ಥಿತರಿದ್ದರು

## ಎಲ್ಲೇರಿ ಸರ್ಕಾರಿ ಪ್ರೌಢಶಾಲೆಯ ಮೈದಾನ ಜಲಾವೃತ – ಅಭಿವೃದ್ಧಿ ಕಾಮಗಾರಿ ಸ್ಥಗಿತ!



ಎಲ್ಲೇರಿ (ಕೊಂಕಲ್ ಹೋಬಳಿ): ಇಲ್ಲಿನ ಸರ್ಕಾರಿ ಪ್ರೌಢಶಾಲೆಯ ಮೈದಾನ ಮಳೆಗಾಲದಲ್ಲಿ ಸಂಪೂರ್ಣ ಜಲಾವೃತಗೊಂಡು, ವಿದ್ಯಾರ್ಥಿಗಳಿಗೆ ಪ್ರಾರ್ಥನೆ ಅಥವಾ ಆಟದ ಅವಕಾಶ ಲಭಿಸುವಂತಿಲ್ಲ. ಶಾಲೆಯಲ್ಲಿ ಅಧ್ಯಯನ ಮಾಡುತ್ತಿರುವ ಸುಮಾರು 250 ವಿದ್ಯಾರ್ಥಿಗಳು ಈ ಸಮಸ್ಯೆಯಿಂದ ತೀವ್ರ ತೆ–ಉಂದರೆ ಅನುಭವಿಸುತ್ತಿದ್ದಾರೆ.

ಈ ಕುರಿತು ಗ್ರಾಮ ಪಂಚಾಯಿತಿಗೆ ಹಲವಾರು ಬಾರಿ ದೂರು ನೀಡಿದರೂ ಯಾವುದೇ ಸ್ಪಂದನೆ ಲಭಿಸಿಲ್ಲ. ಕೆಲವೊಮ್ಮೆ ತಾತ್ಕಾಲಿಕವಾಗಿ ಮಣ್ಣು ಹಾಕುವ ನೆಪದಲ್ಲಿ ಹಣ ಲೂಟಿಯಾಗುತ್ತಿರುವ ಆರೋಪವಿದೆ. ಪಿಡಿಒ ಕೂಡ ಸಮಸ್ಯೆಗೆ ಸ್ಪಂದಿಸುತ್ತಿಲ್ಲ ಎಂಬುದಾಗಿ ಸ್ಥಳೀಯರು ತಿಳಿಸಿದ್ದಾರೆ.

ಇದೇ ಶಾಲೆಗೆ ಅಕ್ಷರ ಆವಿಷ್ಕಾರ ಯೋಜನೆಯಡಿಯಲ್ಲಿ ರೂ. 55 ಲಕ್ಷ ಅನುದಾನ ಬಂದಿದ್ದು, ವರ್ಷಗಳು ಕಳೆದರೂ ಕಾಮಗಾರಿ ಪೂರ್ಣಗೊಂಡಿಲ್ಲ. ಪ್ರಾರಂಭವಾದ ಕಾಮಗಾರಿಯೂ ಕಳಪೆವಾಗಿದೆ ಎಂದು ದೂರವಿದೆ.

ಈ ಕುರಿತು ಕರ್ನಾಟಕ ರಕ್ಷಣಾ ವೇದಿಕೆ, ಕೊಂಕಲ್ ಹೋಬಳಿ ಘಟಕ ಅಧ್ಯಕ್ಷ ಮುನೇಶ್ ಮಾದ್ವಾರ ಅವರು ತೀವ್ರ ಆಕ್ರೋಶ ವ್ಯಕ್ತಪಡಿಸಿ, "ಆದಷ್ಟು ಬೇಗನೆ ಶಾಲೆಯ ಮೈದಾನವನ್ನು ಸರಿಪಡಿಸಿ, ವಿದ್ಯಾರ್ಥಿಗಳಿಗೆ ಸುಲಭವಾಗಿ ಶಾಲಾ ಸೌಲಭ್ಯಗಳು ಲಭ್ಯವಾಗುವಂತೆ ಕ್ರಮಕೈಗೊಳ್ಳಬೇಕು" ಎಂದು ಆಗ್ರಹಿಸಿದ್ದಾರೆ.

## ಪಟ್ಟಣದದ್ಯಾಂತ ಬೇಕಾಬಿಟ್ಟಿ ಹಾಕಿರುವ ಗೂಡಂಗಡಿ ತೆರವು ಮಾಡಿ–ನಾಗೇಶ್ ಗದ್ದಗಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ/ಗುರುಮಠಕಲ್: ಪಟ್ಟಣದಲ್ಲಿ ಕಾನೂನು ಬಾಹಿರವಾಗಿ ಅನಧಿಕೃತವಾಗಿ ರಸ್ತೆ ಎರಡು ಬದಿಗಳಲ್ಲಿ ಶೆಡ್ ಗಳನ್ನು ನಿರ್ಮಾಣ ಮಾಡಿಕೊಂಡು ರಸ್ತೆ ಸಂಚಾರಕ್ಕೆ ತೊಂದರೆಯಾಗುತ್ತಿರುವ ಪರಿಣಾಮ ಅವುಗಳ ತೆರವಿಗೆ ಜಯಕರ್ನಾಟಕ ಸಂಘಟನೆ ವತಿಯಿಂದ ಗುರುಮಠಕಲ್ ಆರಕ್ಷಕ ನಿರೀಕ್ಷಕರಿಗೆ ಹಾಗೂ ಪುರಸಭೆ ಕಾರ್ಯಾಲಯದ ಮುಖ್ಯಾಧಿಕಾರಿಗಳಿಗೆ ಮನವಿ ನೀಡಿದ್ದಾರೆ. ಮನವಿಯಲ್ಲಿ ಸೂಚಿಸಿರುವ ಹಾಗೆ ಬಸವೇಶ್ವರ ವೃತ್ತದಿಂದ ಯಲ್ಲಮ್ಮ ಗುಡಿಯ ವರೆಗೆ, ಬಸವೇಶ್ವರ ವೃತ್ತದಿಂದ ಸರಕಾರಿ ಆಸ್ಪತ್ರೆಯ, ಬಸವೇಶ್ವರ ವೃತ್ತದಿಂದ ಯಾದಗಿರಿ ಮುಖ್ಯ ರಸ್ತೆಯ ಸಾಮ್ರಾಟ್ ವರೆಗೆ ಮತ್ತು ಸಾಮ್ರಾಟ್ ದಿಂದ ಬಸ್ ಸ್ಟಾಂಡ್ ವರೆಗೆ ಅಕ್ರಮವಾಗಿ **ಗೂಡಂಗಡಿಗಳ ನಿರ್ಮಾಣ ತೆರವಿಗೆ ಆಗ್ರಹ.**

ಗಂಭೀರ ಆರೋಪವೆಂದರೆ ಪ್ರತಿಯೊಂದು ಗೂಡಂಗಡಿಗೆ ಒಂದು ಲಕ್ಷ ರೂಪಾಯಿ ಮುಂಗಡ ಹಣ ತೆಗೆದುಕೊಂಡು ಪ್ರತಿ ತಿಂಗಳು ಮೂರರಿಂದ ನಾಲ್ಕು ಸಾವಿರ ರೂಪಾಯಿಗಳ ಬಾಡಿಗೆ ತೆಗೆದು–ಕೊಂಡು ಬೇರೆಯವರಿಗೆ ವ್ಯಾಪಾರ ಮಾಡುತ್ತಿದ್ದು, ಸಾರ್ವಜನಿಕರಿಗೆ ಇರುವ ಪಾದಚಾರಿ ಮಾರ್ಗ ಅಕ್ರಮಿಸಿಕೊಂಡು ಕೆಲ ವ್ಯಕ್ತಿಗಳು ಅಂಗಡಿಗಳನ್ನು ನಿರ್ಮಿಸಿ ಅವುಗಳನ್ನು ಬಾಡಿಗೆಗೆ ಕೊಡುತ್ತಿದ್ದಾರೆ.

ರಸ್ತೆ ಅತಿಕ್ರಮಣದ ಕುರಿತು ಪುರಸಭೆಯ ಯಾವ ಭಯವಿಲ್ಲವೆಂದು ಮೇಲ್ನೋಟಕ್ಕೆ ಸ್ಪಷ್ಟವಾಗಿ ಕಾಣುತ್ತಿದ್ದು, ಕೂಡಲೆ ರಸ್ತೆಯ ಮೇಲೆ ಅಕ್ರಮವಾಗಿ ನಿರ್ಮಿಸಿಕೊಂಡಿರುವ ಗೂಡಂಗಡಿಗಳನ್ನು ತೆರವುಗೊಳಿಸಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು. ಅಲ್ಲದೇ ನಿಮ್ಮ ಇಲಾಖೆಯ ಸ್ಥಳವಿದ್ದಲ್ಲಿ ವಾಣಿಜ್ಯ ಮಳಿಗೆಗಳನ್ನು ನಿರ್ಮಿಸಿ ವ್ಯಾಪಾರಸ್ತರಿಗೆ ವ್ಯಾಪರ ಮಾಡಲು ಅನುಕೂಲ ಮಾಡಿಕೊಡಬೇಕು ಎಂದು ಪುರಸಭೆ ಕಾರ್ಯಾಲಯದ ಮುಖ್ಯಾಧಿಕಾರಿಗಳಿಗೆ ಹಾಗೂ ಆರಕ್ಷಕ ನಿರೀಕ್ಷಕರಾದ ವೀರಣ್ಣ ದೊಡಮನಿ ಅವರಿಗೆ ಮನವಿ ನೀಡಿದ್ದು, ವಿಳಂಬ ದೊರಣೆ ತೋರಿದರೆ ಸಂಘಟನೆ ವತಿಯಿಂದ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಪುರಸಭೆ ಕಾರ್ಯಾಲಯದ ಮುಖ್ಯಾಧಿಕಾರಿಗಳಿಗೆ ತಿಳಿಸಿರುವದಾಗಿ ಜಯ ಕರ್ನಾಟಕ ಸಂಘಟನೆ ತಾಲೂಕ ಅಧ್ಯಕ್ಷ ನಾಗೇಶ್ ಗದ್ದಗಿ, ಕಾರ್ಯದರ್ಶಿ ಗೋಪಾಲಕೃಷ್ಣ ಮೆಥ ತಿಳಿಸಿದ್ದಾರೆ.

## ಬೆಳೆವಿಮೆ ನೋಂದಣಿ ಮಾಡಿಸಿಕೊಳ್ಳಲು ರೈತರಿಗೆ ಭೀಮರೆಡ್ಡಿ ಸಿಂಧನಕೇರಾ ಮನವಿ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಜು.19– ರೈತರ ಪ್ರಧಾನ ಮಂತ್ರಿ ಫಸಲ್ ಭೀಮ್ ಯೋಜನೆ 2025 –26 ನೇ ಸಾಲಿನ ಖರೀಫ್ ಬೆಳೆಗಳಿಗೆ ರೈತ ಬಾಂಧವರು ಬೆಳೆ ವಿಮೆ ಯೋಜನೆ ಅಡಿ ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಕೊಳ್ಳಿ ಆಶ್ರಯ ದೀಪ ಟ್ರಸ್ಟ್ (ರಿ) ಅಧ್ಯಕ್ಷ ಭೀಮರೆಡ್ಡಿ ಸಿಂಧನಕೇರಾರವರು ರೈತರಿಗೆ ಮನವಿ ಮಾಡಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಭೀಮರೆಡ್ಡಿ ಸಿಂಧನಕೇರಾ ರವರು ಈ ವರ್ಷವೂ ರೈತರ ಬೆಳೆ ವಿಮೆ ಮಾಡಿಸಬೇಕು, ಬೆಳವಿಮೆ ನೋಂದಣಿಗೆ ಜುಲೈ 31ರ ಅಂತಿಮ ದಿನಾಂಕವಾಗಿದ್ದು, ರೈತರು ತಮ್ಮ ಹತ್ತಿರ ಪೋಸ್ಟ್ ಆಫೀಸ್ ಬ್ಯಾಂಕ್ ಅಥವಾ ಸಿ ಎಸ್ ಸಿ ಕೇಂದ್ರಗಳಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿದೆ ಬೆಳೆವಿಮೆಯಿಂದ ಅತಿವೃಷ್ಟಿ ಮತ್ತು ಅನಾವೃಷ್ಟಿ ಪ್ರಕೃತಿ ವಿಕೋಪಗಳಿಂದ ತಮ್ಮ ಬೆಳೆಯ ನಷ್ಟವನ್ನು, ಆರ್ಥಿಕ ಸಂಕಷ್ಟ ಅನುಭವಿಸುವುದನ್ನು ತಪ್ಪಿಸಿಕೊಳ್ಳಬಹುದು. ಹೀಗಾಗಿ ಎಲ್ಲ ರೈತರು ಬೆಳೆವಿಮಾ ಮಾಡಿಸಿಕೊಳ್ಳಿ ಎಂದು ತಿಳಿಸಿದ್ದಾರೆ. ಹಾಗೂ ಆಶ್ರಯ ದೀಪ ಟ್ರಸ್ಟ್ (ರಿ) ಉಪಾಧ್ಯಕ್ಷರು, ಸದಸ್ಯರು ಕೂಡ ರೈತರಲ್ಲಿ ಬೆಳೆವಿಮೆ ನೋಂದಣಿ ಮಾಡಿಸಿಕೊಳ್ಳಲು ಮನವಿ ಮಾಡಿಕೊಂಡಿದ್ದಾರೆ.

## ಸ್ಥಳದಲ್ಲಿಯೇ ಎಲ್ಲದಕ್ಕೂ ಪರಿಹಾರ ಸೂಚಿಸಿದ ಶಾಸಕರು.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಇಷ್ಟು ವರ್ಷಗಳ ಕಾಲ ಇಲ್ಲಿ ಏನಿತ್ತೋ, ಏನಿಲ್ಲೋ..! ಆದರೇ ಇಂದಿನಿಂದ ನೀವು ಓದುತ್ತಿರುವ ಈ ಶಾಲೆಗೆ ಇರುವ ಸಮಸ್ಯೆಗಳಿಗೆ ಹಂತ, ಹಂತವಾಗಿ ಮುಕ್ತಿ ಹಾಡಲು ನಾನು ಬದ್ಧನಿದ್ದೆನೆ. ನೀವು ಮಾತ್ರ ಕಠಿಣ ಶ್ರಮದಿಂದ ಅಭ್ಯಾಸ ಮಾಡಿ, ಶಿಕ್ಷಕರೇ ಉತ್ತಮ ಬೋಧನೆ ಮಾಡಿ ಎಂದು ಹೇಳುವ ಮೂಲಕ ಗುರುಮಠಕಲ್ ಶಾಸಕ ಶರ–ಣಗೌಡ ಕಂದಕೂರು ಅಭಯ ನೀಡಿದ ವಿಶೇಷ ಪ್ರಸಂಗ ನಗರದ ಹೊರವಲಯದಲ್ಲಿರುವ ಬಂದಳ್ಳಿ ಗ್ರಾಪಂ ವ್ಯಾಪ್ತಿಯ ಚಾಮನಳ್ಳಿ ಸಿಮಾಂತರದಲ್ಲಿರುವ ಆದರ್ಶ ವಿದ್ಯಾಲಯದಲ್ಲಿ ಶನಿವಾರ ಬೆಳಗ್ಗೆ ನಡೆಯಿತು.

ಕೆಲ ದಿನಗಳಿಂದಲ್ಲೂ ಈ ಶಾಲೆಯ ಹಲವು ಸಮಸ್ಯೆಗಳ ಬಗ್ಗೆ ಎಸ್ ಡಿಎಂಸಿ ಅಧ್ಯಕ್ಷರು, ಪಾಲಕರು ಮತ್ತು ಶಾಲಾ ಸಿಬ್ಬಂದಿ ಶಾಸಕರ ಗಮನಕ್ಕೆ ತರುತ್ತಿದ್ದಂತೆಯೇ ಡಿಡಿಪಿಐ, ಲೋಕೊಪಯೋಗಿ ಇಲಾಖೆ ಹಾಗೂ ಇತರೆ ಸಂಬಂಧಪಟ್ಟವರೊಂದಿಗೆ ಆ ಶಾಲೆಗೆ ಭೇಟಿ ನೀಡಿ ಅಲ್ಲಿನ ಸಮಸ್ಯೆಗಳು ಕಣ್ಣಾರೇ ಕಂಡು ಅರೆ ಕ್ಷಣ ಬೆರಗಾದರು.

ಮುಖ್ಯರಸ್ತೆಯಿಂದ ಸುಮಾರು ಒಂದು ಕಿಲೋ ಮೀಟರ್ ಉದ್ದನೆ ರಸ್ತೆಯಲ್ಲಿ ಆಳುದ್ದ ಐವತ್ತು ಹೆಚ್ಚು ತೆಗ್ಗುಗಳು, ಅದರಲ್ಲಿ ನಿಂತ ಮಳೆ ನೀರು. ಆದರೂ ಮಕ್ಕಳು, ಶಿಕ್ಷಕರು ಮತ್ತು ಸಾರ್ವಜನಿಕರು ಕಳೆದ ಹತ್ತು ವರ್ಷಗಳಿಂದ ಹಾಗೇ ಸಂಚರಿಸುತ್ತಿರುವ ವಿಷಯ ಅರಿತ ಶಾಸಕರು, ಲೋಕೋಪಯೋಗಿ ಇಲಾಖೆ ಅಧಿಕಾರಿಯನ್ನು ಕರೆದು ಕೂಡಲೇ ಈ ರಸ್ತೆ ಕಾಮಗಾರಿ ಕುರಿತು ಅಂದಾಜು ವೆಚ್ಚ ತಯಾರಿಸಿ, ಇಷ್ಟರಲ್ಲಿಯೇ ಕಾಮಗಾರಿ ಶುರು ಮಾಡಿ ಗುಣಮಟ್ಟ ರಸ್ತೆ ನಿರ್ಮಿಸಿ ಎಂದು ಸ್ಥಳದಲ್ಲಿಯೇ ಸೂಚಿಸಿದರು.

ಅಲ್ಲಿಂದ ಶಾಲೆಯೊಳಗೆ ಬಂದ ಶಾಸಕರು ಅಲ್ಲಿ ಸೇರಿದ್ದ ಸುಮಾರು 480 ಮಕ್ಕಳನ್ನು ಒಂದೆಡೆ ಸೇರಿಸಿ ಎಲ್ಲರಿಗೂ ಮಾತಾಡಿ ಸಮಸ್ಯೆಗಳನ್ನು ಆಲಿಸಿದರು. ಸರ್ ನಮಗೆ ಬಸ್ ವ್ಯವಸ್ಥೆ ಆಗಬೇಕು. ಶುದ್ಧ ಕುಡಿಯುವ ನೀರು ಬೇಕು. ವಿದ್ಯುತ್ ನ ಸಮಸ್ಯೆ ನೀಗಬೇಕು. ಆಂಗ್ಲ ಮಾಧ್ಯಮ ಶಾಲೆಯಿದ್ದರೂ ಆ ವಿಷಯದ ಶಿಕ್ಷಕರೇ ಇಲ್ಲ. ಶಾಲೆಗೆ ಸುತ್ತುಗೋಡೆ ನಿರ್ಮಿಸಿಕೊಡಿ ಹೀಗೆ ಮಕ್ಕಳು ಹೇಳಿದ್ದನ್ನು ಶಾಂತಚಿತ್ತದಿಂದ ಆಲಿಸಿದ ಶಾಸಕ ಕಂದಕೂರು, ಪ್ರತಿಯೊಂದಕ್ಕೂ ಅಲ್ಲಿಂದಲೇ ಸಂಬಂಧಪಟ್ಟ ಅಧಿಕಾರಿಗಳಿಗೆ ದೂರವಾಣಿ ಮಾತಾಡಿ ಮತ್ತು ಜೊತೆಗೆ ಬಂದಿದ್ದ ಅಧಿಕಾರಿಗಳಿಗೆ ಸೂಚಿಸಿ ಆದಷ್ಟು ಬೇಗನೇ ವಿದ್ಯಾರ್ಥಿಗಳು ಹೇಳಿದ ಎಲ್ಲ ಬೇಡಿಕೆಗಳಿಗೆ ಮುಕ್ತಿ ಕಾಣಿಸಿ ಎಂದರು. ಆರ್ ಒ ಪ್ಲಾಂಟ್ ಕೂಡಲೇ ಆರಂಭಿಸಿ, ಇಂಗ್ಲಷ ಶಿಕ್ಷಕರೊಬ್ಬರನ್ನು ನಗರದಿಂದ ಮೂರು ದಿನ ಇಲ್ಲಿಗೆ ಬಂದು ಪಾಠ ಮಾಡಲು ಆದೇಶಿಸಿ ಎಂದು ಡಿಡಿಪಿಐ ಅವರಿಗೆ ಹೇಳಿದರು. ಅದಕ್ಕೆ ಅವರು ಆಯಿತು ಸರ್ ವ್ಯವಸ್ಥೆ ಮಾಡುವೆ ಎಂದರು.

ಹೀಗೆ ಅರ್ಧ ಗಂಟೆಯಲ್ಲಿ ಅಲ್ಲಿದ್ದ ಸಮಸ್ಯೆಗಳಿಗೆ ಪರಿಹಾರ ಸೂಚಿಸುವ ಮೂಲಕ ಮಕ್ಕಳ ನೆಚ್ಚಿನ ಶಾಸಕರು ಎಂದೇನಿಸಿಕೊಂಡು ಚಪ್ಪಾಳೆ ಮೂಲಕ ಸೈ ಎನಿಸಿಕೊಂಡರು.

**ಭೇಟಿ ನೀಡದ ಮೊದಲ ಶಾಸಕ.**

ಕಳೆದ ಸುಮಾರು 12 ವರ್ಷಗಳ ಹಿಂದೆಯೇ ಆರಂಭವಾದ ಈ ಶಾಲೆಗೆ ಭೇಟಿ ನೀಡಿದ ಮೊದಲ ಶಾಸಕ ಶರಣಗೌಡ ಕಂದಕೂರು ಎಂಬ ಮಾತುಗಳು ಅಲ್ಲಿ ಸೇರಿದ್ದ ಪಾಕಲರು ಮಕ್ಕಳು ಹೇಳಿದ್ದು ಕೇಳಿ ಬಂತು.

ಶಾಲೆಗೆ ಹೋಗಿ ಬರುವ ರಸ್ತೆ ನಿರ್ಮಿಸಲು ಅಧಿಕಾರಿಗಳು ಅಂ–ದಾಜು ವೆಚ್ಚ ತಯಾರಿಸುವುದಾಗಿ ಹೇಳಿದರು. ಇದೇ ವೇಳೆ ಈ ಶಾಲೆ ವ್ಯಾಪ್ತಿಗೆ ಇರುವ ಒಟ್ಟು ಜಾಗದ ಬಗ್ಗೆ ಸರ್ವೆ ಮಾಡಿ ಎಂದು ಶಾಸಕರು ಹೇಳಿದರು.

ಹೆಣ್ಣು ಮಕ್ಕಳೆ ಯಾವುದೇ ಕಾರಣಕ್ಕೂ 18 ವರ್ಷ ಆಗುವವರೆಗೂ ಮದುವೆ ಆಗಬೇಡಿ. ಮೊದಲು ಕಠಿಣ ಶ್ರಮವಹಿಸಿ ಅಭ್ಯಾಸ ಮಾಡಿ. ಆಗ ನೀವು ನಿಮ್ಮ ಜೀವನದಲ್ಲಿ ಉನ್ನತ ಮಟ್ಟಕ್ಕೆ ಹೊಗುತ್ತಿರಿ ಎಂದು ಶಾಸಕರು ಕಿವಿ ಮಾತು ಹೇಳಿದರು. ಇದೇ ವೇಳೆ ಶಾಸಕರು ಸಸಿ ನೆಟ್ಟರು.

**ಭೇಟಿ ವೇಳೆ ಇದ್ದ ಪ್ರಮುಖರು.**

ಈ ವೇಳೆ ಜಿಲ್ಲಾ ಜೆಡಿಎಸ್ ಸುಭಾಷಚಂದ್ರ ಕಟಕಟಿ, ಬಸವರಾಜಗೌಡ ಚಾಮನಹಳ್ಳಿ, ಶರಣಗೌಡ ಚಾಮನಹಳ್ಳಿ, ಬಸ್ಸುಗೌಡ ದೇಸಾಯಿ ಚಾಮನಹಳ್ಳಿ, ಎಸ್ ಡಿಎಂಸಿ ಅಧ್ಯಕ್ಷ ರುದ್ರಸ್ವಾಮಿ ಮೇಲಿನಮಠ, ಉಪಾಧ್ಯಕ್ಷೆ ಮರೇಮ್ಮ ಸಿದ್ದಪ್ಪ ಲಿಂಗೇರಿ, ಇಂಜಿನಿಯರ್ ಪರಶುರಾಮ, ಶಾಲೆ ಮುಖ್ಯಗುರು ಶಂಕರೆಮ್ಮ, ಶಿಕ್ಷಕರಾದ ಲಕ್ಷ್ಮಿ ನಾರಾಯಣ, ಭಗವಂತ, ಸುಹಾಸಿನಿ, ರೂಬಿ, ಶಿವಶರಣಪ್ಪ ಹಾಗೂ ಸಿಬ್ಬಂದಿ ಸೇರಿದಂತೆಯೇ ಇತರರಿದ್ದರು.

## ಕನ್ನಡೋತ್ಸವ ಹಾಗೂ ಮಕ್ಕಳ ಸಾಹಿತ್ಯ ಸಮ್ಮೇಳನ ಇಂದು




ಮಲ್ಲಮ್ಮ ನುಡಿ ವಾರ್ತೆ

ಇಳಕಲ್ ಇಲ್ಲಿನ ವಿಜಯ ಮಾಹಾಂತೇಶ ಮಠದ ದಾಸೋಹ ಭವನದಲ್ಲಿ ರವಿವಾರ ಕರುನಾಡು ಹಣತೆ ಕವಿ ಬಳಗ ರಾಜ್ಯ ಕೇಂದ್ರ ಘಟಕ ಚಿತ್ರದುರ್ಗ. ಜಿಲ್ಲಾ ಘಟಕ ಬಾಗಲಕೋಟೆ ಹಾಗೂ ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ ತಾಲೂಕ್ ಘಟಕ ಇಳಕಲ್ ಇವರ ಸಂಯೋಗದಲ್ಲಿ ಕಲ್ಯಾಣ ಕನ್ನಡೋತ್ಸವ ಹಾಗೂ ಮಕ್ಕಳ ಸಾಹಿತ್ಯ ಸಮ್ಮೇಳನ ಕಾರ್ಯಕ್ರಮ ಹಾಗೂ ವಾರ್ಷಿಕೋತ್ಸವ ಸಮಾರಂಭ ಎರಡು ಕೃತಿಗಳ ಲೋಕಾರ್ಪಣೆ ಪದಗ್ರಹಣ ಸಾಧಕರಿಗೆ ರಾಜ್ಯ ಪ್ರಶಸ್ತಿ ಪ್ರಧಾನ ಸ್ಥಳೀಯ ಸಾಧಕರಿಗೆ ಗೌರವ ಸನ್ಮಾನ ಮಕ್ಕಳಿಂದ ಕವಿಗೋಷ್ಠಿ ಮತ್ತು ಸಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿದ್ದು. ಕಾರ್ಯಕ್ರಮದ ದಿವ್ಯ ಸಾನಿಧ್ಯ ಶ್ರೀ ಮಣಿಪುರ ಗುರುಮಾಂತ ಸ್ವಾಮೀಜಿಗಳು ಚಿತ್ತರಗಿ ಸಂಸ್ಥಾನ ಮಠ ಇಲಕಲ್. ಶ್ರೀಮಣಿಪುರ ಡಾಕ್ಟರ್ ಚನ್ನಬಸವ ದೇಶಿಕೇಂದ್ರ ಶಿವಾಚಾರ್ಯ ಮಹಾಸ್ವಾಮೀಜಿಗಳವರು ನಂದವಾಡಗಿ. ಶ್ರೀ ಮ ನಿ ಪ್ರ ಚನ್ನ ವೀರೇಶ್ವರ ಮಹಾಸ್ವಾಮೀಜಿಗಳವರು ವಿರಕ್ತ ಮಠ ಕೊಣ್ಣೂರು. ವಹಿಸಲಿದ್ದಾರೆ.

ಕಾರ್ಯಕ್ರಮದ ಉದ್ಘಾಟಕರಾಗಿ ಶ್ರೀ ಡಾ// ವಿಜಯಾನಂದ ಎಸ್ ಕಾಶಪ್ಪನವರ ಅಧ್ಯಕ್ಷರು ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ಬೆಂಗಳೂರು ಹಾಗೂ ಜನಪ್ರಿಯ ಶಾಸಕರು ಹುನಗುಂದ ಆಗಮಿಸಲಿದ್ದು. ಶ್ರೀಮತಿ ಲಲಿತ ಕೆ ಹೊಸಪ್ಯಾಟೆ ಹಿರಿಯ ಸಾಹಿತಿಗಳು ಮಕ್ಕಳ ಸಾಹಿತ್ಯ ಸಮ್ಮೇಳನಾಧ್ಯಕ್ಷರಾಗಿ ಆಗಮಿಸಲಿದ್ದಾರೆ. ಎಂದು ಎಚ್. ಎಸ್ ಗೌಡರ ತಿಳಿಸಿದರು.

ತಾಲೂಕ ಮಕ್ಕಳ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಶ್ರೀಮತಿ ಎಂ ಅರುಂಧತಿ ಮಾತನಾಡಿ ಸಾಹಿತ್ಯ ಸಮ್ಮೇಳನದಲ್ಲಿ ಮಕ್ಕಳಿಗಾಗಿ ವಿವಿಧ ಕವಿಗೋಷ್ಠಿಗಳು ಮಕ್ಕಳ ಸಂಸ್ಕೃತಿಕ ಕಾರ್ಯಕ್ರಮಗಳು ಈ ಸಂಪೂರ್ಣ ಕಾರ್ಯಕ್ರಮ ಮಕ್ಕಳಿಗೆ ನಡೆಯಲಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳು ಮತ್ತು ಪೋಷಕರು ಪಾಲ್ಗೊಳ್ಳಬೇಕೆಂದು ಕರೆ ನೀಡಿದರು. ಪತ್ರಿಕಾಗೋಷ್ಠಿಯಲ್ಲಿ ಕರುನಾಡು ಹಣತೆ ರಾಜ್ಯ ಪ್ರಧಾನ ಕಾರ್ಯದರ್ಶಿ ಶ್ರೀ ಎಚ್.ಎಸ್, ಗೌಡರ. ಮಕ್ಕಳ ಸಾಹಿತ್ಯ ಪರಿಷತ ಸದಸ್ಯರಾದ. ಎಂ ಗಂಗಾಧರ. ಎಚ್,ಬಿ,ಕಂಬಳಿ. ಮಂಜುನಾಥ ಓಲೇಕಾರ, ಸಚಿನ ಸಾಲಿಮಠ, ಶರಣಗೌಡ ಕಂದಕೂರ, ಬಸವರಾಜ್ ಬಾಗವಾಡಗಿ. ಲಲಿತಾಬಾಯಿ ಬಿಜ್ಜಳ. ಮಂಜುಳಾ ಬನ್ನಿಗೋಳಮಠ, ಮಂಜುಳಾ ಕೆಂಗಲ್ಲ್, ಲಕ್ಷ್ಮಿ ಪೂಜಾರಿ, ವೀರಮ್ಮ ಕುಂಬಾರ. ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

## ಕಾಳಗಿ: ಸಹಾಯಧನ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜು.19–ಪ್ರಸಕ್ತ 2025–26ನೇ ಸಾಲಿನ ಎಸ್.ಎಫ್.ಸಿ. (ಮುಕ್ತನಿಧಿ) ಯೋಜನೆಯಡಿ ಒಟ್ಟು ಹಂಚಿಕೆಯಾದ ಅನುದಾನದಲ್ಲಿ ಕಾಳಗಿ ಪಟ್ಟಣದ ವ್ಯಾಪ್ತಿಯಲ್ಲಿ ವೈಯಕ್ತಿಕ ಸೌಲಭ್ಯದ ಪರಿಶಿಷ್ಟ ಪಂಗಡ (ಟಿ.ಎಸ್.ಪಿ) ಶೇ. 24.10ರಲ್ಲಿ ಮತ್ತು ಶೇ. 5ರ ಅಂಗವಿಕಲ ಕಲ್ಯಾಣ ನಿಧಿಯಲ್ಲಿ ಕಾಳಗಿ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಪಂಗಡ ಉನ್ನತ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಹಾಯಧನ ನೀಡಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಕಾಳಗಿ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿದ ಅರ್ಜಿಯೊಂದಿಗೆ ಅವಶ್ಯಕ ದಾಖಲೆಗಳಾದ ಪ್ರಸ್ತುತ ಸಾಲಿನ ಪಿ.ಯು.ಸಿ ದಿಂದ ಯಾವುದೇ ಡಿಗ್ರಿ ವಿದ್ಯಾರ್ಹತೆ ಪ್ರಮಾಣಪತ್ರ, ಪಾಸ್‌ಪೋರ್ಟ್ ಭಾವಚಿತ್ರ, ಆಧಾರ ಕಾರ್ಡ್, ರೇಷನ್ ಕಾರ್ಡ ಹಾಗೂ ಜಾತಿ ಮತ್ತು ಆದಾಯ ಪ್ರಮಾಣಪತ್ರ ದಾಖಲೆಗಳೊಂದಿಗೆ 2025ರ ಜುಲೈ 24 ರೊಳಗಾಗಿ ಕಾಳಗಿ ಪಟ್ಟಣ ಪಂಚಾಯತ್ ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಾಳಗಿ ಪಟ್ಟಣ ಪಂಚಾಯತ್ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

## ಜಿಲ್ಲಾ ಮಟ್ಟದಲ್ಲಿ ಕಾಣೆಯಾದ ಮಕ್ಕಳ ಪತ್ತೆಗೆ ಕಾರ್ಯಪಡೆ ರಚನೆ: ನ್ಯಾ.ರಾಜೇಶ್ ಎನ್.ಹೊಸಮನೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.19–ಜಿಲ್ಲೆಯಲ್ಲಿ ಅಪಹರಣ,ಕಾಣೆಯಾದ ಮಕ್ಕಳ ಬಗ್ಗೆ ವಿವಿಧ ಇಲಾಖೆಗಳೊಂದಿಗೆ ಪರಿಶೀಲನೆ ನಡೆಸಲಾಗುತ್ತಿದ್ದು, ಇತ್ಯರ್ಥವಾಗದೇ ಬಾಕಿ ಇರುವ ಪ್ರಕರಣಗಳ ಮಾಹಿತಿಯನ್ನು ಕರ್ನಾಟಕ ಕಾನೂನು ಸೇವಾ ಪ್ರಾಧಿಕಾರಕ್ಕೆ ಪ್ರತಿ ಮಾಹೆ ಮಾಹಿತಿ ಒದಗಿಸುವ ನಿಟ್ಟಿನಲ್ಲಿ ಜಿಲ್ಲಾ ಮಟ್ಟದ ಕಾರ್ಯಪಡೆ ರಚಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಹೇಳಿದರು.

ಶುಕ್ರವಾರ ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಮಕ್ಕಳ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಸ್ವಯಂಸೇವಾ ಸಂಸ್ಥೆಗಳ ಮುಖ್ಯಸ್ಥರು, ಪ್ಯಾರಾಲೀಗಲ್ ವಾಲಂಟಿಯರ್ಸ್‌ರೊಂದಿಗೆ ಏರ್ಪಡಿಸಿದ್ದ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಕಾಣೆಯಾದ ಮಕ್ಕಳ ಮನೆ ಭೇಟಿ ನೀಡಿ ಪ್ರಸ್ತುತ ವಸ್ತುಸ್ಥಿತಿಗಳ ಕುರಿತು ಮಾಹಿತಿ ಪಡೆಯಬೇಕು. ಜಿಲ್ಲೆಯಲ್ಲಿ ಸರ್ಕಾರಿ ಮತ್ತು ಸರ್ಕಾರೇತರ ಶಾಲಾ–ಕಾಲೇಜು, ವಸತಿ ನಿಲಯಗಳಲ್ಲಿ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಬೇಕು. ಗ್ರಾಮ ಪಂಚಾಯತಿ ಮಟ್ಟದಲ್ಲಿ ಮಹಿಳೆಯರು ಮತ್ತು ಮಕ್ಕಳ ಕಾವಲು ಸಭೆ ಹಮ್ಮಿಕೊಂಡು ಆ ಸಭೆಯಲ್ಲಿ ಕಾಣೆಯಾದ ಮಕ್ಕಳ ಕುರಿತು ಮಾಹಿತಿ ನೀಡಬೇಕು ಎಂದು ತಿಳಿಸಿದರು.

ಪೊಲೀಸ್ ಉಪ ಅಧೀಕ್ಷಕ ನವೀನ್ ಕುಮಾರ್ ಅವರು ಮಾತನಾಡಿ, ಎಲ್ಲಾ ಠಾಣೆ–ಯ ಪೊಲೀಸ್ ಅಧಿಕಾರಿಗಳು ಹೆಚ್ಚಿನ ನಿಗಾವಹಿಸಿ ಕಾಣೆಯಾದ ಮಕ್ಕಳ ಕುರಿತು ಪತ್ತೆ ಹಚ್ಚಲು ಕ್ರಮವಹಿಸಬೇಕು. ಈ ಕುರಿತು ಪೊಲೀಸ್ ಇಲಾಖೆ ವತಿಯಿಂದ ತೆರೆದ ಮನೆ ಕಾರ್ಯಕ್ರಮವನ್ನು ಎಲ್ಲಾ ಶಾಲಾ–ಕಾಲೇಜುಗಳಲ್ಲಿ ಹಮ್ಮಿಕೊಂಡು ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಳೆ ನಾಗಪ್ಪ ಮಾತನಾಡಿ, ಜಿಲ್ಲೆಯಲ್ಲಿ ಕಾಣೆಯಾದ ಮಕ್ಕಳ ಕುರಿತು ಈಗಾಗಲೇ ಘಟಕದಿಂದ ಜಾಗೃತಿ ಕಾರ್ಯಕ್ರಮ ಮತ್ತು ತರಬೇತಿ ಹಮ್ಮಿಕೊಳ್ಳಲಾಗುತ್ತಿದ್ದು, ಮಕ್ಕಳು ಕಾಣೆಯಾದ ತಕ್ಷಣ ಮಕ್ಕಳ ಸಹಾಯವಾಣಿ 1098 ಅಥವಾ 112 ಕರೆ ಮಾಡಬೇಕು ಎಂದು ತಿಳಿಸಿದರು.

ಬಳಿಕ ಮಕ್ಕಳ ಸಹಾಯವಾಣಿಯ ವಿನ್ಯಾಸಗೊಂಡ ಹೊಸ ಲೋಗೋ ಹೊಂದಿರುವ ಪೋಸ್ಟರ್ ಅನ್ನು ಗಣ್ಯರು ಬಿಡುಗಡೆಗೊಳಿಸಿದರು.

ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕಿ ಉಮಾದೇವಿ, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷೆ ವಿಜಯಲಕ್ಷ್ಮೀ ಮೈದೂರು, ಜಿಲ್ಲಾ ಬಾಲನ್ಯಾಯ ಮಂಡಳಿಯ ಸದಸ್ಯರಾದ ಪುಷ್ಪಲತಾ, ಮುನಿಯಪ್ಪ, ಮಕ್ಕಳ ವಿಶೇಷ ಪೊಲೀಸ್ ಘಟಕದ ಮುಖ್ಯಸ್ಥ ಚಂದ್ರಕಾಂತ್ ನಂದಾರೆಡ್ಡಿ, ಮಾನವ ಕಳ್ಳಸಾಗಣಿಕೆ ವಿರೋಧಿ ಘಟಕದ ಪೊಲೀಸ್ ಅಧಿಕಾರಿ ರಮೇಶ್ ಕುಲಕರ್ಣಿ, ಪ್ಯಾರಾಲೀಗಲ್ ವಾಲಂಟಿಯರ್ಸ್ ಆನಂದ್, ಶಿಲ್ಪಾ, ರೀಡ್ಸ್ ಸಂಸ್ಥೆಯ ತಿಪ್ಪೇಸ್ವಾಮಿ, ರೀಚ್ ಸಂಸ್ಥೆಯ ಹನುಮಂತಪ್ಪ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳಾದ ಸಿ.ಈಶ್ವರ ರಾವ್, ಡಿ.ಜಿ.ಮಂಜುನಾಥ, ಚನ್ನಬಸಪ್ಪ ಪಾಟೀಲ್ ಮತ್ತು ಮಕ್ಕಳ ವಿಶೇಷ ಪೊಲೀಸ್ ಘಟಕದ ಅಧಿಕಾರಿಗಳಾದ ಲಲಿತಮ್ಮ, ರಾಜು ಹಾಗೂ ಇತರರು ಉಪಸ್ಥಿತರಿದ್ದರು.

## ದಲಿತರಿಗೆ ಭೂ ಒಡೆತನ ವಸತಿಗೆ ಕ,ದಸಂ,ಸ ಪ್ರತಿಭಟನೆ!



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ,ಗ್ರಾಮೀಣಪ್ರದೇಶದಲ್ಲಿ ದಲಿತ ಸಮೂದಾಯಗಳಿಗೆ ಭೂಮಿ ಇಲ್ಲದೆ ಕೂಲಿಗಳಾಗಿದ್ದು, ವಸತಿ ಇಲ್ಲದೆ ನಿರಾಶ್ರೀತರಾಗಿದ್ದು ಅಲ್ಲದೆ ಶವ ಸಂಸ್ಕಾರಗಳಿಗೂ ಜಾಗವಿಲ್ಲದೆ ಇಂದು ಅನೇಕ ದಲಿತ ಸಮುದಾಯಗಳು ಮೂಲೆಗುಂಪು ಸೇರಿವೆ, ಅವರಿಗೆ ಸರ್ಕಾರ ಸೂಕ್ತ ಜಮೀನು ನೀಡಿ ಭೂ ಒಡೆತನ ನೀಡಬೇಕು, ಮನೆ ಇಲ್ಲದೆ ಇರುವ ಗುಡಿಸಲಲ್ಲಿ ಇರುವ ದಲಿತರಿಗೆ ಮನೆಗಳನ್ನು ನಿರ್ಮಾಣ ಆಡಬೇಕು, ಎಂದು ಕ,ದ,ಸಂ,ಸ ಅಂಬೇಡ್ಕರ ವಾದ ತಾಲುಕಾ ಸಮಿತಿ ತಹಿಸಲ್ದಾರ ಕಚೇರಿ ಮುಂದೆ ಧರಣಿ ಸತ್ಯಾಗ್ರಹ ನಡೆಸಿದರು, ವಿಬೂತಿಹಳ್ಳಿ ಗ್ರಾಮದ ದಲಿತರ ಮೇಲಿನ ಸುಳ್ಳು ಪ್ರಕರಣ ದಾಖಲಿಸಿದ್ದನ್ನು ಕೈಬಿಡಬೇಕು, ಅವರಿಗೆ ಸೂಕ್ತ ಪೋಲಿಸ್ ರಕ್ಷಣೆ ನೀಡಿ ಕಾನೂನು ಪ್ರಕಾರ ನ್ಯಾಯ ಒದಗಿಸಬೇಕು, ಸಗರ ದಲಿತರಿಗೆ ನಿವೇಶನ ನೀಡಬೇಕು. ದೌರ್ಜನ್ಯ ಪ್ರಕರಣದಲ್ಲಿ ದಾಖಲಾದ ಆರೋಪಿಗಳನ್ನು ಬಂಧಿಸಬೇಕು ಎಂದು ಪತ್ರಿಭಟನಾಕಾರರು ಒತ್ತಾಯಸಿದರು, ಈ ಸಂಧರ್ಭದಲ್ಲಿ ಶಿರೆಸ್ತೆದಾರ ವೆಂಕಟೇಶರವರಿಗೆ ಮನವಿ ಪತ್ರ ಸಲ್ಲಿಸಿದರು. ಈ ಪ್ರತಿಭಟನೆಯಲ್ಲಿ ದಲಿತ ಹಿರಿಯ ಮುಖಂಡರಾದ ಮಲ್ಲಿಕಾರ್ಜುನ ಪೂಜಾರಿ, ರಾಜ್ಯ ಸಮಿತಿ ಸದಸ್ಯರಾದ ನಾಗಣ್ಣ ಬಡಿಗೇರ, ಹೊನ್ನಪ್ಪ ರಸ್ತಾಪುರ, ಹೊನ್ನಪ್ಪ ಗಂಗನಾಳ, ಜಿಲ್ಲಾ ಸಮಿತಿ ಮಹಿಳಾ ಸಂಚಾಲಕರಾದ ಸುನಂದಾ ಮದ್ದರ್ಕಿ, ಜಿ,ಸಂ, ಸಂಚಾಲಕರಾದ ಬಸವರಾಜ ಅಣಿಬಿ, ಪರಶುರಾಮ ಮಹಲರೋಜಾ, ಜಯರಡ್ಡಿ ಹೋಸಮನಿ, ಮರೆಪ್ಪ ಸಲಾದಪುರ, ತಾಲುಕಾ ಸಂಚಾಲಕರಾದ ಚಂದ್ರಕಾಂತ ಬಜೇರಿ, ಶುಭಾಸ ತಳವಾರ, ಅನೀಲ ಸಾಕ್ರೆ, ಮಾನಪ್ಪ ಮುದಕನರ್, ರಾಚಪ್ಪ ಬಾರಿಗಿಡದ, ಮಾಳಪ್ಪ ಸಲಾದಪುರ, ಹಯ್ಯಾಳಪ್ಪ ವಿಬೂತಿಹಳ್ಳಿ, ಭೀಮರಾಯಜೇಗ್ರಿ, ಮಾನಪ್ಪ ಮುದಕನೋರ್, ಪ್ರಭುಬಡಿಗೇರ, ಮರೆಪ್ಪ ಮಹಲರೋಜಾ, ನಾಗರಾಜ ಬೊಮನಳ್ಳಿ, ಹಯ್ಯಾಳಪ್ಪ ದೇವಕರ್, ಶರಣು ಸಗರ, ಸುರೇಶ ಸಗರ. ಸುಭಾಶ ಮೂಲಿಮನಿ, ಮಾಹಾಂತೇಶ ಚಟ್ನಳ್ಳಿ, ಕನ್ಯಾಯ್ಯ ರೋಜಾ, ಮರೆಪ್ಪ ಮ್ಯಾಗೇರಿ, ರವಿ ರೋಜಾ, ಶರಣಪ್ಪ ರೋಜಾ, ಶರಣಪ್ಪ ಬೂತಾಳಿ, ಅಂಬ್ರೇಶ ಹಳಿಪೇಟ. ಭಾರತಿಕಕ್ಕಸಗೇರಿ, ಶಾಂತಮ್ಮ ಬಡಿಗೇರ, ಯಲ್ಲಮ್ಮ ಸಾದು ಸೇರಿದಂತೆ ಅನೇಕ ಮುಖಂಡರು ಕಾರ್ಯಕರ್ತರು ಪಾಲ್ಗೊಂಡಿದ್ದರು,

### ಸಿರುಗುಪ್ಪ: ಮನಸೊರಗೊಂಡ ಚಿಗುರು ಕಾರ್ಯಕ್ರಮ

## ಬಾಲ ಕಲಾವಿದರ ಪ್ರೋತ್ಸಾಹಿಸುವ ಕಾರ್ಯವಾಗಬೇಕಿದೆ: ಕುರುವಳ್ಳಿ ತಿಮ್ಮಯ್ಯ



ಬಳ್ಳಾರಿ,ಜು.19–ಬಾಲಕಲಾವಿದರ ಪ್ರೋತ್ಸಾಹಿಸುವ ಕಾರ್ಯ ನಿರಂತರವಾಗಿ ನಡೆಯಬೇಕು ಎಂದು ಸಿರುಗುಪ್ಪದ ಸಾಹಿತಿ ಹಾಗೂ ರಂಗನಿರ್ದೇಶಕ ಕುರುವಳ್ಳಿ ತಿಮ್ಮಯ್ಯ ಅವರು ಕರೆ ನೀಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬಳ್ಳಾರಿ ವತಿಯಿಂದ ಸಿರುಗುಪ್ಪ ಪಟ್ಟಣದ ಶ್ರೀ ಯಲ್ಲಮ್ಮದೇವಿ ಹಿರಿಯ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಆವರಣದಲ್ಲಿ ಶನಿವಾರ ಆಯೋಜಿಸಿದ್ದ ಚಿಗುರು ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಅವರು ಮಾತನಾಡಿದರು.

ನಾಡಿನ ಸಾಂಸ್ಕೃತಿಕ ಪಾರಂಪರಿಕ ಕಲೆಗಳನ್ನು ಉಳಿಸಿ, ಬೆಳೆಸುವ ಉದ್ದೇಶದಿಂದ ಬಾಲ್ಯ ಕಲಾವಿದರು ತಮ್ಮೊಳಗಿನ ಕಲಾಶಕ್ತಿಯನ್ನು ಬಿಂಬಿಸಲು ವೇದಿಕೆ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಕಾರ್ಯಕ್ರಮದ ಉದ್ಘಾಟನೆಯನ್ನು ಸಿರುಗುಪ್ಪ ನಗರಸಭೆ ಅಧ್ಯಕ್ಷರಾದ ಬಿ.ರೇಣುಕಮ್ಮ ವೆಂಕಟೇಶ್ ಅವರು ನೆರವೇರಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಸ್ವಾಗತಿಸಿದರು. ಶ್ರೀ ಯಲ್ಲಮ್ಮದೇವಿ ಹಿರಿಯ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯ ಎಸ್ಡಿಎಂಸಿ ಅಧ್ಯಕ್ಷ ವೈ.ಡಿ.ವೆಂಕಟೇಶ್, ನೃತ್ಯ ಕಲಾವಿದ ಅಭಿಷೇಕ್ ಸೇರಿದಂತೆ ಶಾಲಾ ಮಕ್ಕಳು ಹಾಗೂ ಇತರರು ಇದ್ದರು. ನಂತರ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಬಳ್ಳಾರಿಯ ಕುಮಾರಿ ವೀರ ಪಂಚಾಕ್ಷರಿ ಇವರಿಂದ ಕೊಳಲು ವಾದನ, ಕು. ಗೌರಿ ಸೃಜನ ಇವರಿಂದ ಸುಗಮ ಸಂಗೀತ, ಸೂರ್ಯ ಕಲಾ ಟ್ರಸ್ಟ್ ಇವರಿಂದ ಸಮೂಹ ನೃತ್ಯ, ಕು.ಸನ್ನಿಧಿ ಜಿ.ಎಮ್ ಇವರಿಂದ ಜಾನಪದ ಗೀತೆಗಳು, ಸಿರುಗುಪ್ಪದ ಕುಮಾರಿ ಬಿ.ನವ್ಯ ಇವರಿಂದ ಏಕಪಾತ್ರಾಭಿನಯ (ತಾಯಿಯ ಮಮತೆ), ಕುಮಾರಿ ಜೆ.ಎಸ್.ಸಾಹಿತ್ಯ ಸಂಗಡಿಗರಿಂದ ಇವರಿಂದ ನಾಟಕ (ಮೊಬೈಲ್ ಲೋಕ) ಪ್ರದರ್ಶನವು ಮನರಂಜಿಸಿತು.

### ತರಬೇತಿ ಕಾರ್ಯಾಗಾರದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ನಿರ್ದೇಶನ

## ನೀರಿನ ಮೂಲಗಳ ಸುರಕ್ಷತೆ ಕಾಪಾಡುವ ಆದ್ಯತೆಯಾಗಲಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.19–ಜಿಲ್ಲೆಯ ನಗರ ಪ್ರದೇಶಗಳಲ್ಲಿನ ನೀರಿನ ಮೂಲಗಳ ಸುರಕ್ಷತೆ ಕಾಪಾಡುವ ಆದ್ಯತೆಯು ನೀರು ಸರಬರಾಜು ಮಾಡುವ ಜವಾಬ್ದಾರಿ ಸಿಬ್ಬಂದಿಯವರದ್ದಾಗಬೇಕು ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಬಳ್ಳಾರಿ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನೀರು ಸರಬರಾಜು ಮಾಡುವ ಮಹಾನಗರ ಪಾಲಿಕೆಯ ಸಿಬ್ಬಂದಿಯವರಿಗೆ ಪಾಲಿಕೆಯ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಗಾರದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕುಡಿಯುವ ನೀರಿನ ಪೈಪ್ ಲೈನ್ ಚರಂಡಿ ಪಕ್ಕದಲ್ಲಿ ಹಾದು–ಹೋದಲ್ಲಿ ನಿರಂತರ ನಿಗಾ ವಹಿಸಬೇಕು. ಪೈಪ್ ಲೈನ್ ದುರಸ್ಥಿ ಕಂಡುಬಂದಲ್ಲಿ ಸಾರ್ವಜನಿಕರಿಗೆ ಈ ಕುರಿತು ಜಾಗೃತಿ ನೀಡಬೇಕು. ಒಂದು ಸಾವಿರ ಲೀಟರ್‌ಗೆ ನಾಲ್ಕು ಗ್ರಾಂ (ಶೇ.33 ರಷ್ಟು) ಬ್ಲೀಚಿಂಗ್ ಪೌಡರ್ ಪ್ರಮಾಣ ನಿಗಧಿಪಡಿಸಿ ಕ್ಲೋರಿನೇಷನ್ ಮಾಡುವ ವಿಧಾನ ತಪ್ಪದೇ ಅನುಸರಿಸಬೇಕು ಎಂದು ನೀರು ಸರಬರಾಜು ಮಾಡುವ ಮಹಾನಗರ ಪಾಲಿಕೆಯ ಸಿಬ್ಬಂದಿಯವರಿಗೆ ತಿಳಿಸಿದರು.

ವಾಂತಿ–ಭೇದಿ ಕಂಡು ಬಂದಲ್ಲಿ ಆರೋಗ್ಯ ಇಲಾಖೆಯಿಂದ ನೀಡುವ ಓಆರ್‌ಎಸ್ ಪೊಟ್ಟಣವನ್ನು ಒಂದು ಲೀಟರ್ ನೀರಿಗೆ ಬೆರೆಸಿ 24 ಗಂಟೆಯೊಳಗೆ ಸೇವಿಸಲು ಸೂಚಿಸಬೇಕು. ಬಡಾವಣೆ ಹಾಗೂ ಕುಟುಂಬದಲ್ಲಿ ಯಾರಿಗಾದರು ವಾಂತಿ ಭೇದಿ ಕಂಡುಬಂದಲ್ಲಿ ಕುದಿಸಿ ಆರಿಸಿ ಸೋಸಿದ ನೀರನ್ನು ಸೇವಿಸಲು ತಿಳಿಸಬೇಕು ಎಂದು ಹೇಳಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕಾಲರಾ ನಿಯಂತ್ರಣ ತಂಡದ ಸದಸ್ಯರು ನಿರಂತರವಾಗಿ ಎಲ್ಲಾ ವಾರ್ಡ್ಗಳಿಗೆ ಭೇಟಿ ನೀಡುತ್ತಿದ್ದು, ಯಾವುದೇ ಸಂದರ್ಭದಲ್ಲಿ ಕುಡಿಯುವ ನೀರು ಸರಬರಾಜಿನ ಪೈಪ್ ಸೋರಿಕೆ ಕಂಡುಬಂದಲ್ಲಿ ಮಹಾನಗರ ಪಾಲಿಕೆ ಅಧಿಕಾರಿಗಳ ಗಮನಕ್ಕೆ ತರಬೇಕು. ದುರಸ್ಥಿ ಮಾಡುವುದರ ಜೊತೆಗೆ ನಗರದಲ್ಲಿ ಕಂಡುಬರುವ ಸಂಭವನೀಯ ವಾಂತಿ ಭೇದಿ ಪ್ರಕರಣಗಳ ನಿಯಂತ್ರಣ–ಕ್ಕೆ ಸಹಕರಿಸಬೇಕು ಎಂದು ವಿನಂತಿಸಿದರು.

ಬಳ್ಳಾರಿ ನಗರದಲ್ಲಿ ನೀರು ಸರಬರಾಜು ಮಾಡುವ ಮಹಾನಗರ ಪಾಲಿಕೆಯ ಎಲ್ಲಾ ಸಿಬ್ಬಂದಿ ವರ್ಗದವರು ಮತ್ತು ಸಾರ್ವಜನಿಕರಿಗೆ ಗುಣಮಟ್ಟದ ನೀರನ್ನು ಕೊಡುವ ಸಂದರ್ಭದಲ್ಲಿ ನಿರಂತರ ನೀರಿನ ಪರೀಕ್ಷೆಗಳನ್ನು ಕೈಗೊಳ್ಳಬೇಕು. ಆರೋಗ್ಯ ಇಲಾಖೆಯಿಂದ ನೀಡುವಂತಹ ತಾಂತ್ರಿಕ ಸಲಹೆಗಳನ್ನು ಪಾಲಿಸುವುದರ ಜೊತೆಗೆ ಮುಖ್ಯವಾಗಿ ನೀರು ಶುದ್ಧೀಕರಣ ಸಂದರ್ಭದಲ್ಲಿ ತಾಂತ್ರಿಕ ಕ್ರಮಗಳನ್ನು ಅನುಸರಿಸುವಂತೆ ಮಹಾನಗರ ಪಾಲಿಕೆಯ ಆಯುಕ್ತರು ತಮ್ಮ ಸಿಬ್ಬಂದಿಗಳಿಗೆ ಸೂಚಿಸಿದರು.

ನೀರು ಸರಬರಾಜು ಮಾಡುವ ಸಂದರ್ಭದಲ್ಲಿ ಎಲ್ಲಾ ಬಡಾವಣೆಗಳಲ್ಲಿನ ನೀರಿನ ನಳಗಳು ಇರುವಂತಹ ಸ್ಥಳಗಳಲ್ಲಿ ನೀರು ನಿಲ್ಲದಂತೆ ಜನತೆಗೆ ಜಾಗೃತಿ ನೀಡಬೇಕು. ಆರಂಭಿಕ ನೀರನ್ನು ನೀರು ಬಿಟ್ಟಂತಹ ಸಂದರ್ಭದಲ್ಲಿ ನೀರನ್ನು ಸಂಗ್ರಹಿಸದೇ ಕನಿಷ್ಟ 2–3 ನಿಮಿಷಗಳ ನಂತರ ಆ ನೀರನ್ನು ಕುಡಿಯಲು ಮತ್ತು ಬಳಸಲು ಸಂಗ್ರಹಿಸಬೇಕು ಎಂದು ಸಾರ್ವಜನಿಕರಿಗೆ ಅರಿವು ಮೂಡಿಸಬೇಕು. ಯಾವುದೇ ಪೈಪ್ ಲೈನ್‌ಗಳು ದುರಸ್ಥಿ ಇದ್ದಲ್ಲಿ, ಮಹಾನಗರ ಪಾಲಿಕೆ ಕಚೇರಿಗೆ ಗಮನಕ್ಕೆ ತರಬೇಕು. ನಗರದಲ್ಲಿ ಶುದ್ಧ ನೀರು ಸರಬರಾಜಿಗೆ ಸಾರ್ವಜನಿಕರು ಸಹ ಸಹಕಾರ ನೀಡಬೇಕು ಎಂದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಕಾರ್ಯಪಾಲಕ ಅಭಿಯಂತರರು, ಸಹಾಯಕ ಪಾಲಕ ಅಭಿಯಂತರರು, ನಗರ ವಾರ್ಡ್ಗಳ ಕಿರಿಯ ಅಭಿಯಂತರರು, ಆರೋಗ್ಯ ಇಲಾಖೆಯ ಜಿಲ್ಲಾ ಸರ್ವೇಕ್ಷಣಾ ಕಚೇರಿ ಮತ್ತು ಜಿಲ್ಲಾ ಕಾಲರ ನಿಯಂತ್ರಣ ತಂಡದ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಮಹಾನಗರ ಪಾಲಿಕೆ ನೀರು ಸರಬರಾಜು ಕಾರ್ಮಿಕರು, ಒಳಚರಂಡಿ ಕಾರ್ಮಿಕರು ಹಾಜರಿದ್ದರು.

## ರಕ್ತದಾನ ಮಾಡುವ ಮೂಲಕ ಮತ್ತೊಬ್ಬರ ಜೀವ ಉಳಿಸಬಹುದು: ಡಿಹೆಚ್‌ಒ ಡಾ.ಯಲ್ಲಾ ರಮೇಶ್ ಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.19–ಆರೋಗ್ಯವಂತ ಪ್ರತಿಯೊಬ್ಬರೂ ರಕ್ತದಾನ ಮಾಡುವ ಮೂಲಕ ಮತ್ತೊಬ್ಬರ ಜೀವ ಉಳಿಸಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರಕ್ತ ಸುರಕ್ಷತಾ ಟಾಸ್ಕ್ ಫೋರ್ಸ್ ಸಮಿತಿ ಹಾಗೂ ಏಡ್ಸ್ ನಿಯಂತ್ರಣ ಘಟಕ ಸಹಕಾರದೊಂದಿಗೆ ಸ್ವಾಮಿ ವಿವೇಕಾನಂದ ಬ್ಲಡ್ ಬ್ಯಾಂಕ್ ಮೂಲಕ ನಗರದ ಕೌಲ್ ಬಜಾರ್ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಶನಿವಾರ ಏರ್ಪಡಿಸಿದ್ದ ಸ್ವ–ಯಂ ಪ್ರೇರಿತ ಉಚಿತ ರಕ್ತದಾನ ಶಿಬಿರದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

18ವರ್ಷ ಮೇಲ್ಪಟ್ಟ ಆರೋಗ್ಯವಂತ ಪುರುಷ ಮತ್ತು ಮಹಿಳೆಯರು ರಕ್ತದಾನ ಮಾಡುವುದರಿಂದ ರಕ್ತಹೀನತೆಯಿಂದ ಬಳಲುವ ಗರ್ಭಿಣಿ ಸ್ತ್ರೀಯರಿಗೆ, ಶಸ್ತ್ರಚಿಕಿತ್ಸಾ ಹೆರಿಗೆ ವೇಳೆ ಮತ್ತು ಅಪಘಾತಗಳು, ತುರ್ತು ಶಸ್ತ್ರಚಿಕಿತ್ಸೆಗಳ ಸಂದರ್ಭಕ್ಕಾಗಿ ಹಾಗೂ ಕ್ಯಾನ್ಸರ್ ರೋಗಿಗಳಿಗೆ ಥ್ಯಾಲಿಸೀಮಿಯಾ, ಹಿಮೋಫಿಲಿಯಾ ಮುಂತಾದ ರೋಗಿಗಳ ಜೀವವನ್ನು ಉಳಿಸುವ ಪುಣ್ಯದ ಕೆಲಸಕ್ಕೆ ಕೈ ಜೋಡಿಸಲು ಮುಂದೆ ಬರಬೇಕು ಎಂದರು.

ಜಗತ್ತಿನಲ್ಲಿ ಅತಿದೊಡ್ಡ ಸಂಶೋಧನೆ ಎಂದರೆ ಒಬ್ಬ ಮನುಷ್ಯನ ರಕ್ತವನ್ನು ಇನ್ನೊಬ್ಬರ ಜೀವ ಉಳಿಸಲು ಉಪಯೋಗಿಸುವುದಾಗಿದೆ. ಇದರಿಂದ ಹಲವಾರು ಜನರ ಆರೋಗ್ಯವನ್ನು ಸುಧಾರಿಸುವ ಜೊತೆಗೆ ಸಾವಿನಿಂದ ಪಾರು ಮಾಡಲು ಸಾಧ್ಯವಿದೆ, ಹಾಗಾಗಿ ಪ್ರತಿಯೊಬ್ಬರೂ ರಕ್ತದಾನ ಮಾಡಬೇಕು ಎಂದು ವಿನಂತಿಸಿದರು.

ರಕ್ತವನ್ನು ಕೃತಕವಾಗಿ ಸೃಷ್ಟಿಸಲು ಸಾಧ್ಯವಿಲ್ಲ, ರಕ್ತವೇ ದೇಹದ ಜೀವನಾಡಿಯಾಗಿದ್ದು, ರಕ್ತ–ಕ್ಕೆ ಪರ್ಯಾಯವಾದ ವಸ್ತು ಇಲ್ಲದೆ ಇರುವುದರಿಂದ ಇನ್ನೊಬ್ಬ ವ್ಯಕ್ತಿಯ ರಕ್ತದಾನದ ಮೂಲಕ ಮಾತ್ರ ಪಡೆಯಬಹುದಾಗಿದೆ ಎಂದರು.

18 ರಿಂದ 60 ವರ್ಷದ ಒಳಗಿನ ಎಲ್ಲಾ ಆರೋಗ್ಯವಂತ ಪುರುಷ ಮತ್ತ ಮಹಿಳೆಯರು ರಕ್ತದಾನ ಮಾಡಲು ಅವಕಾಶವಿದ್ದು, 45 ಕೆಜಿ ಮೇಲ್ಪಟ್ಟ ಹಾಗೂ 12.5 ಗ್ರಾಂ. ಗಿಂತ ಹೆಚ್ಚು ಹಿಮೋಗ್ಲೊಬಿನ್ ಇರುವ ಮಹಿಳೆಯರು ಪ್ರತಿ ನಾಲ್ಕು ತಿಂಗಳಿಗೊಮ್ಮೆ, ಪುರುಷರು ಪ್ರತಿ ಮೂರು ತಿಂಗಳಿಗೊಮ್ಮೆ ರಕ್ತದಾನ ಮಾಡುವ ಮೂಲಕ ದಾನಿಗಳು ತಮ್ಮ ಆರೋಗ್ಯವನ್ನು ಸಹ ಉಲ್ಲಾಸಮಯವಾಗಿಸಿಟು ಕೊಳ್ಳಬಹುದು ಎಂದರು.

ಇದೇ ಸಂದರ್ಭದಲ್ಲಿ ಶ್ರೀರಾಮ್ ರಾಜ್ ಫೌಂಡೇಶನ್ ವತಿಯಿಂದ ಪ್ರತಿ ರಕ್ತದಾನಿಗೂ ಉಚಿತ ಹೆಲ್ಮೆಟ್ ವಿತರಿಸಲಾಯಿತು. ನಂತರ ಕೌಲ್‌ಬಜಾರ್ ಪ್ರಾಥಮಿಕ ಆರೋಗ್ಯ ಕೇಂದ್ರ ವತಿಯಿಂದ

## ತುಳಜಾಭವಾನಿ ಅರ್ಬನ್ ಬ್ಯಾಂಕನಿಂದ ಮಕ್ಕಳಿಗೆ ವೆಲಕಮ್ ಕಿಟ್ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ :ತಾಲೂಕಿನ ಖತಗಾಂವ ಗ್ರಾಮದ ಸರ್ಕಾರಿ ಮಾದರಿಯ ಪ್ರಾಥಮಿಕ ಶಾಲೆಯಲ್ಲಿ ತುಳಜಾಭವಾನಿ ಅರ್ಬನ್ ಬ್ಯಾಂಕ ವತಿಯಿಂದ ವ್ಯವಸ್ಥಾಪಕ ರಾಹುಲ ಶಿಂಗನೆ ಮಕ್ಕಳಿಗೆ ವೆಲ್‌ಕಮ್ ಕಿಟ್ ವಿತರಿಸಲಾಯಿತು.



> ಶಾಲಾ ಮಕ್ಕಳಿಗೆ ಅರ್ಬನ್ ಬ್ಯಾಂಕ ವತಿಯಿಂದ ಮಕ್ಕಳಿಗೆ ವೆಲ್‌ಕಮ್ ಕಿಟ್ ವಿತರಣೆ ಮಾಡಿ ಮಕ್ಕಳ ಕಲಿಕೆಯ ಒಂದು ಪ್ರೇರಣೆಯಾಗಿದೆ, ಮಕ್ಕಳು ಇದರ ಸದುಪಯೋಗ ಪಡೆದು ಒಳ್ಳೆಯ ರೀತಿ ಲಾಭ ಪಡೆದು ಕೊಳ್ಳಬೇಕು.
>
> – ಮಹದೇವ ಬಿರಾದಾರ
> ಖತಗಾಂವ ನಿವಾಸಿ.

ಗ್ರಾ.ಪಂ.ಸದಸ್ಯರಾದ ರಾಜಕುಮಾರ ಧರಣೆ, ಇಸ್ಮಾಯಿಲ್ ಜಾಫರ, ಮುಖಂಡರಾದ ಮಹೇಶ ಪಾಟೀಲ್, ಸಂಗಮೇಶ ಧರಣೆ, ಬಾಬುರಾವ ಧರಣೆ, ಶಿವರಾಜ ಮೇತ್ರೆ, ಕುಮಾರ ಸ್ವಾಮಿ, ಶಿಕ್ಷಕರಾದ ಮಲ್ಲಮ್ಮಾ ಕಸ್ತೂರೆ, ಸಿದ್ರಾಮಪ್ಪಾ, ಮಹಾದೇವ ಬಿರಾದಾರ, ರಚಿತಾ ಗುಡಮೆ, ಪೂಜಾ ಸ್ವಾಮಿ, ಪ್ರತೀಕ್ಷಾ ವಿಜಯಾನಂದ, ಬ್ಯಾಂಕಿನ ಸಿಬ್ಬಂಧಿ ಜ್ಞಾನೇಶ್ವರ ಜಾಧವ ಹಾಗೂ ಮಕ್ಕಳು ಇದ್ದರು.

## ನ್ಯಾಷನಲ್ ಇ–ಸ್ಕಾಲರ್‌ಶಿಪ್‌ಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.19–ಕೇಂದ್ರಸರ್ಕಾರದ ನ್ಯಾಷನಲ್ ಇ–ಸ್ಕಾಲರ್‌ಶಿಫ್ ಯೋಜನೆಯಡಿ 2025–26ನೇ ಸಾಲಿಗೆ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರ ಮತ್ತು ಉನ್ನತ ದರ್ಜೆ ಶಿಕ್ಷಣದ ವಿಕಲಚೇತನ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಮೆಟ್ರಿಕ್ ಪೂರ್ವ ವಿಕಲಚೇತನ ವಿದ್ಯಾರ್ಥಿಗಳಿಗೆ ಆಗಸ್ಟ್ 31, ಮೆಟ್ರಿಕ್ ನಂತರ ಮತ್ತು ಉನ್ನತ ದರ್ಜೆಯ ಶಿಕ್ಷಣದ ವಿಕಲಚೇತನ ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸಲು ಅಕ್ಟೋಬರ್ 31 ಕೊನೆಯ ದಿನವಾಗಿದೆ.

ಅರ್ಹ ವಿಕಲಚೇತನ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ, ಸಲ್ಲಿಸಿದ ಅರ್ಜಿಯ ಒಂದು ಪ್ರತಿಯನ್ನು ತಮ್ಮ ವ್ಯಾಪ್ತಿಗೊಳಪಡುವ ಗ್ರಾಪಂ ವಿಆರ್‌ಡಬ್ಲ್ಯೂ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿ ಯುಆರ್‌ಡಬ್ಲ್ಯೂ ಮತ್ತು ತಾಪಂ ಎಂಆರ್‌ಡಬ್ಲ್ಯೂ ಇವರಿಗೆ ಸಲ್ಲಿಸಬೇಕು.

ಮಾಹಿತಿಗಾಗಿ ಆಯಾ ತಾಲ್ಲೂಕುಗಳ ತಾಲ್ಲೂಕು ಪಂಚಾಯತ್ ಕಚೇರಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿದ್ಧೋದ್ದೇಶ ಪುನರ್ವಸತಿ ಕಾರ್ಯಕರ್ತರ ಮೊ: ಬಳ್ಳಾರಿ–8880875620, ಸಿರುಗುಪ್ಪ–9743509698, ಸಂಡೂರು–9632052270, ಕುರುಗೋಡು–9538000887 ಇವರನ್ನು ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಕಚೇರಿ ಅಥವಾ ದೂ.08392–267886 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮಕ್ಕೆ ನೋಂದಣಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.19–ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್) ವತಿಯಿಂದ ಸ್ವಂತ ಉದ್ಯೋಗ ಆರಂಭಿಸಲು ಆಸಕ್ತಿ ಹೊಂದಿದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ಅಭ್ಯರ್ಥಿಗಳಿಗೆ ಒಂದು ದಿನದ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮಕ್ಕೆ ಆಸಕ್ತರಿಂದ ನೋಂದಣಿಗೆ ಆಹ್ವಾನಿಸಲಾಗಿದೆ.

ತರಬೇತಿಯಲ್ಲಿ ಸ್ವಂತ ಉದ್ಯಮ ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸರ್ಕಾರದ ಸ್ವಂತ ಉದ್ಯೋಗ ಯೋಜನೆಗಳು, ಬ್ಯಾಂಕಿನ ವ್ಯವಹಾರ, ಮಾರುಕಟ್ಟೆ ಸಮೀಕ್ಷೆ, ಯೋಜನಾ ವರದಿ ತಯಾರಿಕೆ ಹಾಗೂ ಉದ್ಯಮ ನಿರ್ವಹಣೆ, ಇನ್ನಿತರ ವಿಷಯಗಳ ಕುರಿತು ತರಬೇತಿ ನೀಡಲಾಗುವುದು.

ನೋಂದಾಯಿಸಿಕೊಳ್ಳಲು ಸಿಡಾಕ್ ಜಂಟಿ ನಿರ್ದೇಶಕರ ಕಚೇರಿ ಅಥವಾ ದೂರವಾಣಿ ಮೂಲಕ ನೋಂದಾಯಿಸಿಕೊಳ್ಳಬಹುದು. ಯುವಕ–ಯುವತಿ ಮತ್ತು ಮಹಿಳೆಯರು ಸಹ ನೋಂದಾಯಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಹೊಸಪೇಟೆ ರಸ್ತೆಯ ಜಿಲ್ಲಾ ಕೈಗಾರಿಕಾ ಕೇಂದ್ರ ಕಚೇರಿ ಕಟ್ಟಡದ ಸಿಡಾಕ್ ಜಂಟಿ ನಿರ್ದೇಶಕರ ಕಚೇರಿ ಅಥವಾ ಮೊ.9449226221, 7483538942 ಗೆ ಸಂಪರ್ಕಿಸಬಹುದು ಎಂದು ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿನಿಲಯಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

ಬಳ್ಳಾರಿ,ಜು.19–ಪ್ರಸ್ತಕ ಶೈಕ್ಷಣಿಕ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ, ಬಾಲಕಿ ವಿದ್ಯಾರ್ಥಿನಿಲಯಗಳ (ಪಿ.ಯು.ಸಿ ಹಾಗೂ ಸಮಾನಾಂತರ ಕೋರ್ಸು ಪದವಿ ಮಟ್ಟದ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಯವರು ತಿಳಿಸಿದ್ದಾರೆ.

ಅರ್ಜಿಗಳನ್ನು ರಾಜ್ಯ ವಿದ್ಯಾರ್ಥಿನಿಲಯ ತಂತ್ರಾಂಶ https://shp.karnataka.gov.in ಮೂಲಕ ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸಲು ಆಗಸ್ಟ್ 02 ಕೊನೆಯ ದಿನವಾಗಿದೆ.

ಮಾಹಿತಿಗಾಗಿ ತಾಲ್ಲೂಕು ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿ ಮೊ.9611342523 ಹಾಗೂ ತಾಲೂಕು ಮಾಹಿತಿ ಕೇಂದ್ರ: ಬಳ್ಳಾರಿ–8310321101, ಸಂಡೂರು–9036925966/ 8660575061, ಸಿರುಗುಪ್ಪ–9148889975 ಗೆ ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹತ್ತಿರದ ಮೌಲಾನ ಅಜಾದ ಭವನದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಚೇರಿ ಅಥವಾ ದೂ.08392–200125/224 ಮತ್ತು ಜಿಲ್ಲೆಯ ಎಲ್ಲಾ ಅಲ್ಪಸಂಖ್ಯಾತರ ತಾಲೂಕು ಮಾಹಿತಿ ಕೇಂದ್ರಗಳಲ್ಲಿ ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ

## ವೃತ್ತಿಪರ ತರಬೇತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.19–ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ 2025–26ನೇ ಸಾಲಿಗೆ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ಉದ್ಯೋಗವಕಾಶವನ್ನು ಒದಗಿಸುವ ನಿಟ್ಟಿನಲ್ಲಿ ಹೋಟಲ್ ಮ್ಯಾನೇಜ್‌ಮೆಂಟ್ ವೃತ್ತಿಪರ ತರಬೇತಿ ನೀಡಲು ಉದ್ದೇಶಿಸಲಾಗಿದ್ದು, ಅರ್ಹರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ತರಬೇತಿಯನ್ನು ಬೆಂಗಳೂರಿನ ಇನ್‌ಸ್ಟಿಟ್ಯೂಟ್ ಆಫ್ ಹೋಟಲ್ ಮ್ಯಾನೇಜ್‌ಮೆಂಟ್‌ನಲ್ಲಿ ನೀಡಲಾಗುತ್ತಿದ್ದು, ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ ಲಿಂಕ್ ಃಣಣಠ://ಜತಘುಟಚಿಝಞಜಡಿ–ತುಭಿಭ.ಇಚಿಡಿಟಿಚಿಣಚಿಇಚಿ.ರಾ೦ತ.ಿಟಿ ಮೂಲಕ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಆಗಸ್ಟ್ 02 ಕೊನೆಯ ದಿನವಾಗಿದೆ.

ಮಾಹಿತಿಗಾಗಿ ತಾಲ್ಲೂಕು ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿ ಮೊ.9611342523 ಹಾಗೂ ತಾಲೂಕು ಮಾಹಿತಿ ಕೇಂದ್ರ: ಬಳ್ಳಾರಿ–8310321101, ಸಂಡೂರು–9036925966/ 8660575061, ಸಿರುಗುಪ್ಪ–9148889975 ಗೆ ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹತ್ತಿರದ ಮೌಲಾನ ಅಜಾದ ಭವನದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಚೇರಿ ಅಥವಾ ದೂ.08392–200125/224 ಮತ್ತು ಜಿಲ್ಲೆಯ ಎಲ್ಲಾ ಅಲ್ಪಸಂಖ್ಯಾತರ ತಾಲೂಕು ಮಾಹಿತಿ ಕೇಂದ್ರಗಳಲ್ಲಿ ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉತ್ತಮ ಸೇವೆ ಸಲ್ಲಿಸಿ ಸಂಸ್ಥೆಗೆ ಗೌರವ ತನ್ನಿ – ಸಾಸನೂರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.20–ಪದವಿ ಪಡೆದು ಹೊರ ಹೋಗುತ್ತಿರುವ ವಿದ್ಯಾರ್ಥಿಗಳು ತಮ್ಮ ಜ್ಞಾನದ ಕೌಶಲ್ಯದಿಂದ ಭವಿಷ್ಯದಲ್ಲಿ ಬಿವಿವಿ ಸಂಘದ ರಾಯಭಾರಿಗಳಾಗಿ ಸಮಾಜದಲ್ಲಿ ಉತ್ತಮ ಕಾರ್ಯ ನಿರ್ವಹಿಸಿ ಸಂಸ್ಥೆಗೆ ಗೌರವ ತಂದು ಕೊಡಬೇಕು ಎಂದು ಬಿ.ವಿ.ವಿ.ಎಸ್ ಹೋಮಿಯೋಪಥಿಕ ವೈದ್ಯಕೀಯ ಮಹಾವಿದ್ಯಾಲಯದ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ ಹೇಳಿದರು. ನಗರದ ಬಿವಿವಿಎಸ್ ಹೋಮಿಯೋಪಥಿಕ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಕಿರಿಯ ವಿದ್ಯಾರ್ಥಿಗಳು ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಬೀಳ್ಕೊಡುವ ಸಮಾರಂಭ ಯಾದೇ–2025 ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರಾಚಾರ್ಯ ಡಾ.ಅರುಣ ಹೂಲಿ ಮಾತನಾಡಿ, ಮಾನವೀಯತೆ, ಬುದ್ಧಿವಂತಿಕೆ, ಸಮಯ ಪ್ರಜ್ಞೆ, ಹಾಗೂ ಸೇವಾ ಮನೋಭಾವನೆಯನ್ನು ಮೈಗೂಡಿಸಿಕೊಂಡು ಪೋಷಕರು, ಗುರು ಹಿರಿಯರೊಂದಿಗೆ ಗೌರವದಿಂದ ನಡೆದುಕೊಂಡಾಗ ನಿಮ್ಮ ಬಾಳು ಉಜ್ವಲವಾಗುವುದು ಎಂದರು.

ಸಮಾರಂಭದಲ್ಲಿ ತರಗತಿ ಮಾರ್ಗದರ್ಶಕ ಡಾ.ಸುಧೀರ ಬೆಟಗೇರಿ, ಪ್ರಾಧ್ಯಾಪಕರಾದ ಡಾ.ರವಿ ಕೋಟೆಣ್ಣವರ, ಡಾ.ಅಮರೇಶ ಬಳಗಾನೂರ, ಸಾಂಸ್ಕೃತಿಕ ಸಂಯೋಜಕ ಡಾ.ರುದ್ರೇಶ ಕೊಪ್ಪಳ, ಡಾ. ತೃಪ್ತಿ, ಶಿಂದೆ, ತರಗತಿಗಳ ಮಾರ್ಗದರ್ಶಕರಾದ ಡಾ.ಸುನಿತಾ ಪಾಟೀಲ,ಡಾ.ಫಾತಿಮಾ ಬಾಲಸಿಂಗ್, ಡಾ.ದೀಪಕ ನಾಯಿಕ, ಡಾ.ಶಶಿಕುಮಾರ ಇಜೇರಿ ಉಪಸ್ಥಿತರಿದ್ದರು. ವೈಷ್ಣವಿ ಹಾಗೂ ವೈಶಾಕಿಯವರ ಭರತ ನಾಟ್ಯದೊಂದಿಗೆ ಪ್ರಾರಂಭವಾದ ಸಾಂಸ್ಕೃತಿಕ ಕಾರ್ಯಕ್ರಮಗಳು ಎಲ್ಲರ ಗಮನ ಸೆಳೆದವು.

ವಿದ್ಯಾರ್ಥಿನಿ ಪುಷ್ಪಾ ಹಾಗೂ ಶ್ರಾವಣಿ ಸ್ವಾಗತಿಸಿದರು, ಶ್ರೇಯಾ ಮಲಕರ ವಂದಿಸಿದರು.

# ಸೋಮವಾರದಂದು ಕರ್ನಾಟಕ ರೈತ ಪ್ರಾಂತ ಸಂಘದ ವತಿಯಿಂದ ಬೃಹತ್ ಪ್ರತಿಭಟನೆ ಭೀಮರಾಯ ಪೂಜಾರಿ ಕರೆ.

ಮಲ್ಲಮ್ಮ ನುಡಿ ವಾರ್ತೆ


ಶಹಪುರ್ ಸೋಮವಾರದಂದು ಕರ್ನಾಟಕ ರೈತ ಪ್ರಾಂತ್ಯ ಸಂಘದ ವತಿಯಿಂದ ವಿಶ್ವಜ್ಯೋತಿ ಬಸವೇಶ್ವರ ವೃತ್ತದ ಬಳಿ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಕರ್ನಾಟಕ ರೈತ ಸಂಘದ ತಾಲೂಕ ಅಧ್ಯಕ್ಷರಾದ ಭೀಮರಾಯ ಪೂಜಾರಿ ಪತ್ರಿಕೆಗೆ ತಿಳಿಸಿದ್ದಾರೆ.



ಇಂದಿನ ಕೃಷಿ ಮಾರಾಟಗಾರರು ಹಾಗೂ ರೈತರಿಗೆ ಕಳಪೆ ಬೀಜ ವಿತರಿಸುತ್ತಿರುವ ಕೆಲ ಅಂಗಡಿ ಮಾಲೀಕರ ವಿರುದ್ಧ ಕ್ರಮ ಕೈಗೊಂಡು.

ರೈತರಿಗೆ ಅಲ್ಲೇ ಮಾಡುತ್ತಿರುವಂತಹ ಇಂಥವರ ವಿರುದ್ಧ ಕೂಡಲೇ ಕಾನೂನು ಕ್ರಮ ಕೈಗೊಂಡು. ಇಲ್ಲಿನ ಕೆಲ ಅಂಗಡಿ ಮಾಲೀಕರು ಡಾಎಪಿ ಹಾಗೂ ಯೂರೀಯ ರಸಗೊಬ್ಬರಗಳು ಇದ್ದರೂ ಕೂಡ ವಿನಾಕಾರಣದಿಂದ ಈ ರಸ ಗೊಬ್ಬರಗಳು ಇಲ್ಲವೆಂದು ಹೇಳಿ ದುಪ್ಪಟ್ಟು ಬೆಲೆಗೆ ಮಾರುವ ಚಾಳಿ ಎಂದಿನಂತೆ ಮತ್ತೆ ತಾಲೂಕಿನ ನಡೆಯುತ್ತಿದ್ದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ ಕೂಡಲೇ ಇಂತಹ ಅಂಗಡಿ ಮಾಲೀಕರ ವಿರುದ್ಧ ಕ್ರಮ ಕೈಗೊಂಡು. ರೈತರಿಗೆ ಹಲವಾರು ಸಮಸ್ಯೆಗಳಿದ್ದು ಕೂಡಲೇ ಕೀಟನಾಶಕ ರಸಗೊಬ್ಬರ ಹೀಗೆ ಹಲವಾರು ರೀತಿಯ ಸಮಸ್ಯೆಗಳನ್ನು ಕಾಣುತ್ತಿದ್ದು ರೈತರಿಗೆ ಕೂಡಲೇ ನ್ಯಾಯ ಒದಗಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಬಿಸಿ ಮುಟ್ಟಿಸುವ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಪತ್ರಿ–ಕೆ ಮಾಧ್ಯಮಕ್ಕೆ ಭೀಮರಾಯ ಪೂಜಾರಿ ತಿಳಿಸಿದ್ದಾರೆ.

# ಅಂಗಸಗೂರು ತಂಜುಮಿನ್ ಮುಸ್ಲಿಂ ಕಮಿಟಿಯ ನೂತನ ಅಧ್ಯಕ್ಷ ಉಪಾಧ್ಯಕ್ಷರ ಹಾಗೂ ಪದಾಧಿಕಾರಿಗಳ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರು. ಜು. 19.– ಶುಕ್ರವಾರ ಪಟ್ಟಣದ ಜಾಮಿಯಾ ಮಸ್ಜಿ ದ ನಲ್ಲಿ ಪ್ರಾರ್ಥನೆ ಸಲ್ಲಿಸಿದ ನಂತರ ತಂಜಮೀನ್ ಮುಸ್ಲಿಂ ಇನ್ ಕಮಿಟಿಗೆ ನೂತನವಾಗಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷರನ್ನಾಗಿ ಹಾಗೂ ಸದಸ್ಯರಾನ್ನಾಗಿ ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ತಂಜು ಮೀನ್ ಮುಸ್ಲಿಂ ಕಮಿಟಿಯ ನೂತನ ಅಧ್ಯಕ್ಷರಾಗಿ ಜನಾಬ್ ಅಬ್ದುಲ್ ಮೋಹಸಿನ ರೈಸ್ ಚಾವೂಸ್, ಉಪಾಧ್ಯಕ್ಷರಾಗಿ ಜನಾಬ್ ಖಾದರ್ ಪಾಷಾ, ಕಾರ್ಯದರ್ಶಿಯಾಗಿ ಅಬ್ದುಲ್ ಸತ್ತಾರಸಾಬ್, ಸಹ ಕಾರ್ಯದರ್ಶಿಯಾಗಿ ಅಬ್ದುಲ್ ನಬಿಸಾಬ್ ಮನಿಯಾರ್, ಖಜಾಂಚಿಯಾಗಿ ಎಸ್. ಎ ಸಲಿಂಸಾಬ್, ಹಾಗೂ ಸದಸ್ಯರನ್ನಾಗಿ ಹಲವರನ್ನು ಮುಸ್ಲಿಂ ಸಮಾಜದ ಸರ್ವ ಮುಖಂಡರ ಹಾಗೂ ಹಿರಿಯರ ಸಮ್ಮುಖದಲ್ಲಿ ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮುಸ್ಲಿಂ ಕಮಿಟಿ ಮುಖಂಡರಾದ ಹಾರೂನ ಸಾಬ್, ಅಲ್ಲಾವುದ್ದೀನ್ ಪಟೇಲ್, ಜಿಲಾನಿ ಪಾಷಾ, ಮಹಮ್ಮದ್ ರಫಿ, ಫಯಾಜ್ ಅಹ್ಮದ್, ಖಾಜಾಹುಸೇನ್ ಪುಲ್ ವಾಲೆ, ಹೈಮದ ಚಾವುಸ್, ಅಬ್ದುಲ್ ನಬಿ ಸಾಬ್ ಮನಿಯರ್, ಅಲ್ಲಾಭಕ್ಷ, ನವಾಬ ಆಹ್ಮದ, ಫ್ರೂಟ್ ಮಹ್ಮದ್ ಇಬ್ರಹಿಂ, ಆಜೀಜ್ ಪಾಷಾ, ಫೈಸಲ್ ಚಾವುಸ್, ಸೋಹಿಲ್, ಸೇರಿದಂತೆ ಹಲವಾರು ಮುಖಂಡರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಮುಸ್ಲಿಂ ಸಮಾಜದ ಎಲ್ಲ ಮುಖಂಡರು ಯುವಕರು ಸೇರಿ ನೂತನ ಅಧ್ಯಕ್ಷ ಉಪಾಧ್ಯಕ್ಷರಿಗೆ ಸನ್ಮಾನಿಸಿ ಮುಸ್ಲಿಂ ಸಮಾಜದ ಎಲ್ಲರನ್ನು ನೂತನ ಅಧ್ಯಕ್ಷ ಉಪಾಧ್ಯಕ್ಷರು ವಿಶ್ವಾಸಕ್ಕೆ ತೆಗೆದುಕೊಂಡು ಸಮಾಜದ ಬೆಳವಣಿಗೆಗೆ ಸಹಕರಿಸಬೇಕೆಂದು ಮನವಿ ಮಾಡಿಕೊಂಡರು.

# ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮದ ಅಧ್ಯಕ್ಷರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜು.19–ಕರ್ನಾಟಕರೇಷ್ಮೆ ಉದ್ಯಮಗಳ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ಕಲಬುರಗಿ ಉತ್ತರ ವಿಧಾನಸಭಾ ಕ್ಷೇತ್ರದ ಶಾಸಕರಾದ ಕನೀಜ್ ಫಾತೀಮಾ ಅವರು ಬೆಂಗಳೂರಿನಿಂದ ವಿಮಾನದ ಮೂಲಕ ಜುಲೈ 20 ರಂದು ಭಾನುವಾರ ಬೆಳಿಗ್ಗೆ 11.45 ಗಂಟೆಗೆ ಕಲಬುರಗಿಗೆ ಆಗಮಿಸುವರು.

ನಂತರ ಅಂದು ಮಧ್ಯಾಹ್ನ 2 ಗಂಟೆಗೆ ಕಲಬುರಗಿಯ ಓಂ ನಗರದ ಜಿಲ್ಲಾ ಫುಟ್ ಬಾಲ್ ಕ್ರೀಡಾಂಗಣದಲ್ಲಿ ಕಲಬುರಗಿ ಫುಟಬಾಲ್ ಲೀಗ್‌ನ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸುವರು. ಅಂದು ಸಂಜೆ 4 ಗಂಟೆಗೆ ಕಲಬುರಗಿಯಿಂದ ರಸ್ತೆ ಮೂಲಕ ಹೈದ್ರಾಬಾದಿಗೆ ಪ್ರಯಾಣಿಸಿ ವಾಸ್ತವ್ಯ ಮಾಡುವರು.

ಜುಲೈ 21 ರಂದು ಸೋಮವಾರ ಹೈದ್ರಾಬಾದ್‌ದಲ್ಲಿ ವಾಸ್ತವ್ಯ ಮಾಡುವರು. ಜುಲೈ. 22 ರಂದು ಮಂಗಳವಾರ ಬೆಳಿಗ್ಗೆ 10 ಗಂಟೆಗೆ ಹೈದ್ರಾಬಾದ್‌ದಿಂದ ಕಲಬುರಗಿಗೆ ಆಗಮಿಸಿ, ಸ್ಥಳೀಯ ಕಾರ್ಯಕ್ರಮಗಳಲ್ಲಿ ವಾಸ್ತವ್ಯ ಮಾಡುವರು.

ಜುಲೈ 23 ರಂದು ಬುಧವಾರ ಸಾರ್ವಜನಿಕ ಕುಂದು ಕೊರತೆ ವಿಚಾರಣೆ ಮತ್ತು ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು.

# ಜು.21ಉಚಿತ ತಪಾಸಣೆ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.19–ನಗರದ ಬಿವಿವಿಸಂಘ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಆಸ್ಪತ್ರೆಯಲ್ಲಿ ಇದೇ ದಿನಾಂಕ 21 ರಂದು ಸೋಮವಾರ ಉಚಿತ ತಪಾಸಣೆ ಹಾಗೂ ಚಿಕಿತ್ಸಾ ಶಿಬಿರ ಹಮ್ಮಿಕೊಳ್ಳಲಾಗಿದೆ.

ಬಿವಿವಿಎಸ್ ಆಯುರ್ವೇದ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯ ಕಾಯಚಿಕಿತ್ಸಾ ಸ್ನಾತ–ಕೋತ್ತರ ವಿಭಾಗದಿಂದ ಉಚಿತ ಆರೋಗ್ಯ ತಪಾಸನೆ ಹಾಗೂ ಔಷದ ವಿತರಣೆ ಹಮ್ಮಿಕೊಳ್ಳಲಾಗಿದ್ದು ಶಿಬಿರದಲ್ಲಿ ಕೈ ಮತ್ತು ಕಾಲು ಬಿರುಕು, ಒಣಗಿದ ಚರ್ಮ, ತೀವ್ರವಾದ ನೋವು,ವಿವರ್ಣತೆ ಮತ್ತು ರಕ್ತಸ್ರಾವ ಈ ರೋಗಗಳಿಗೆ ಉಚಿತ ಔಷಧಿ ವಿತರಣೆ, ಉಚಿತ ತಪಾಸಣೆ ಮತ್ತು ಚಿಕಿತ್ಸೆ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ 738805466 ಸಂಪರ್ಕಿಸಬಹುದಾಗಿದೆ.

# ಬೆನಕಟ್ಟಿಯಲ್ಲಿ ಇಂದು ದತ್ತು ಸ್ವೀಕಾರ, ಪ್ರತಿಭಾ ಪುರಸ್ಕಾರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ:19–ತಾಲೂಕಿನ ಬೆನಕಟ್ಟಿ ಗ್ರಾಮದಲ್ಲಿ ಜು.20 ರಂದು ಹೇಮ – ವೇಮನ ಸದ್ಬೋಧನ ಪೀಠದ ವಾರ್ಷಿಕೋತ್ಸವ, ವಿದ್ಯಾರ್ಥಿಗಳ ದತ್ತು ಸ್ವೀಕಾರ, ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಕಾರ್ಯಕ್ರಮ ಜರುಗಲಿದೆ. ಗ್ರಾಮದ ಹೇಮರಡ್ಡಿ ಮಲ್ಲಮ್ಮ ದೇವಸ್ಥಾನದ ಆವರಣದಲ್ಲಿ ರವಿವಾರ ಮುಂಜಾನೆ 10.30 ಗಂಟೆಗೆ ಎರೆಹೊಸಳ್ಳಿಯ ರಡ್ಡಿ ಗುರುಪೀಠದ ಪೂಜ್ಯ ವೇಮನಾನಂದ ಶ್ರೀಗಳ ದಿವ್ಯ ಸಾನಿಧ್ಯದಲ್ಲಿ ನಡೆಯುವ ಸಮಾರಂಭದ ನೇತೃತ್ವವನ್ನು ಆಧ್ಯಾತ್ಮಿಕ ಚಿಂತಕ ಪ್ರದೀಪ ಗುರೂಜಿ ವಹಿಸುವರು. ಹಿರಿಯ ನ್ಯಾಯವಾದಿ ಎಸ್.ಕೆ.ಯಡಹಳ್ಳಿ ಅಧ್ಯಕ್ಷತೆ ವಹಿಸಲಿದ್ದು, ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆ–ಯ 1 ನೇ ಬೆಟಾಲಿಯನ್ ಕಮಾಂಡೆಂಟ್ ಅಮರನಾಥ ರೆಡ್ಡಿ ಕಾರ್ಯಕ್ರಮ ಉದ್ಘಾಟಿಸುವರು. ವಾಣಿಜ್ಯ ತೆರಿಗೆ ಇಲಾಖೆಯ ನಿವೃತ್ತ ಉಪ ಆಯುಕ್ತ ಜಿ.ಬಿ.ಗೌಡಪ್ಪಗೋಳ ಮುಖ್ಯ ಅತಿಥಿಯಾಗಿ, ಧಾರವಾಡ ಕರ್ನಾಟಕ ವಿಶ್ವ ವಿದ್ಯಾಲಯದ ಮಹಾಯೋಗಿ ವೇಮನ ಪೀಠದ ಸಂಚಾಲಕ ಹೇಮರಡ್ಡಿ ನೀಲಗುಂದ ಹಾಗೂ ಸ್ಥಳೀಯ ಹೇಮರಡ್ಡಿ ಮಲ್ಲಮ್ಮ ದೇವಸ್ಥಾನ ಸಮಿತಿ ಅಧ್ಯಕ್ಷ ಪಂಡಿತ ಮಾಚಾ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದು ಸದ್ಬೋಧನ ಪೀಠದ ಪ್ರಕಟಣೆ ತಿಳಿಸಿದೆ.

# ಏರ್‌ಮನ್ ನೇಮಕಾತಿಗೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಜುಲೈ 19–ಭಾರತೀಯ ವಾಯುಪಡೆಯು ಭಾರತದ/ಗೂರ್ಖಾ (ನೇಪಾಳ) ಪುರುಷ ಅಭ್ಯರ್ಥಿಗಳನ್ನು ಭಾರತೀಯ ವಾಯುಪಡೆಗೆ ಏರ್ ಮ್ಯಾನ್ ಆಗಿ ಗ್ರೂಪ್ ವಾಯ್ (ತಾಂತ್ರಿಕವಲ್ಲದ) ವೈದ್ಯಕೀಯ ಸಹಾಯಕ ವೃತ್ತಿಯ ನೇಮಕಾತಿಗಾಗಿ ಆನ್‌ಲೈನ್ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವೈದ್ಯಕೀಯ ಸಹಾಯಕ ವೃತ್ತಿ ನೇಮಕಾತಿಗಾಗಿ ಅಭ್ಯರ್ಥಿಗಳು (10+2 ಹೊಂದಿರುವ ಅಭ್ಯರ್ಥಿಗಳಿಗೆ) ಅವಿವಾಹಿತರಾಗಿರಬೇಕು ಮತ್ತು ಜುಲೈ 2, 2005 ಮತ್ತು ಜುಲೈ 2, 2009ರ ನಡುವೆ ಜನಿಸಿರಬೇಕು. ಹಾಗೂ ಫಾರ್ಮಸಿಯಲ್ಲಿ ಡಿಪ್ಲೋಮಾ, ಬಿ.ಎಸ್ಸಿ ಹೊಂದಿದ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಅವಿವಾಹಿತ ಅಭ್ಯರ್ಥಿಯು ಜುಲೈ 2, 2002 ಮತ್ತು ಜುಲೈ 2, 2007ರ ನಡುವೆ ಹಾಗೂ ವಿವಾಹಿತ ಅಭ್ಯರ್ಥಿಯು ಜುಲೈ 2, 2002 ಮತ್ತು ಜುಲೈ 2, 2005ರ ನಡುವೆ ಜನಿಸಿರಬೇಕು. ಆಸಕ್ತ ಅಭ್ಯರ್ಥಿಗಳು ಜುಲೈ 31 ರೊಳಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ತಿತಿತಿ. ಚಿಡಿಟಜಚಿಟಜಟಜಣುಂಟ.ಥಿಜಚಿಥಿ. ಂಟಿ ವೆಬ್‌ಸೈಟ್‌ನಲ್ಲಿ ಹೆಚ್ಚಿನ ಮಾಹಿತಿ ಪಡೆಯಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಆಗ್ರೋ ಕೇಂದ್ರಗಳಿಗೆ ಡಿಸಿ ಭೇಟಿ: ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಕುಷ್ಟಗಿ ನಗರದ ವಿವಿಧ ಆಗ್ರೋ ಕೇಂದ್ರಗಳಿಗೆ ಕೊಪ್ಪಳ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಅವರು ಶನಿವಾರ ಭೇಟಿ ನೀಡಿ, ರಸಗೊಬ್ಬರ ಪೂರೈಕೆ ಕುರಿತು ಪರಿಶೀಲಿಸಿದರು.

ಯೋಜನೆ ಪ್ರಕಾರ ರಸಗೊಬ್ಬರ ರೈತರಿಗೆ ಮಾರಾಟ ಮಾಡಬೇಕು ಎಂದು ರಸಗೊಬ್ಬರ ಅಂಗಡಿಗಳ ಮಾಲೀಕರಿಗೆ ಸೂಚನೆ ನೀಡಿದ ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆಯಲ್ಲಿ ಬೇಡಿಕೆಗೆ ಅನುಗುಣವಾಗಿ ರಸಗೊಬ್ಬರ ಬರುತ್ತಿದ್ದು, ರೈತರು ಯಾವುದೇ ರೀತಿಯ ಆತಂಕಪಡಬೇಕಿಲ್ಲ. ಯೂರಿಯಾ ರಸಗೊಬ್ಬರ ಬಳಕೆಯನ್ನು ರೈತರು ಆದಷ್ಟು ಕಡಿಮೆ ಮಾಡಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ರುದ್ರೇಶಪ್ಪ ಟಿ. ಎಸ್. ಕೃಷಿ ಇಲಾಖೆಯ ತಾಲ್ಲೂಕು ಅಧಿಕಾರಿಗಳು ಸೇರಿದಂತೆ ವಿವಿಧ ರಸಗೊಬ್ಬರಗಳ ಅಂಗಡಿಗಳ ಮಾಲೀಕರು ಮತ್ತು ರೈತರು ಸೇರಿದಂತೆ ಇತರೆ ಹಲವಾರು ಜನರು ಉಪಸ್ಥಿತರಿದ್ದರು.

# ಯುವ ಘಟಕದ ಉಪಾಧ್ಯಕ್ಷರಾಗಿ ಮಡಿವಾಳಪ್ಪ ಪಾಟೀಲ್ ನೇಮಕ

ಮಲ್ಲಮ್ಮ ನುಡಿ ವಾರ್ತೆ



ಕೆಂಭಾವಿ: –ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಜಿಲ್ಲಾ ಯುವ ಘಟಕದ ಉಪಾಧ್ಯಕ್ಷರಾಗಿ ಶ್ರೀ ಮಡಿವಾಳಪ್ಪ ಪಾಟೀಲ್ ಹೆಗ್ಗನದೊಡ್ಡಿ ಅವರನ್ನು ನೇಮಕ ಮಾಡಲಾಗಿದೆ.

ಈ ಕುರಿತು ಮಹಾಸಭೆಯ ರಾಷ್ಟ್ರೀಯ ಅಧ್ಯಕ್ಷ ಶಾಮನೂರ ಶಿವಶಂಕರಪ್ಪ ಅವರ ಅನುಮೋದನೆ ಮೇರೆಗೆ ರಾಜ್ಯ ಯುವ ಘಟಕದ ಅಧ್ಯಕ್ಷರು ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ, ತಕ್ಷಣ ಕಾರ್ಯನಿರ್ವಹಿಸುವಂತೆ ಜಿಲ್ಲಾ ಅಧ್ಯಕ್ಷರಾದ ಸುರೇಶ ಜಾಕ ಮತ್ತು ಸುರಪುರ ತಾಲ್ಲೂಕಿನ ಅಧ್ಯಕ್ಷರಾದ ಪ್ರಕಾಶ್ ಅಂಗಡಿ ಕನ್ನೆಳ್ಳಿ ಯುವ ಘಟಕದ ಅಧ್ಯಕ್ಷರಾದ ಕೃಷ್ಣ ರೆಡ್ಡಿ ಮುದನೂರ ಸರ್ವ ಪದಾಧಿಕಾರಿಗಳು ಹರ್ಷಾ ವ್ಯಕ್ತಪಡಿಸಿದ್ದಾರೆ ಸೂಚನೆ ನೀಡಿದ್ದಾರೆ.

ಜಿ.ಪಂ ಪ್ರಥಮ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ

# ಕಳ್ಳಸಂತೆಯಲ್ಲಿ ಆಹಾರಧಾನ್ಯ ಮಾರಾಟವಾದಲ್ಲಿ ಶಿಸ್ತುಕ್ರಮ : ತಿಮ್ಮಾಪೂರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಜುಲೈ 19 –: ಶಾಲಾ ಮಕ್ಕಳಿಗಾಗಿ ಸರಕಾರ ನೀಡುವ ಮಧ್ಯಾಹ್ನದ ಬಿಸಿಊಟದ ಆಹಾರಧಾನ್ಯಗಳು ಕಳ್ಳಸಂತೆಯಲ್ಲಿ ಮಾರಾಟವಾದಲ್ಲಿ ಶಿಸ್ತುಕ್ರಮಕ್ಕೆಗ ‘ೊಳ್ಳಲಾಗುವುದೆಂದು ಅಬಕಾರಿ ಹಾಗು ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಶನಿವಾರ ಜಿಲ್ಲಾ ಪಂಚಾಯತಿಯ ಪ್ರಥಮ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಸರಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ಕೊಡಲಾಗುತ್ತಿದೆ. ಶಿಕ್ಷಕರಿಗೆ ಮಕ್ಕಳ ಸಂಖ್ಯೆ ಹೆಚ್ಚಿಸುವ ಕುರಿತು ತಿಳಿಸಬೇಕು. ಜೊತೆಗೆ ಗುಣಮಟ್ಟದ ಆಹಾರ ಕೊಡುವ ಅವಶ್ಯವಾಗಿದ್ದು, ಮಕ್ಕಳಿಗೆ ಕೊಡುವ ಆಹಾರ ಕಳ್ಳಸಂತೆ ಮಾರಾಟವಾಗದಂತೆ ಕ್ರಮವಹಿಸಲು ಸೂಚಿಸಿದರು.

ಜಿಲ್ಲೆಯಲ್ಲಿ ಕೇವಲ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತಮ ಅಂಕಗಳಿಸಿದವರಿಗೆ ಸನ್ಮಾನ ಮಾಡುವದರ ಜೊತೆಗೆ ಪಿಯುಸಿ, ಡಿಗ್ರಿ ಹಾಗೂ ಉನ್ನತ ಶಿಕ್ಷಣದಲ್ಲಿ ಹೆಚ್ಚು ಅಂಕ ಪಡೆದು ಜಿಲ್ಲೆಗೆ ಕೀರ್ತಿ ತಂದಂತಹ ವಿದ್ಯಾರ್ಥಿಗಳನ್ನು ಸತ್ಕರಿಸಲು ಸಚಿವರು ತಿಳಿಸಿದರು. ಸರಕಾರಿ ಶಾಲೆ ಹಾಗೂ ಕಾಲೇಜುಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ದಾಖಲಾಗುತ್ತಿರುವುದು ಸಂತೋಷ ವಿಷಯವಾಗಿದೆ. ಕ್ಷೇತ್ರ ಶಿಕ್ಷಣಾಧಿಕಾರಿಗಳು ವಾರದಲ್ಲಿ ಒಂದು ಬಾರಿಯಾದರೂ ತಮ್ಮ ವ್ಯಾಪ್ತಿಯಲ್ಲಿ ಭೇಟಿ ನೀಡಬೇಕು. ತಿಂಗಳಿಗೆ ಕನಿಷ್ಟ 5 ಹಾಗೂ 20 ಬಾರಿ ಶಾಲೆಗಳಿಗೆ ಭೇಟಿ ನೀಡಲು ತಿಳಿಸಿದರು.

ತೇರದಾಳ ಶಾಸಕ ಸಿದ್ದು ಸವದಿ ಮಾತನಾಡಿ ಕೆಲವು ಬಿಸಿ ಊಟದ ಕೋಣೆಯ ಸುತ್ತಮುತ್ತ ಸ್ವಚ್ಛತೆ ಕೊರತೆ ಇದೆ. ಶಾಲಾ ಮೈದಾನಕ್ಕೆ ನರೇದಡಿ ಹೆಚ್ಚಿನ ಆದ್ಯತೆ ಕೊಡಲು ಸಭೆಗೆ ತಿಳಿಸಿದಾಗ ಇಗ್ಗ ಗಮನಹರಿಸುವಂತೆ ಸಚಿವರು ಸೂಚಿಸಿದರು. ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ ಮಾತನಾಡಿ ಕಲಾದಗಿ ಆಸ್ಪತ್ರೆಯಲ್ಲಿ ಮಹಿಳಾ ವೈದ್ಯರ ಅವಶ್ಯಕತೆ ಇದೆ. ಕಲಾದಗಿ ಸುತ್ತಮುತ್ತಲಿನ 24 ಹಳ್ಳಿಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿದೆ ಎಂದಾಗ ಇದಕ್ಕೆ ದ್ವನಿ ಗೂಡಿಸಿದ ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಮಹಿಳಾ ವೈದ್ಯರ ಅವಶ್ಯಕತೆ ಇರುವುದಾಗಿ ತಿಳಿಸಿದಾಗ ವೈದ್ಯರ ನೇಮಕಕ್ಕೆ ಕ್ರಮಕೈಗೊಳ್ಳುವುದಾಗಿ ಸಚಿವರು ತಿಳಿಸಿದರು.

ವಿಧಾನಪರಿಷತ್ ಶಾಸಕಿ ಉಮಾಶ್ರೀ ಮಾತನಾಡಿ ಸಂತಾನ ಹರಣದಲ್ಲಿ ಮಹಿಳೆಯರಿಗೆ ಹೆಚ್ಚಿನ ಶಸ್ತ್ರ ಚಿಕಿತ್ಸೆಗಳು ಆಗುತ್ತಿವೆ ಆದರೆ ಪುರುಷರಿಗೆ ಮಾತ್ರ ಆಗುತ್ತಿಲ್ಲ. ಈ ಕುರಿತು ಆರೋಗ್ಯ ಇಲಾಖೆಯವರು ಗಮನ ಹರಿಸಲು ಸಚಿವರು ತಿಳಿಸಿದರು. ಬಿಳಗಿ ಆಸ್ಪತ್ರೆಗೆ 1.47 ಕೋಟಿ ಅನುದಾನ ಮಂಜೂರಾಗಿದೆ. ಈ ಕೆಲಸ ಸರಿಯಾಗಿ ನಡೆದಿಲ್ಲ. ಈ ಬಗ್ಗೆ ತನಿಖೆ ಮಾಡಿ ವರದಿ ಸಲ್ಲಿಸಲು ತಿಳಿಸಲಾಗಿತ್ತು. ಸರಿಯಾದ ವರದಿ ನೀಡದವರ ಮೇಲೆ ಶಿಸ್ತುಕ್ರಮಕ್ಕಾಗಿ ಸಭೆಯಲ್ಲಿ ಸೂಚಿಸಲಾಯಿತು. ಕೆ–ರೂರಿಗೆ ಓರ್ವ ವೈದ್ಯರ ಅವಶ್ಯಕತೆ ಇದ್ದು, ಕೂಡಲೇ ಪೂರೈಸುವ ಕೆಲಸವಾಗಲು ಶಾಸಕರು ಆಗ್ರಹಿಸಿದರು.

ಬಾಗಲಕೋಟೆ ಜಿಲ್ಲಾ ಆಸ್ಪತ್ರೆಯಲ್ಲಿ ಸಿ.ಟಿ ಸ್ಕ್ಯಾನ್ ಮಾತ್ರ ಎಂ.ಆರ್.ಐ ಅವಶ್ಯಕತೆ ಇದೆ. ಬಾಗಲಕೋಟೆಯಿಂದ ವಿಜಯಪುರಕ್ಕೆ ರೋಗಿಗಳು ತೆರಳುತ್ತಿದ್ದಾರೆ. ಜಿಲ್ಲಾ ಆಸ್ಪತ್ರೆಗೆ ಎಂ.ಆರ್.ಐ ತರಲು ಕ್ರಮವಹಿಸುವ ಅಗತ್ಯವಿದೆ ಎಂದರು. ಕೃಷಿ ಇಲಾಖೆಗೆ ಸಂಬಂಧಿಸಿದಂತೆ ಕಳಪೆ ಬೀಜ ಮಾರಾಟ ಮಾಡುತ್ತಿದ್ದ ಅಂಗಡಿ ಮೇಲೆ ಎಫ್.ಐ.ಆರ್ ದಾಖಲಿಸಿ ಸೀಜ್ ಮಾಡಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೇನ್ನವರ ಸಭೆಗೆ ತಿಳಿಸಿದರು. ರೈತರಿಗೆ ಸಮರ್ಪಕವಾಗಿ ಬೀಜ ಮತ್ತು ಗೊಬ್ಬರ ಪೂರೈಸಲಾಗುತ್ತಿದೆ ಎಂದು ಸಭೆಗೆ ತಿಳಿಸಿದರು.

ತೋಟಗಾರಿಕೆ ಇಲಾಖೆ ಉಪನಿರ್ದೇಶಕ ರವೀಂದ್ರ ಹಕಾಟಿ ಮಾತನಾಡಿ ತೋಟಗಾರಿಕೆ ರೈತರನ್ನು ಭೇಟಿ ಮಾಡಿದಾಗ ಕಲ್ಲಂಡಗಿಗೆ ಇಂಜೆಕ್ಷನ್ ಮೂಲಕ ಬಣ್ಣ ಮತ್ತು ರುಚಿ ಹೆಚ್ಚಿಸಲು ಪ್ರಯೋಗಿಸುತ್ತಿದ್ದಾರೆಂದು ದೂರು ಬಂದ ಹಿನ್ನಲೆಯಲ್ಲಿ ಪರಿಶೀಲಿಸಲಾಗಿ ಈ ಕಾರ್ಯ ನಡೆದಿಲ್ಲದಿರುವುದು ಕಂಡುಬಂದಿತು ಎಂದು ಸಭೆಗೆ ತಿಳಿಸಿದರು. ರಾಜ್ಯಸಭಾ ಸದಸ್ಯ ನಾರಾಯಣ ಭಾಂಡಗೆ ಮಾತನಾಡಿ ಅಮೃತ ಯೋಜನೆಯಡಿಯಲ್ಲಿ ದಿನ 24 ಗಂಟೆ ನೀರು ಪೂರೈಸುವ ಕಾರ್ಯದ ಬಗ್ಗೆ ಮಾಹಿತಿ ನೀಡುವಂತೆ ತಿಳಿಸಿದರು. ಪೈಪಲೈನ್ ಮೂಲಕ ಗ್ಯಾಸ್ ವಿತರಿಸುವ ಕಾರ್ಯ ವಿದ್ಯಾಗಿರಿ ಮತ್ತು ನವನಗರದಲ್ಲಿ ಚಾಲನೆಯಲ್ಲಿದೆ. ಪಿ.ಎಂ ಆವಾಸ್ ಯೋಜನೆಯಡಿ ಮನೆ ನಿರ್ಮಾಣ ಕಾರ್ಯ ಕುಂಟಿತಗೊಂಡಿ–ದ್ದು, ಪಾವತಿಗೆ ಕ್ರಮವಹಿಸುವ ಅಗತ್ಯವಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಅಂಕಿ ಸಂಖ್ಯೆ ಇಲಾಖೆಯಿಂದ ಹೊರತಂದ 2024–25ನೇ ಸಾಲಿನ ಜಿಲ್ಲೆಯ ಸಮಗ್ರಮಾಹಿತಿಯನ್ನೊಳಗೊಂಡ ಪುಸ್ತಕವನ್ನು ಸಚಿವರು ಬಿಡುಗಡೆ ಮಾಡುವದರ ಜೊತೆಗೆ ಜುಲೈ 22 ರಿಂದ ಜಿಲ್ಲೆಯಲ್ಲಿ ಜಾರಿಗೊಳಿಸಲಾಗುತ್ತಿರುವ ರಾಜ್ಯಾದ್ಯಂತ ವಿಸ್ತರಣೆಗೊಂಡ ಮನೆ ಬಾಗಿಲಿಗೆ ಉಚಿತ ಆರೋಗ್ಯ ಸೇವೆ ನೀಡುವ ಮಹತ್ವಾಕಾಂಕ್ಷಿ ಗೃಹ ಆರೋಗ್ಯ ಯೋಜನೆಯ ಮಾಹಿತಿಯುಳ್ಳ ಪುಸ್ತಕವನ್ನು ಬಿಡುಗಡೆ ಮಾಡಿದರು.

ಸಭೆಯಲ್ಲಿ ಸಂಸದ ಪಿ.ಸಿ.ಗದ್ದಿಗೌಡರ, ಬಾಗಲಕೋಟೆ ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್. ಮೇಟಿ, ಬೀಳಗಿ ಶಾಸಕ ಭೀಮಸೇನ ಚಿಮ್ಮನಕಟ್ಟಿ, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮೊಹಮ್ಮದ ಮೊಹಸಿನ್, ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಸಿಇಓ ಶಶಿಧರ ಕುರೇರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಉಪ ಅರಣ್ಯ ಸಂರಕ್ಷಣಾಧಿಕಾರಿ ರುಥ್ರೇನ್, ಜಿ.ಪಂ ಉಪಕಾರ್ಯದರ್ಶಿ ಎನ್. ವಾಯ್.ಬಸರಿಗಿಡದ ಸೇರಿದಂತೆ ವಿವಿಧ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ನ್ಯಾಯಾಂಗ ವ್ಯವಸ್ಥೆಯಲ್ಲಿ ವೃತ್ತಿಪರತೆ ಹಾಗೂ ವಿಶ್ವಾಸಾರ್ಹತೆಯನ್ನು ಎತ್ತಿಹಿಡಿಯುತ್ತೇನೆ– ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಜುಲೈ19–ನ್ಯಾಯಾಂಗ ವ್ಯವಸ್ಥೆಯಲ್ಲಿನ ವೃತ್ತಿಪರತೆ ಹಾಗೂ ವಿಶ್ವಾಸಾರ್ಹತೆಯನ್ನು ಎತ್ತಿಹಿಡಿಯುವ ಕೆಲಸವನ್ನು ಮಾಡುತ್ತೇನೆ ಎಂದು ಕರ್ನಾಟಕ ಉಚ್ಚನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳಾದ ವಿಭು ಬಖ್ರು ತಿಳಿಸಿದರು.

ಅವರು ಇಂದು ಕರ್ನಾಟಕ ಉಚ್ಚನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳಾಗಿ ಪ್ರಮಾಣ ವಚನ ಸ್ವೀಕರಿಸಿ, ಹೈಕೋರ್ಟ್ ಅಧಿಕಾರ ವಹಿಸಿಕೊಂಡ ನಂತರ ಏರ್ಪಡಿಸಿದ ಸ್ವಾಗತ ಸಮಾರಂಭದಲ್ಲಿ ಮಾತನಾಡಿದ ಅವರು, ನ್ಯಾಯಾಂಗ ವ್ಯವಸ್ಥೆಯಲ್ಲಿ ಇಂದು ಹಲವಾರು ಒಳ್ಳೆಯ ಬದಲಾವಣೆಗಳು ಕಂಡುಬಂದಿದೆ. ನ್ಯಾಯಾಧೀಶರು ಹಾಗೂ ವಕೀಲರ ನಡುವೆ ಉತ್ತಮ ಬಾಂಧವ್ಯ ಏರ್ಪಡಬೇಕು. ಕರ್ನಾಟಕ ಹಲವು ಸಾಧನೆಕಾರರನ್ನು ಕೊಡುಗೆ–ಯಾಗಿ ನೀಡಿದೆ. ಬಸವಣ್ಣ, ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್, ಸರ್.ಎಂ.ವಿಶ್ವೇಶ್ವರಯ್ಯ ಇಂತಹ ಮಹನೀಯರ ಸಾಧನೆಗಳನ್ನು ನಾವು ಇಂದು ನೆನೆಯಬೇಕಿದೆ. ಜನರು ನ್ಯಾಯದಾನದಲ್ಲಿ ಇಟ್ಟಿರುವ ನಂಬಿಕೆಯನ್ನು ನಾವು ಉಳಿಸಿಕೊಂಡು ಕೆಲಸನಿರ್ವಹಿಸಬೇಕೆಂದು ತಿಳಿಸಿದರು.

ಕರ್ನಾಟಕ ಉಚ್ಚನ್ಯಾಯಾಲಯದ ನೂತನ ಮುಖ್ಯನ್ಯಾಯಮೂರ್ತಿಗಳಿಗೆ ಸ್ವಾಗತ ಕೋರಿ ಭಾಷಣ ಮಾಡಿದ ಕರ್ನಾಟಕ ರಾಜ್ಯ ವಕೀಲರ ಪರಿಷತ್ ಅಧ್ಯಕ್ಷರಾದ ಮಿಟ್ಟಲ ಕೋಡ್ ಎಸ್.ಎನ್. ಅವರು ಮಾತನಾಡಿ, ಮುಖ್ಯ ನ್ಯಾಯಮೂರ್ತಿಗಳಾದ ವಿಭು ಬಖ್ರು ಅವರು 1966ರಲ್ಲಿ ನಾಗ್ಪುರದಲ್ಲಿ ಜನಿಸಿದರು. ಶಾಲೆ ಮುಗಿಸಿದ ನಂತರ ಇನ್ಸಿಟಿಟ್ಯೂಟ್ ಆಫ್ ಚಾರ್ಟೆಡ್ ಅಕೌಂಟೆಂಟ್ಸ್ ಆಫ್ ಇಂಡಿಯಾದಲ್ಲಿ ನೊಂದಣಿಯಾಗಿ, ನಂತರ ಠಾಕೂರ್ ವೈದ್ಯನಾಥನ್ ಅಂಡ್ ಕಂಪೆನಿಯಲ್ಲಿ 1985ರಲ್ಲಿ ಸೇವೆ ಪ್ರಾರಂಭಿಸಿ, ದೆಹಲಿ ವಿಶ್ವವಿದ್ಯಾಲಯದಲ್ಲಿ ಬಿ.ಕಾಂ ಮುಗಿಸಿ ನಂತರ ಚಾರ್ಟೆಡ್ ಅಕೌಂಟೆಂಟ್ ಪರೀಕ್ಷೆಯನ್ನು ಪೂರ್ಣಗೊಳಿಸಿದರು. 1990ರಲ್ಲಿ ಕಾನೂನು ಪದವಿಯನ್ನು ಪಡೆದು ದೆಹಲಿಯ ಬಾರ್ ಕೌನ್ಸಿಲ್‌ಲ್ಲಿ ವಕೀಲರಾಗಿ ನೋಂದಾಯಿಸಿಕೊಂಡರು. ಅಲ್ಲದೆ ದೆಹಲಿಯ ಹೈಕೋರ್ಟ್ ಹಾಗೂ ಸುಪ್ರೀಂಕೋರ್ಟ್ ಎರಡರಲ್ಲೂ ಸೇವೆ ಸಲ್ಲಿಸಿದ ಅನುಭವ ಅವರದ್ದು. ಕಂಪನಿ ನ್ಯಾಯ ಮಂಡಳಿ ಹಾಗೂ ಇನ್ನಿತರ ನ್ಯಾಯ ಮಂಡಳಿಗಳಲ್ಲಿ ಸೇವೆ ಸಲ್ಲಿಸಿದ ಅವರು, ದೆಹಲಿ ಹೈಕೋರ್ಟ್‌ನಲ್ಲಿ ಹಿರಿಯ ವಕೀಲರಾಗಿ 2011ರಲ್ಲಿ ನೇಮಕಗೊಂಡರು. ನಂತರ 17, 2013ರಲ್ಲಿ ಹೆಚ್ಚುವರಿ ನ್ಯಾಯಾಧೀಶರಾಗಿ, 2015ರಲ್ಲಿ ಖಾಯಂ ನ್ಯಾಯಾಧೀಶರಾಗಿ ನೇಮಕಗೊಂಡರು. ದೆಹಲಿ ಹೈಕೋರ್ಟ್ ಹಂಗಾಮಿ ಮುಖ್ಯ ನ್ಯಾಯಮೂರ್ತಿಗಳಾಗಿ ಸೇವೆ ಸಲ್ಲಿಸಿದ ಹೆಗ್ಗಳಿಕೆಗೆ ಇವರು ಪಾತ್ರರಾಗಿದ್ದಾರೆ ಎಂದು ಅವರು ತಿಳಿಸಿದರು. ನ್ಯಾಯಾಧೀಶರು ಹಾಗೂ ವಕೀಲರದ್ದು ಅವಿನಾಭವ ಸಂಬಂಧ ಎಂದು ಬಣ್ಣಿಸಿದ ಅವರು ಈ ಇಬ್ಬರ ಸಮನ್ವಯದಿಂದ ನ್ಯಾಯ ವ್ಯವಸ್ಥೆಯಲ್ಲಿ ಉತ್ತಮ ತೀರ್ಪುಗಳನ್ನು ನೀಡಲು ಸಾಧ್ಯವಿದೆ. ಕರ್ನಾಟಕದಂತಹ ಸಾಂಸ್ಕೃತಿಕ ಹಿರಿಮೆಯುಳ್ಳ ರಾಜ್ಯದಲ್ಲಿ ಮುಖ್ಯ ನ್ಯಾಯಾಧೀಶರಾಗಿ ಅಧಿಕಾರ ವಹಿಸಿಕೊಂಡ ತಮಗೆ ಒಳ್ಳೆಯದಾಗಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ನ್ಯಾಯಮೂರ್ತಿಗಳಾದ ವಿ.ಕಾಮೇಶ್ವರ ರಾವ್, ಕರ್ನಾಟಕ ಉಚ್ಚನ್ಯಾಯಾಲಯದ ಹಿರಿಯ ನ್ಯಾಯಾಧೀಶರು, ವಕೀಲರು ಉಪಸ್ಥಿತರಿದ್ದರು.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

# ಪತ್ರಕರ್ತರ ವೇತನಕ್ಕಾಗಿ ಕಾನೂನು ಜಾರಿಗೊಳ್ಳಬೇಕು : ಸಚಿವ ಡಾ.ಶರಣಪ್ರಕಾಶ ಪಾಟೀಲ





ಸೇಡಂ, ಜೂಲೈ 19: ಪತ್ರಿಕಾ ರಂಗ ಕವಲು ದಾರಿಯಲ್ಲಿರುವುದು ಪ್ರಸ್ತುತ ಸ್ಥಿತಿಯಾಗಿದ್ದು, ಪತ್ರಕರ್ತರ ಹಿತ ಕಾಪಾಡುವಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್‌ಯೋಜನೆ ಜೊತೆಗೆ ಪತ್ರಕರ್ತರ ಆರೋಗ್ಯದ ದೃಷ್ಟಿಯಿಂದ ಆರೋಗ್ಯ ಸಂಜೀವಿನಿಯನ್ನು ಜಾರಿಗೆಗೊಳಿಸಿದೆ ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ದಿ ಸಚಿವ ಡಾ.ಶರಣಪ್ರಕಾಶ ಪಾಟೀಲ ಹೇಳಿದರು. ಸೇಡಂ ಸರ್ಕಾರಿ ನೌಕರರ ಭವನದಲ್ಲಿ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘ ಆಯೋಜಿಸಿದ ಪತ್ರಿಕಾ ದಿನಾಚರಣೆ ಹಾಗೂ ಹಿರಿಯ ಪತ್ರಕರ್ತ ಲಿ.ಬಿ.ಮಹಾದೇವಪ್ಪ ಸ್ಮರಣಾರ್ಥ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು ಪತ್ರಕರ್ತರ ವೇತನದ ಬಗ್ಗೆ ಕಾನೂನಾತ್ಮಕ ಯೋಜನೆಯನ್ನು ರೂಪಿಸುವಲ್ಲಿ ಕೇಂದ್ರದ ಮಟ್ಟದಲ್ಲಿ ಕಾರ್ಯವಾಗಬೇಕಿದೆ. ರಾಜ್ಯ ಸರ್ಕಾರದಿಂದ ಯಾವೆಲ್ಲಾ ಯೋಜನೆಗಳನ್ನು ಪತ್ರಕರ್ತರಿಗೆ ನೀಡಬೇಕೆನ್ನುವ ಬೇಡಿಕೆಗಳನ್ನು ಸರ್ಕಾರ ಪರಿಗಣಿಸಲಿದೆ ಎಂದು ಅಭಿಲಾಷೆ ವ್ಯಕ್ತಪಡಿಸಿದರು. ಮಾಧ್ಯಮ ಸಂಸ್ಥೆಗಳು ಉಳ್ಳವರ ಮಾಲಿಕತ್ವದಲ್ಲಿರುವುದು ಜಾಗತೀಕರಣ ಮಟ್ಟದ ಬೆಳವಣಿಗೆಯಾಗಿದೆ. ಪತ್ರಿಕೆ ಓದುಗರ ಸಂಖ್ಯೆ ಹೆಚ್ಚುಸುವುದು ಪತ್ರಿಕಾ ಮಾಧ್ಯಮ ಸಂಸ್ಥೆಯವರ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಪದಾಧಿಕಾರಿಗಳು, ಹಿರಿಯ–ಕಿರಿಯ ಪತ್ರಕರ್ತರು ಹಾಗೂ ಸೇಡಂ ನಾಗರೀಕ ಬಂಧುಗಳು ಉಪಸ್ಥಿತರಿದ್ದರು.

> ಪತ್ರಕರ್ತರ ಹೃದಯವೂ ಸಹ ಆರೋಗ್ಯದಿಂದ ಕೂಡಿರಲು ಕಲಬುರಗಿ ಜಯದೇವ ಹೃದ್ರೋಗ ಸಂಸ್ಥೆಯಲ್ಲಿ ಶನಿವಾರ–ಭಾನುವಾರ ಉಚಿತ ಹೃದ್ರೋಗ ತಪಾಸಣೆ ಮಾಡಲಾಗುವುದು. ಹೆಚ್ಚಿನ ಒತ್ತಡದಲ್ಲಿ ಕಾರ್ಯನಿರ್ವಹಿಸುವ ಪತ್ರಕರ್ತರ ಆರೋಗ್ಯವು ಮುಖ್ಯವಾಗಿದೆ.
>
> ಡಾ.ಶರಣಪ್ರಕಾಶ ಪಾಟೀಲ
> ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವ.

# ಸಾಮಾಜಿಕ ಸ್ವಾಸ್ಥ್ಯ ಕಾಪಾಡುವಲ್ಲಿ ಪತ್ರಕರ್ತರ ಪಾತ್ರ ದೊಡ್ಡದು



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜು.19: ಸಾಮಾಜಿಕ ಸ್ವಾಸ್ಥ್ಯ ಕಾಪಾಡುವಲ್ಲಿ ಪತ್ರಕರ್ತರ ಪಾತ್ರ ದೊಡ್ಡದಾಗಿದ್ದು, ಪತ್ರಕರ್ತರಿಗೆ ಸಾಮಾಜಿಕ ಕಳಕಳಿ ಅತಿ ಅವಶ್ಯವಾಗಿದೆ ಎಂದು ಕುಕನೂರಿನ ಮಹಾದೇವ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಅಳವಂಡಿ ಗ್ರಾಮದ ಸಿದ್ದೇಶ್ವರ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಅಳವಂಡಿ ಹೋಬಳಿ ಪತ್ರಕರ್ತರು ಹಾಗೂ ಎಸ್‌ಎಸ್ ಪಿಯು ಕಾಲೇಜಿನ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾ ದಿನಾಚರಣೆ ಹಾಗೂ ಎನ್ ಎಸ್ ಎಸ್ ಘಟಕದ ದೈನಂದಿನ ಚಟುವಟಿಕೆಗಳ ಉದ್ಘಾಟನಾ ಸಮಾರಂಭವನ್ನು ಉದ್ದೇಶಿಸಿ ಶನಿವಾರ ಮಾತನಾಡಿದರು.

ವಿದ್ಯಾರ್ಥಿಗಳು ವ್ಯಕ್ತಿತ್ವ ರೂಪಿಸಿಕೊಳ್ಳುವುದರ ಜೊತೆಗೆ ಬದಲಾವಣೆ ಕಾಣಲು ಎನ್ ಎಸ್ ಎಸ್ ಸಹಕಾರಿಯಾಗಿದೆ. ಎನ್ ಎಸ್ ಎಸ್ ಶಿಸ್ತು, ಏಕಾಗ್ರತೆ, ಉತ್ತಮ ಸಂಸ್ಕಾರ, ಒಳ್ಳೆಯ ನಡತೆ, ಗುಣ ಮತ್ತು ನಡುವಳಿಕೆಯನ್ನು ಕಲಿಸಿಕೊಡುತ್ತದೆ ಎಂದರು.

ಸಿದ್ದೇಶ್ವರ ಮಠದ ಮರುಳಾರಾಧ್ಯ ಶಿವಾಚಾರ್ಯ ಮಾತನಾಡಿ, ಬದುಕಿನಲ್ಲಿ ಜ್ಞಾನ ಅತಿ ಮುಖ್ಯವಾಗಿದೆ. ಸಮಾಜದಲ್ಲಿರುವ ಅಂಕುಡೊಂಕುಗಳನ್ನು ತಿದ್ದಿ, ಸುಂದರ ಸಮಾಜ ನಿರ್ಮಿಸುವಲ್ಲಿ ಪತ್ರಿಕೆಗಳ ಪಾತ್ರ ಅತ್ಯಂತ ಪ್ರಮುಖವಾಗಿ ಎಂದರು.

ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಹನುಮಂತ ಹಳ್ಳಿಕೇರಿ ಮಾತನಾಡಿ, ಪತ್ರಕರ್ತರು ಎಂದ–ರೇ ವಿರೋಧ ಪಕ್ಷದ ನಾಯಕರು ಇದ್ದಹಾಗೆ, ಸಮಾಜ ತಿದ್ದುವ ಕೆಲಸದಲ್ಲಿ ಸದಾ ನಿರತರಾಗಿರುತ್ತಾರೆ. ಸಮಾಜ, ಆಡಳಿತದಲ್ಲಿ ಪಾರದರ್ಶಕತೆಗೆ ಪತ್ರಿಕೆಗಳ ಪಾತ್ರ ಮಹತ್ವದ್ದು ಎಂದರು.

ಕೊಪ್ಪಳ ವಿವಿಯ ಉಪನ್ಯಾಸಕ ಡಾ.ಪ್ರವೀಣಕುಮಾರ ಪೋಲಿಸ್ ಪಾಟೀಲ ಮಾತನಾಡಿ, ಎನ್ ಎಸ್ ಎಸ್ ಮಾತನಾಡುವ ಗುಣ, ಸಮಯದ ಪ್ರಜ್ಞೆ, ನಾಯಕತ್ವದ ಗುಣ ಹಾಗೂ ವಿದ್ಯಾರ್ಥಿ ಜೀವನದಲ್ಲಿ ಸಂದರ್ಭಕ್ಕನುಸಾರವಾಗಿ ಕೆಲಸ ಮಾಡುವುದನ್ನು ಕಲಿಸುತ್ತದೆ. ಸಮಾಜದ ಸಮಸ್ಯೆಗಳನ್ನು ಬಿಂಬಿಸುವಲ್ಲಿ ಪತ್ರಕರ್ತರ ಸತತ ಪರಿಶ್ರಮ ಶ್ಲಾಘನೀಯ ಎಂದರು.

ಕೊಪ್ಪಳ ವಿವಿಯ ಉಪನ್ಯಾಸಕ ಸಂತೋಷಕುಮಾರ ಮಾತನಾಡಿ, ಪತ್ರಕರ್ತರು ಸಮಾಜಮುಖಿ ಕೆಲಸ ಮಾಡುವ ಮೂಲಕ ದೇಶದ ಬೆಳವಣಿಗೆ ಹಾಗೂ ಅಭಿವೃದ್ಧಿಗೆ ಸಹಕಾರ ನೀಡುತ್ತಿದ್ದಾರೆ. ವಿವಿಧ ಇಲಾಖೆಗಳು ನಡೆಸುತ್ತಿರುವ ಕಳಪೆ ಕಾಮಗಾರಿ ಹಾಗೂ ಸಾರ್ವಜನಿಕರ ಕುಂದುಕೊರತೆಗಳ ಬಗ್ಗೆ ಸುದ್ದಿಗಳನ್ನು ಬಿತ್ತರಿಸುವ ಮಲಕ ಅಧಿಕಾರಿಗಳನ್ನು ಎಚ್ಚರಿಸುತ್ತಿರುವ ಕಾರ್ಯ ಶ್ಲಾಘನೀಯ ಎಂದರು.

ಗ್ರಾ.ಪಂ ಅಧ್ಯಕ್ಷೆ ಶಂಕ್ರಮ್ಮ ಜೋಗಿನ್, ಕವಿ

ಸಮಿತಿಯ ವ್ಯವಸ್ಥಾಪಕ ಶಿವಪ್ರಕಾಶ್ ಸ್ವಾಮಿ ಇನಾಮದಾರ, ಪ್ರಾಚಾರ್ಯ ಚಂದ್ರಶೇಖರ ದೊಡ್ಡಮನಿ, ಗ್ರಾ.ಪಂ ಸದಸ್ಯರಾದ ಗುರು ಬಸವರಾಜ ಹಳ್ಳಿಕೇರಿ, ಅನ್ವರ್ ಗಡಾದ, ಪಿಎಸ್ ಪ್ರಹ್ಲಾದ್ ನಾಯಕ, ಕಸಾಪ ತಾಲೂಕು ಅಧ್ಯಕ್ಷ ರಾಮಚಂದ್ರಗೌಡ, ಉಪನ್ಯಾಸಕ ಬಾಳಪ್ಪ.ಎಸ್.ಎಸ್.ಅಂಗಡಿ, ದೇವಮ್ಮ, ನೀಲಪ್ಪ ಹಕ್ಕಂಡಿ, ಪತ್ರಕರ್ತರಾದ ಸುರೇಶ ಸಂಗರಡ್ಡಿ,

ಮಲ್ಲಿಕಾರ್ಜುನ ಪಾಟೀಲ, ಜುನಸಾಬ ವಡ್ಡಟ್ಟಿ, ಬಿ.ಎನ್. ಹೋರಪೇಟಿ ಹಾಗೂ ಇತರರು ಇದ್ದರು.

# ಪ್ರವಾಸಿ ತಾಣಗಳ ವೀಕ್ಷಣೆಗಿರುವ ವಿಶೇಷ ಬಸ್ ಸೌಲಭ್ಯವನ್ನು

## ಸಾರ್ವಜನಿಕರು ಸದುಪಯೋಗಪಡೆದುಕೊಳ್ಳಬೇಕು: ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

ಬೀದರ. ಜು.19: ಜಿಲ್ಲೆಯ ಪ್ರವಾಸಿ ತಾಣಗಳ ವೀಕ್ಷಣೆಗಿರುವ ವಿಶೇಷ ಬಸ್ ಸೌಲಭ್ಯವನ್ನು ಸಾರ್ವಜನಿಕರು ಸದುಪಯೋಗಪಡೆದುಕೊಳ್ಳಬೇಕೆಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ತಿಳಿಸಿದರು.

ಅವರು ಶನಿವಾರ ಬೀದರ ನಗರದ ಕೋಟೆ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪ್ರವಾಸೋದ್ಯಮ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ಇವರು ಪ್ರಸ್ತುತಪಡಿಸಿರುವ ವಿನೂತನ ಪ್ರವಾಸ ಕಾರ್ಯಕ್ರಮ 'ಬೀದರ ದರ್ಶನ' ಒಂದು ದಿನದ ಪ್ರೇಕ್ಷಣೀಯ ಸ್ಥಳಗಳ ಪ್ರವಾಸ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಬೀದರ ಜಿಲ್ಲೆಯಲ್ಲಿರುವ ಐತಿಹಾಸಿಕ, ಸಾಂಸ್ಕೃತಿಕ, ಧಾರ್ಮಿಕ ಮತ್ತು ಪರಿಸರ ಪ್ರವಾಸಿ ತಾಣಗಳಾದ ಬೀದರ ಕೋಟೆ, ಗುರುದ್ವಾರ, ಬರಿದ್ ಶಾಹಿ ಉದ್ಯಾನ, ಪಾಪನಾಶ ದೇವಸ್ಥಾನ, ಝರಣಿ ನರಸಿಂಹ ದೇವಸ್ಥಾನ, ಅಷ್ಟೂರ ಟೊಂಬ್ಸ್ ಮತ್ತು ಚೌಖಂಡಿ, ಬ್ಲ್ಯಾಕ್ ಬಕ್ ಸಫಾರಿ, ಬಸವಕಲ್ಯಾಣದ ಅನುಭವ ಮಂಟಪ, ಕೋಟೆ, ಭಾಲ್ಕಿ ಕೋಟೆ, ಹುಮನಾಬಾದ ವಿರಭದ್ರೇಶ್ವರ ದೇವಸ್ಥಾನ, ಚಳಕಾಪುರ ಸಿದ್ಧಾರೂಢ ಮಠ, ಹನುಮಾನ ದೇವಸ್ಥಾನ ಸೇರಿದಂತೆ ಹಲವು ತಾಣಗಳಿಗೆ ಭೇಟಿ ನೀಡಲು ಈ ಬಸ್ ಸೌಲಭ್ಯ ಅನುಕೂಲ ಮಾಡಲಿದೆ. ಪ್ರವಾಸಿಗರು ಆನ್‌ಲೈನ್ ಮೂಲಕ ನೊಂದಣಿ ಮಾಡಿಕೊಳ್ಳಬಹುದು, ವಯಸ್ಕರಿಗೆ 685 ರೂ ಮತ್ತು ಶಾಲಾ ಮಕ್ಕಳಿಗೆ 400 ರೂ. ಟಿಕೆಟ್ ದರ ಇರುತ್ತದೆ ಹಾಗೂ ರಾಜ್ಯ ಮತ್ತು ಜಿಲ್ಲೆಯ ಪ್ರವಾಸಿಗರಿಗೆ ಬಹಳ ಅನುಕೂಲ ಆಗಲಿದೆ ಮತ್ತು ಪ್ರವಾಸೋದ್ಯಮಕ್ಕೆ ಉತ್ತೇಜನ ಸಿಗಲಿದೆ ಎಂದರು.




ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ಶಿವಲಿಂಗಪ್ಪ ಅವರು ಮಾತನಾಡಿ, ಪ್ರತಿದಿನ ಪ್ರವಾಸಿ ಬಸ್

ಬರಿದ್ ಶಾಹಿ ಉದ್ಯಾನವನದಿಂದ ಆರಂಭವಾಗಲಿದೆ, 6:30 ಪ್ರಾರಂಭವಾಗಿ 7:30ಕ್ಕೆ ಬ್ಲಾಕ್ ಬಕ್ ಸಫಾರಿ, 9:30ಕ್ಕೆ ಝರಣಾ, 11:30ಕ್ಕೆ ಅಷ್ಟೂರ ಟೊಂಬ್ಸ್ ಮತ್ತು ಚೌಖಂಡಿ, 1:30ಕ್ಕೆ ಗುರುನಾನಕ, 2:30 ಊಟದ ವಿರಾಮ, 4:30ಕ್ಕೆ ಬರಿದ್ ಶಾಹಿ ಉದ್ಯಾನ, 5:30ಕ್ಕೆ ಪಾಪನಾಶ ದೇವಸ್ಥಾನ, 6:30ಕ್ಕೆ ಮುಕ್ತಾಯವಾಗಲಿದೆ ಹಾಗೂ ನೊಂದಣಿ ಮತ್ತು ಹೆಚ್ಚಿನ ಮಾಹಿತಿಗಾಗಿ ಮೊಬೈಲ್ 9845624001 ಸಂಖ್ಯೆಗೆ ಸಂಪರ್ಕಿಸಬಹುದು ಎಂದರು.

ಈ ಸಂದರ್ಭದಲ್ಲಿ ಭಾರತೀಯ ಪುರಾತತ್ವ ಇಲಾಖೆಯ ಅಧಿಕಾರಿ ಅನುರುದ್ಧ ದೇಸಾಯಿ, ಜಂಗಲ್ ಲಾಡ್ಜ್ ಮತ್ತು ರೆಸಾರ್ಟ್ ಮ್ಯಾನೇಜರ್ ಶಿವಕುಮಾರ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಶಿಕ್ಷಕನ ಅಪಹರಿಸಿ ಹಣ, ಚಿನ್ನಾಭರಣ ದೋಚಿದ್ದ ನಾಲ್ವರ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.19–ಶಿಕ್ಷಕರೊಬ್ಬರನ್ನು ಅಪಹರಿಸಿ ನಗದು ಹಣ, ಚಿನ್ನಾಭರಣ, ಮೊಬೈಲ್ ಮತ್ತು ಎಟಿಎಂ ಕಾರ್ಡ್ ದರೋಡೆ ಮಾಡಿದ ಪ್ರಕರಣ–ಕ್ಕೆ ಸಂಬಂಧಿಸಿದಂತೆ ನಾಲ್ವರು ಆರೋಪಿಗಳನ್ನು ಬಂಧಿಸಿ 1.41 ಲಕ್ಷ ರೂ.ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ತಿಳಿಸಿದರು.

ನಗರದ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಬಾಬಾದ ತಾಲ್ಲೂಕಿನ ಕಡೆಹಳ್ಳಿ ಗ್ರಾಮ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ಈರಣ್ಣ ಶರಣಬಸಪ್ಪ ಸಜ್ಜನ್ ಎಂಬುವವರು ಏಪ್ರಿಲ್ 9 ರಂದು ಬೈಕ್ ಮೇಲೆ ಕೆಲಸಕ್ಕೆಂದು ಶಹಾಬಾದ ಕ್ರಾಸ್ ದಾಟಿ ಕಡೆಹಳ್ಳಿ ಕಡೆಗೆ ಹೋಗುತ್ತಿದ್ದಾಗ ಕಾರಿನಲ್ಲಿ ಬಂದ ನಾಲ್ವರು ದರೋಡೆಕೋರರು ಅವರನ್ನು ಅವರನ್ನು ಅಪಹರಿಸಿಕೊಂಡು ಹೋಗಿ "ನೀನು 2.50 ಕೋಟಿ ಬೆಲೆ ಬಾಳುವ ನಾಯಿಯನ್ನು ಬೈಕ್‌ನಿಂದ ಡಿಕ್ಕಿ ಹೊಡೆದು ಸಾಯಿಸಿದ್ದು, 50 ಸಾವಿರ ರೂ.ದಂಡ ಕೊಡು ಎಂದು ಅವರ ಮೇಲೆ ಹಲ್ಲೆ ನಡೆಸಿ ಅವರ ಪ್ಯಾಂಟಿನ ಜೇಬಿನಲ್ಲಿದ್ದ 5 ಸಾವಿ ರೂ.ನಗದು, ಎಟಿಎಂ ಕಾರ್ಡ್, 5 ಗ್ರಾಂ.ಬಂಗಾರದ ಉಂಗುರ ಮತ್ತು ಮೊಬೈಲ್ ದೋಚಿಕೊಂಡು ಹೋಗಿದ್ದರು. ಅಲ್ಲದೆ ಕನ್ನಳ್ಳಿ ಚೆಕ್ ಪೋಸ್ಟ್ ಹತ್ತಿರ ಎಟಿಎಂ ಕಾರ್ಡ್ ಬಳಸಿ 10 ಸಾವಿರ ರೂ.ನಗದು ಮತ್ತು ಫೋನ್ ಪೇ ಮುಖಾಂತರ 88 ಸಾವಿರ ರೂ.ಡ್ರಾಮಾಡಿಕೊಂಡಿದ್ದರು.

ಈ ಸಂಬಂಧ ಫರಹತಾಬಾದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಈ ಪ್ರಕರಣ ಪತ್ತೆಗೆ ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್‌ನಾಯಕ, ಎಸಿಪಿ ಡಿ.ಜಿ.ರಾಜಣ್ಣ, ಫರಹತಾಬಾದ ಪಿಐ ಮಲ್ಲಿಕಾರ್ಜುನ ಇಕ್ಕಳಕಿ ಮತ್ತು ಸಿಬ್ಬಂದಿಗಳನ್ನು ಒಳಗೊಂಡ ತಂಡ ರಚಿಸಲಾಗಿತ್ತು.

ಈ ತಂಡ ತನಿಖೆ ನಡೆಸಿ ಸೆಂಟ್ರಲ್ ಜೇಲ್ ಪ್ರದೇಶದ ನಿವಾಸಿ ಅನೀಲಕುಮಾರ ಹಡಪದ, ತಾಡತೆಗನೂರ ಗ್ರಾಮದ ಸುಭಾಷ ಪೂಜಾರಿ, ಮಹೇಶ ಬಡಿಗೇರ, ಸೀತನೂರ ಗ್ರಾಮದ ಸಂತೋಷ ದೇವರಮನಿ ಎಂಬುವವರನ್ನು ಬಂಧಿಸಿ 1.41 ಲಕ್ಷ ರೂ.ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಂಡಿದೆ ಎಂದು ತಿಳಿಸಿದರು. ಈ ಪ್ರಕರಣವನ್ನು ಬೇಧಿಸಿ ದರೋಡೆಕೋರರನ್ನು ಬಂಧಿಸುವಲ್ಲಿ ಯಶಸ್ವಿಯಾಗಿರುವ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯವನ್ನು ಅವರು ಶ್ಲಾಘಿಸಿದರು.

ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ನಾಯಕ, ಎಸಿಪಿ ಡಿ.ಜಿ.ರಾಜಣ್ಣ, ಫರಹತಾಬಾದ ಪಿಐ ಮಲ್ಲಿಕಾರ್ಜುನ ಇಕ್ಕಳಕಿ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಕರಿಯಪ್ಪ ತಾತನವರ ಜಾತ್ರೆಗೆ ಅಗತ್ಯ ಸಿದ್ಧತೆಯಾಗಲಿ: ಬಸನಗೌಡ ದದ್ದಲ್




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜು 19 : ನಾಗರ ಪಂಚಮಿಯ ದಿನ ಜುಲೈ 29ರ ಸಂಜೆ 6.30ಕ್ಕೆ ಸಹಸ್ರಾರು ಭಕ್ತರೊಂದಿಗೆ ನಡೆಯುವ ಶ್ರೀ ಕರಿಯಪ್ಪ ತಾತನವರ ಜಾತ್ರಾ ರಥಮಹೋತ್ಸವನ್ನು ಭಕ್ತಿ ಶ್ರದ್ಧೆಯಿಂದ ಶಾಂತಿಯುತವಾಗಿ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದ ಶಾಸಕರ ಕಚೇರಿಯಲ್ಲಿ ಜುಲೈ 19ರಂದು ಶ್ರೀ ಕರಿಯಪ್ಪ ತಾತನವರ ಜಾತ್ರಾ ಮಹೋತ್ಸವದ ಪೂರ್ವಭಾವಿ ಸಿದ್ಧತಾ ಸಭೆ ನಡೆಸಿ ಅವರು ಮಾತನಾಡಿದರು. ಶ್ರೀ ಕರಿಯಪ್ಪ ತಾತನವರ ಜಾತ್ರೆಯು ನಮ್ಮ ಭಾಗದಲ್ಲಿ ವಿಶೇಷವಾಗಿ ನಡೆಯುತ್ತದೆ. ಈ ಜಾತ್ರೆಗೆ ರಾಜ್ಯದ ಬೇರೆ ಬೇರೆ ಭಾಗದ ಜನರು ಸೇರಿದಂತೆ ಅಂತಾರಾಜ್ಯದ ಜನರು ಸಹ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವುದರಿಂದ ಯಾವುದೇ ರೀತಿಯ ತೊಂದರೆಗಳು ಆಗದ ಹಾಗೆ ಈಗಿನಿಂದಲೇ ಅಧಿಕಾರಿಗಳು ಸಿದ್ಧತಾ ಕಾರ್ಯ ಮಾಡಬೇಕು.

ದೇವಸ್ಥಾನದ ಆವರಣದಲ್ಲಿ ಮತ್ತು ಸುತ್ತಲು ಶುಚಿತ್ವಕ್ಕೆ ಗಮನ ಕೊಡಬೇಕು. ರಥದ ಬೀದಿಯನ್ನು ಸರಿಯಾಗಿ ಸಿದ್ಧಪಡಿಸಬೇಕು. ಭಕ್ತರಿಗೆ ಶುದ್ಧವಾದ ಕುಡಿಯುವ ನೀರು ಪೂರೈಕೆಗೆ ವ್ಯವಸ್ಥೆ ಮಾಡಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಜನರು ಸೇರುವುದರಿಂದ ಜನರ ಸುರಕ್ಷತೆ ದೃಷ್ಟಿಯಿಂದ ಬ್ಯಾರಿಕೇಡ್ ಬಳಸಬೇಕು. ಮತ್ತು ಇನ್ನಿತರ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಶಾಸಕರು ಅಧಿಕಾರಿಗಳಿಗೆ ಆದೇಶಿಸಿದರು. ಜಾತ್ರೋತ್ಸವ ಸಂದರ್ಭದಲ್ಲಿ ವಿದ್ಯುತ್ ಪೂರೈಕೆ ಸರಿಯಾಗಿ ಆಗಬೇಕು. ಅಂಬುಲೆನ್ಸ್ ಸೇರಿದಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳು ವೈದ್ಯಕೀಯ ಚಿಕಿತ್ಸೆಗೆ ಏರ್ಪಾಡು ಮಾಡಬೇಕು ಭಕ್ತರಿಗೆ ಜಾತ್ರೆಗೆ ಬರಲು ಬಸ್ಸಿನ ಸೌಕರ್ಯ ಕಲ್ಪಿಸಲು ಕ್ರಮ ವಹಿಸಬೇಕು ಎಂದು ಶಾಸಕರು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಗ್ರಾಮಸ್ಥರಿಂದ ಸಲಹೆ: ಈ ಸಂದರ್ಭದಲ್ಲಿ ಗ್ರಾಮದ ಹಿರಿಯ ಮುಖಂಡರು, ಸುತ್ತಲಿನ ಗ್ರಾಮಸ್ಥರು, ನಾಮ ನಿರ್ದೇಶನ ಸದಸ್ಯರು, ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳು ಸಭೆಯಲ್ಲಿ ಭಾಗಿಯಾಗಿ ನಾನಾ ಸಲಹೆಗಳನ್ನು ನೀಡಿದರು.

ಸಭೆಯಲ್ಲಿ ಕಂದಾಯ ಇಲಾಖೆ, ಗ್ರಾಮೀಣಾಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, ಲೋಕೋಪಯೋಗಿ ಇಲಾಖೆ, ಪಂಚಾಯತ್ ರಾಜ್ ಎಂಜಿನಿಯರಿಂಗ್ ಇಲಾಖೆ, ಜೆಸ್ಕಾಂ ಇಲಾಖೆ, ಅಬಕಾರಿ ಇಲಾಖೆ ಮತ್ತು ಸಾರಿಗೆ ಇಲಾಖೆಯ ಅಧಿಕಾರಿಗಳು ಇದ್ದರು.

# ಆ. 11 ರಿಂದ ಕರ್ನಾಟಕ ವಿಧಾನಸಭೆಯ ಅಧಿವೇಶನ

ಬೆಂಗಳೂರು, ಜು 19: ಕರ್ನಾಟಕ ರಾಜ್ಯದ ಗೌರವಾನ್ವಿತ ರಾಜ್ಯಪಾಲರು ಭಾರತ ಸಂವಿಧಾನದ ಅನುಚ್ಛೇದ 174(1) ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ವಿಧಾನಸಭೆಯು 2025 ರ ಆಗಸ್ಟ್ 11 ರಂದು ಬೆಳಿಗ್ಗೆ 11.00 ಗಂಟೆಗೆ ಬೆಂಗಳೂರಿನ ವಿಧಾನಸೌಧದಲ್ಲಿರುವ ಸಭಾಂಗಣದಲ್ಲಿ ಸೇರಲು ಆದೇಶಿಸಿರುತ್ತಾರೆ.

ಅದರಂತೆ, ಹದಿನಾರನೇ ವಿಧಾನಸಭೆಯ ಏಳನೆ ಅಧಿವೇಶನವು ಆಗಸ್ಟ್ 11 ರಂದು ಬೆಳಿಗ್ಗೆ 11.00 ಗಂಟೆಗೆ ಬೆಂಗಳೂರಿನ ವಿಧಾನಸೌಧದಲ್ಲಿರುವ ಸಭಾಂಗಣದಲ್ಲಿ ಸಮಾವೇಶಗೊಳ್ಳಲಿದೆ.

ಆಗಸ್ಟ್ 11,12,13,18,19,20 ಮತ್ತು 22 ರಂದು ಸರ್ಕಾರಿ ಕಾರ್ಯಕಲಾಪಗಳು ಆಗಸ್ಟ್ 14 ಮತ್ತು 21 ರಂದು ಸರ್ಕಾರಿ / ಖಾಸಗಿ ಕಾರ್ಯಕಲಾಪಗಳು ಜರುಗಲಿವೆ. ಆಗಸ್ಟ್ 15 (ಸ್ವಾತಂತ್ರ್ಯ ದಿನಾಚರಣೆ) ಮತ್ತು 17 (ಭಾನುವಾರ) ದಂದು ಸಾರ್ವತ್ರಿಕ ರಜಾ ದಿನ ಇರುತ್ತದೆ. ಆಗಸ್ಟ್ 16 (ಶನಿವಾರ) ರಂದು ಕಾರ್ಯಕಲಾಪಗಳು ಇರುವುದಿಲ್ಲ ಎಂದು ಕರ್ನಾಟಕ ವಿಧಾನಸಭೆಯ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇವದಾಸಿ ಮಹಿಳೆಯರ ಆರೋಗ್ಯ ತಪಾಸಣಾ ಶಿಬಿರಕ್ಕೆ ಚಾಲನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜು.19:ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ದೇವದಾಸಿ ಪುನರ್ವಸತಿ ಯೋಜನೆ ಕಲಬುರಗಿ ಜಿಲ್ಲಾ ಕಚೇರಿ ವತಿಯಿಂದ ಮಾಜಿ ದೇವದಾಸಿ ಮಹಿಳೆಯರಿಗಾಗಿ ಇತ್ತೀಚೆಗೆ ಶಹಾಬಾದ ತಾಲೂಕಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಹಮ್ಮಿಕೊಳ್ಳಲಾದ ತಾಲೂಕು ಮಟ್ಟದ ಸಾಮಾನ್ಯ ಆರೋಗ್ಯ ತಪಾಸಣಾ ಶಿಬಿರ ಕಾರ್ಯಕ್ರಮವನ್ನು ಶಹಾಬಾದ ಆಯುಷ ವೈದ್ಯಾಧಿಕಾರಿ ಡಾ. ಅಶ್ವಿನಿ ಅವರು ಉದ್ಘಾಟಿಸಿದರು. ನಂತರ ಅವರು ಮಾತನಾಡಿ, ಪ್ರತಿಯೊಬ್ಬ ಹೆಣ್ಣು ಮಕ್ಕಳು 40 ವರ್ಷ ದಾಟಿದ ನಂತರ ಬಿಪಿ, ಶುಗರ ತಪಾಸಣೆ ಮಾಡಿಕೊಳ್ಳಬೇಕು. ದಿನನಿತ್ಯ ಕರಿದ ಪದಾರ್ಥಗಳನ್ನು ಸೇರಿಸಬಾರದು. ಹೆಚ್ಚಿನ ಪ್ರಮಾಣದಲ್ಲಿ ತರಕಾರಿ ಬಳಕೆ ಮಾಡಬೇಕು ಎಂದರು. ಆರ್.ಕೆ.ಎಸ್.ಕೆ ಕೌನ್ಸಲರ್ ಅಂಬರೀಷ ಅವರು ಮಾತನಾಡಿ, ಮಿತವಾದ ಆಹಾರ ಬಳಕೆ ಮತ್ತು ಕಣ್ಣಿನ ದೋಷ ಕಂಡುಬಂದಲ್ಲಿ ತಮ್ಮ ಸಮೀಪದ ಆಸ್ಪತ್ರೆಗೆ ಬಂದು ಚಿಕಿತ್ಸೆ ಪಡೆಯಬೇಕು. ಸರಕಾರದ ನಿರ್ದೇಶನದಂತೆ ಉಚಿತ ಕಣ್ಣಿನ ತಪಾಸಣೆ ಶಿಬಿರವನ್ನು ಹಮ್ಮಿಕೊಳ್ಳಲಾಗುತ್ತಿದ್ದು, ತಾವು ಕೂಡಾ ಶಿಬಿರದಲ್ಲಿ

ಪಾಲ್ಗೊಂಡು ಚಿಕಿತ್ಸೆಗೆ ಒಳಪಟ್ಟಿದ್ದಲ್ಲಿ ಉಚಿತವಾಗಿ ಔಷದ ಉಪಚಾರ ನೀಡುವುದರ ಜೊತೆಗೆ ಕನ್ನಡಗಳನ್ನು ವಿತರಿಸಲಾಗುವದೆಂದು ಅವರು ತಿಳಿಸಿದರು. ಶಿಬಿರದಲ್ಲಿ ಎನ್.ಸಿ.ಡಿ ವೈದ್ಯಾಧಿಕಾರಿ ಡಾ. ಶ್ವೇತಾ, ಲ್ಯಾಬ್ ಟೆಕ್ನಿಶಿಯನ್ ಬಸಯ್ಯ ಹಿರೇಮಠ, ಆಪ್ತ ಸಮಾಲೋಚಕಿ ಸುಮಂಗಲಾ, ದಂತ ವೈದ್ಯಾಧಿಕಾರಿ ಸರಿತಾ, ಸ್ಟಾಫ್ ನರ್ಸ್ ಸುಜಾತಾ ಎಫ್.ಡಿ.ಎ. ರಾದ ಮಮತಾ ಹಾಗೂ ಪಿ.ಇ.ಓ. ರಾದ ಶರಣಮ್ಮ ಅವರು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.